ಸಂಪುಟ : 13 Volume ಸಂಚಿಕೆ : 223 Issue ಪುಟಗಳು : 08 Pages ಭಾನುವಾರ 19 ಅಕ್ಟೋಬರ್ 2025 ₹2 PRGINO.120927(RNINO:KARKAN/2011/48371) BDR/054/2026-20274 www.mallammanudi.in mallammanudi@gmail.com 9448604450

ಬೀದರ । ಕಲಬುರಗಿ । ಯಾದಗಿರಿ । ರಾಯಚೂರು । ಬಳ್ಳಾರಿ । ವಿಜಯನಗರ । ಕೊಪ್ಪಳ & ಬಾಗಲಕೋಟೆ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

ಬೆಳಗು

ನಿಮ್ಮ ಹಾದಿಯಲ್ಲಿ ಮುಳ್ಳು ಚೆಲ್ಲಿದವರ ಹಾದಿಯಲ್ಲಿ ಹೂ ಚೆಲ್ಲಿ
– ಸ್ವಾಮಿ ವಿವೇಕಾನಂದ .

ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

2. ಖಾಸಗಿ ಬಸ್‌ಗಳ ವಿರುದ್ಧ ಕ್ರಮಕ್ಕೆ ಸೇನೆ ಆಗ್ರಹ

4. ಯೋಜನೆಯ ಪ್ರತಿಜ್ಞಾ ವಿಧಿ ಬೋಧನೆ

8. ಖದೀರಗೆ ಎ.ಎಂ.ಯು. ರಾಷ್ಟ್ರೀಯ ಪ್ರಶಸ್ತಿ ಪ್ರದಾನ

ಗುಣಮಟ್ಟದ ವಾಯು, ನೀರು ಅತ್ಯಗತ್ಯ: ಸ್ವಾಮಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಅ. 18: ಪರಿಸರವನ್ನು ಉಳಿಸಿಕೊಳ್ಳಬೇಕಾದುದು ಅತ್ಯಂತ ಅಗತ್ಯ ಕೆಲಸವಾಗಿದೆ. ಗುಣಮಟ್ಟದವಾಯು ಮತ್ತು ಗುಣಮಟ್ಟದ ನೀರು ಇಲ್ಲದ ಭವಿಷ್ಯವನ್ನು ಊಹಿಸಿಕೊಳ್ಳಲು ಸಾಧ್ಯವಿಲ್ಲ ಎಂದು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಅಧ್ಯಕ್ಷ ಪಿಎಂನರೇಂದ್ರಸ್ವಾಮಿ ತಿಳಿಸಿದರು.

ಶನಿವಾರ ಕಲಬುರಗಿ ನಗರದ ರಿಂಗ್ ರಸ್ತೆಯ ಕೆ.ಸಿ.ಟಿ. ಇಂಜಿನಿಯರಿಂಗ್ ಕಾಲೇಜು ಮೈದಾನದಲ್ಲಿ ಕಲಬುರಗಿ ಮತ್ತು ಯಾದಗಿರಿ ಜಿಲ್ಲಾಡಳಿತ ಹಾಗೂ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಇವುಗಳ ಸಹಯೋಗದಲ್ಲಿ ಕರ್ನಾಟಕ ರಾಜ್ಯ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಸ್ಥಾಪನೆಗೊಂಡು 50 ವರ್ಷಗಳಾದ ಹಿನ್ನೆಲೆಯಲ್ಲಿ ಸುವರ್ಣ ಮಹೋತ್ಸವ ಕಾರ್ಯಕ್ರಮದಲ್ಲಿ ಪ್ರಾಸ್ತಾವಿಕ ಭಾಷಣ ಮಾಡಿದ ಪಿಎಂ ನರೇಂದ್ರಸ್ವಾಮಿ ಅವರು, ಪರಿಸರದ ಬಗ್ಗೆ ಜಾಗೃತಿ ಮೂಡಿಸುವ ಅಗತ್ಯವನ್ನು ಮನಗಂಡು ರಾಜ್ಯಾದ್ಯಂತ ಸುವರ್ಣ ಮಹೋತ್ಸವವನ್ನು ಆಚರಿಸಲಾಗುತ್ತಿದೆ ಎಂದು ಹೇಳಿದರು.

ಕಲ್ಬುರ್ಗಿ ಜಿಲ್ಲೆಯಲ್ಲಿ 8 ಸಿಮೆಂಟ್ ಕಾರ್ಖಾನೆಗಳು ಒಟ್ಟು 349 ಕಾರ್ಖಾನೆಗಳಿವೆ. ಈ ಕೈಗಾರಿಕೆಗಳು ಬಿಡುತ್ತಿರುವ ನೀರಿನಿಂದ ಆಗುತ್ತಿರುವ ಜಲ ಮಾಲಿನ್ಯ ಮತ್ತು ಹೊಗೆಯಿಂದ ಆಗುತ್ತಿರುವ ವಾಯು ಮಾಲಿನ್ಯದ ಬಗ್ಗೆ ಮಂಡಳಿಯ ಪ್ರಾದೇಶಿಕ ಕಚೇರಿಗಳು ನಿಗಾ ಇಟ್ಟಿವೆ. ಇದಲ್ಲದೆ ನದಿ ನೀರಿನ ಮಾಲಿನ್ಯವನ್ನು ಮಾಪನ ಮಾಡುವುದಕ್ಕಾಗಿ ಪ್ರತಿ ತಿಂಗಳು ನದಿ ನೀರಿನ ಮಾದರಿಗಳನ್ನು ಸಂಗ್ರಹಿಸಿ ವಿಶ್ಲೇಷಣೆ ಮಾಡಲಾಗುತ್ತದೆ. ಅಫಜಲಪೂರ ತಾಲ್ಲೂಕಿನ ಘಾಣಗಾಪೂರದಲ್ಲಿ ಹರಿಯುವ ಭೀಮಾ ನದಿ ನೀರಿನ ಗುಣಮಟ್ಟವನ್ನು ತಪಾಸಿಸುವುದಕ್ಕಾಗಿ ಖಚಿಟ ಖಿ ಚಿಣಡಿ ಕಿಚಿಟಿಣಥಿಒಟಿಣಡಿಟಿಉಪಕರಣವನ್ನು ಅಳವಡಿಸಲಾಗಿರುತ್ತದೆ. ವಾಯು ಮಾಲಿನ್ಯಕ್ಕೆ ಸಂಬಂಧಿಸಿದಂತೆ ಕಲ್ಬುರ್ಗಿಯನ್ನು Kq í||bqq| ಅಣಥಿ ಎಂದುಕರೆಯಲಾಗುತ್ತದೆ. ಈ ಪ್ರಮಾಣದ ಧೂಳು/ಮಾಲಿನ್ಯ ತಗ್ಗುವಿಕೆಗೆ ಅತೀ ಹೆಚ್ಚಿನ ಸಂಖ್ಯೆಯಲ್ಲಿ ಗಿಡಮರಗಳನ್ನು ನೆಟ್ಟಿರುವುದು ಕಾರಣವಾಗಿದೆ ಎಂದು ವಿವರಿಸಿದರು.

ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ನಿಷೇಧಿತ ಏಕ ಬಳಕೆ ಪ್ಲಾಸ್ಟಿಕ್ ಉತ್ಪಾದಿಸುವ ಯಾವುದೇ ಕಾರ್ಖಾನೆಗಳಿಗೆ ಅನುಮತಿಯನ್ನು ನೀಡಿರುವುದಿಲ್ಲ. ನಿಷೇಧಿತ ಏಕ ಬಳಕೆ ಪ್ಲಾಸ್ಟಿಕ್ ಬಳಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಜಿಲ್ಲಾಡಳಿತ ಹಾಗೂ ಪೌರಾಡಳಿತ ಇಲಾಖೆಗಳ ಸಹಯೋಗದಲ್ಲಿ ಪ್ರತಿ 15 ದಿನಗಳಿಗೊಮ್ಮೆ ದಾಳಿ ಮಾಡಿ ದಂಡ ವಿಧಿಸಲಾಗುತ್ತದೆ. ಅರಣ್ಯ ಇಲಾಖೆ ಕಲ್ಬುರ್ಗಿ ಜಿಲ್ಲೆಯನ್ನು ಪ್ಲಾಸ್ಟಿಕ್ ಮುಕ್ತ ಜಿಲ್ಲೆ ಎಂದು ಘೋಷಿಸಿದ್ದಾರೆ ಎನ್ನುವುದು ಹೆಮ್ಮೆ ಪಡುವ ವಿಚಾರ ಎಂದು ನರೇಂದ್ರಸ್ವಾಮಿ ತಿಳಿಸಿದರು.

ಸುವರ್ಣ ಮಹೋತ್ಸವದ ಅಂಗವಾಗಿ ಕಲ್ಬುರ್ಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಶಾಲಾ ಮತ್ತು ಕಾಲೇಜು ಮಟ್ಟದ ವಿದ್ಯಾರ್ಥಿಗಳಲ್ಲಿ ಅನೇಕ ರೀತಿಯ ಪರಿಸರ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಗಣೇಶ ಮತ್ತು ದೀಪಾವಳಿ ಹಬ್ಬಗಳನ್ನು 2ನೇ ಪುಟನೋಡಿ

ಲೈನ್‌ಮ್ಯಾನ್ ಗಳೇ ರೈತರಿಂದ ಹಣ ಪಡೆಯಬೇಡಿ :ರೈತರ ಮನವಿ

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ :18 ತಾಲ್ಲೂಕಿನ ವಿವಿಧ ಗ್ರಾಮಗಳ ರೈತರು ವಿದ್ಯುತ್ ಇಲಾಖೆಯ ಕೆಲ ಲೈನ್ ಮ್ಯಾನ್‌ಗಳು ಟ್ರಾನ್ಸ್ ಫಾರ್ಮರ್ ದುರಸ್ತಿ, ವೈರ್ ಬದಲಾವಣೆ, ಫ್ಯೂಸ್ ಹಾಕುವುದು ಮುಂತಾದ ಕಾಮಗಾರಿಗಳಿಗೆ ರೈತರಿಂದ ಹಣ ಕೇಳುತ್ತಿರುವ ಬಗ್ಗೆ ರೈತರಿಂದ ಆಕ್ರೋಶ ವ್ಯಕ್ತವಾಗುತ್ತಿದೆ.

ರೈತರು ಸರ್ಕಾರವೇ ಈ ಎಲ್ಲಾ ವೆಚ್ಚವನ್ನು ಭರಿಸುತ್ತದೆ ಎಂಬ ನಿಯಮವಿದ್ದರೂ ಕೊಡಾ ರೈತರಿಂದ ಹಣ ಕೆಳುವ ಪದ್ದತಿ ನಿಲ್ಲುತ್ತಿಲ್ಲ. ಲೈನ್ ಮ್ಯಾನ್ ಗಳಿಗೆ ಸರ್ಕಾರ ತಿಂಗಳಿಗೆ ಸಾಕಷ್ಟು ಸಂಬಳ ನೀಡುತ್ತಿದ್ದರೂ ಕೊಡಾ ರೈತರ ಹತ್ತಿರ ಹಣ ಬೇಡುವುದು ಎಷ್ಟರ ಮಟ್ಟಿಗೆ ಸರಿ. ಈ ಬಗ್ಗೆ ಅಧಿಕಾರಿಗಳು ಲೈನ್ ಮ್ಯಾನ್ ಗಳು ಮತ್ತು ರೈತರ ಕಾರ್ಯಗಾರ ನಡೆಯುವುದು ಸೂಕ್ತ ಎಂಬ ಅನಿಸಿಕೆ ರೈತರದಾಗಿದೆ, ಗ್ರಾಮೀಣ ಭಾಗದ ರೈತರು ಈಗಾಗಲೇ ಬೆಳೆ ನಷ್ಟದಿಂದ ಸಂಕಷ್ಟದಲ್ಲಿದ್ದಾರೆ. ಇಂತಹ ಸಂದರ್ಭದಲ್ಲೂ ಲೈನ್ ಮ್ಯಾನ್‌ಗಳಿಂದ ಹಣದ ಬೇಡಿಕೆ ನಿಲ್ಲಬೇಕು ಎಂದು ಅವರು ಆಗ್ರಹಿಸಿದ್ದಾರೆ.

ಸಂಬಂಧಪಟ್ಟ ವಿಭಾಗದ ಹಿರಿಯ ಅಧಿಕಾರಿಗಳು ಈ ವಿಷಯಕ್ಕೆ ಗಂಭೀರವಾಗಿ ಸ್ಪಂದಿಸಿ ತನಿಖೆ ನಡೆಸಿ ಕ್ರಮ ಕೈಗೊಳ್ಳುವಂತೆ ರೈತರು ಮನವಿ ಮಾಡಿದ್ದಾರೆ.

ಇದೆ ರೀತಿ ನಡೆದರೆ. ರೈತರು ದಂಗೆ ಎಳುವ ದಿನಗಳು ದೊರವಿಲ್ಲ ಎಂಬ ಸಂದೇಶ ರೈತರು ತಿಳಿಸಿದ್ದಾರೆ.

ವಿದ್ಯೆ ಯಾರೊಬ್ಬರ ಸ್ವತ್ತು ಅಲ್ಲ: ಸಿಎಂ

ಮಲ್ಲಮ್ಮ ನುಡಿ ವಾರ್ತೆ

ಮೈಸೂರು ಅ 18 :ವಿದ್ಯೆ ಯಾರೊಬ್ಬರ ಸ್ವತ್ತು ಅಲ್ಲ. ಎಲ್ಲರಿಗೂ ಸಮಾನ ಅವಕಾಶಗಳು ದೊರೆತಾಗ ಮಾತ್ರ ಸಮ ಸಮಾಜದ ನಿರ್ಮಾಣ ಮಾಡಲು ಸಾಧ್ಯ. ಎಲ್ಲರೂ ಶಿಕ್ಷಣ ಪಡೆಯಬೇಕು. ಸಮಾನ ಅವಕಾಶಗಳನ್ನು ನೀಡಿ ಎಲ್ಲರಿಗೂ ಶಕ್ತಿ ನೀಡಲು ಗ್ಯಾರೆಂಟಿ ಯೋಜನೆಗಳನ್ನು ಜಾರಿಗೆ ತರಲಾಗಿದೆ ಎಂದು ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ತಿಳಿಸಿದರು.

ಇಂದು ಮಾನಸ ಗಂಗೋತ್ರಿಯ ಡಾ. ಬಿ ಆರ್ ಅಂಬೇಡ್ಕರ್ ಸಂಶೋಧನಾ ಹಾಗೂ ವಿಸ್ತರಣಾ ಕೇಂದ್ರದ ವಿಶ್ವ ಜ್ಞಾನಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ರಜತ ಮಹೋತ್ಸವ ಹಾಗೂ ನೂತನ ಜ್ಞಾನ ದರ್ಶನ ಕಟ್ಟಡದ ಉದ್ಘಾಟನೆ

ನೆರವೇರಿಸಿ ಅವರು ಮಾತನಾಡಿದರು. ಅಂಬೇಡ್ಕರ್ ಅವರು ವಿಶ್ವಜ್ಞಾನಿಗಳಾಗಿದ್ದರು. ಆದ್ದರಿಂದ ವಿಶ್ವಜ್ಞಾನಿ ಅಂಬೇಡ್ಕರ್ ಸಭಾಂಗಣ ಎಂದು ನಿರ್ದಿಷ್ಟವಾಗಿ ಬರೆಯಲು ಸಲಹೆ ನೀಡಿದ್ದೇನೆ. ಸಮಾಜವನ್ನು ವೈಜ್ಞಾನಿಕವಾಗಿ ಅರ್ಥ ಮಾಡಿಕೊಂಡಿದ್ದ ವಿಶ್ವ ಜ್ಞಾನಿ ಅಂಬೇಡ್ಕರ್. ಸಮಾಜದಲ್ಲಿ ಎಲ್ಲರಿಗೂ ಸಮಾನ ಅವಕಾಶಗಳು ಇರಲಿಲ್ಲ. ಆದ್ದರಿಂದ ಸಮಾಜದಲ್ಲಿ ಅಸಮಾನತೆ ನಿರ್ಮಾಣ ಆಯಿತು. ಅಂಬೇಡ್ಕರ್ ಅವರು ತಾವು ಕಲಿತ ವಿದ್ಯೆಯನ್ನು ಸಮಾಜದ ಒಳಿತಿಗಾಗಿ ಬಳಕೆ ಮಾಡಿದ್ದಾರೆ. ಜನವರಿ 26, 1950 ರಂದು ಸಂವಿಧಾನ ಜಾರಿಗೆ ಬರುತ್ತದೆ. ಅಂದು ನಾವು ವೈರುಧ್ಯತೆ ಇರುವ ಸಮಾಜಕ್ಕೆ ಕಾಲು ಇಡುತ್ತೇವೆ ಎಂದು ಸಂವಿಧಾನ ಅಂಗೀಕಾರ ಸಭೆಯಲ್ಲಿ ತಿಳಿಸಿದ್ದರು. ಇಂದು ಸಹ ಸಮಾಜದಲ್ಲಿ ವೈರುಧ್ಯತೆ ಇದೆ.

ಆದರೆ ಇಂದು ಸ್ವಲ್ಪ ಕಡಿಮೆ ಆಗಿದೆ. 10 ಸಂಪುಟಗಳಲ್ಲಿ ಇರುವ ಭಾರತ ಸಂವಿಧಾನವನ್ನು ಕನ್ನಡಕ್ಕೆ ತರ್ಜುಮೆ ಮಾಡಿಸಿದ್ದೇನೆ. ಎಲ್ಲರೂ ಅದನ್ನು ಓದಬೇಕು. ಅಂಬೇಡ್ಕರ್ ಅವರು ಪ್ರಪಂಚದ ಎಲ್ಲಾ ದೇಶಗಳ ಸಂವಿಧಾನವನ್ನು ಓದಿ ನಮ್ಮ ದೇಶಕ್ಕೆ ಅಗತ್ಯವಾದ ಸಂವಿಧಾನವನ್ನು ರಚನೆ ಮಾಡಿ ನೀಡಿದ್ದಾರೆ.

ನಮ್ಮದು ಶ್ರೇಷ್ಠ ಸಂವಿಧಾನ. ಇದನ್ನು ಉಳಿಸಿ ಬೆಳೆಸುವುದು ನಮ್ಮೆಲ್ಲರ ಜವಾಬ್ದಾರಿ ಎಂದು ತಿಳಿಸಿದರು. ಬಾಬಾ ಸಾಹೇಬ್ ಸ್ಕೂಲ್ ಆಫ್ ಎಕನಾಮಿಕ್ಸ್ ಅನ್ನು ಸ್ಥಾಪನೆ ಮಾಡಿದ್ದೇನೆ. ಎಲ್ಲಿಯವರೆಗೆ ಜಾತಿ ವ್ಯವಸ್ಥೆ ಇರುತ್ತದೆ ಅಲ್ಲಿಯವರೆಗೆ ಮೀಸಲಾತಿ ಇರಬೇಕು.

ಜಾತಿ ವ್ಯವಸ್ಥೆ ಇರುವವರೆಗೆ ಸಮಾನತೆ ಬರಲು ಸಾಧ್ಯವಿಲ್ಲ. ಆದ್ದರಿಂದ ಜಾತಿ ವ್ಯವಸ್ಥೆಯನ್ನು ತೊಡೆದು ಹಾಕಬೇಕು. ಜಾತಿ ವ್ಯವಸ್ಥೆ ಜಡತ್ವದಿಂದ ಕೂಡಿದೆ. ಅದಕ್ಕೆ ಚಲನೆ ಇಲ್ಲ. ಇದು ಆಳವಾಗಿ ಬೇರು ಬಿಟ್ಟಿದೆ. ಬಸವಣ್ಣ ಅವರು ಜಾತಿ ವ್ಯವಸ್ಥೆ ತೊಡೆದು ಹಾಕುವಂತೆ 850 ವರ್ಷಗಳ ಹಿಂದೆಯೇ ಹೇಳಿದ್ದರು. ಆದರೂ ಅದು ಇನ್ನೂ ಸಾಧ್ಯವಾಗಿಲ್ಲ. 2ನೇ ಪುಟನೋಡಿ

ಭವಿಷ್ಯದ ಪೀಳಿಗೆಗೆ ಪರಿಸರ ಸಂರಕ್ಷಣೆ ಅಗತ್ಯ : ಖಂಡ್ರೆ

ಮಲ್ಲಮ್ಮ ನುಡಿ ವಾರ್ತೆ

ಬೀದರ, ಅ.18: ಭವಿಷ್ಯದ ಪೀಳಿಗೆಗೆ ಪರಿಸರ ಸಂರಕ್ಷಣೆ ಅತ್ಯಗತ್ಯ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ. ಖಂಡ್ರೆ ಅವರು ತಿಳಿಸಿದರು.

ಅವರು ಶನಿವಾರ ನಗರದ ನೆಹರು ಕ್ರೀಡಾಂಗಣದಲ್ಲಿ ಜಿಲ್ಲಾಡಳಿತ ಹಾಗೂ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಸ್ಥಾಪನೆಗೊಂಡು 50 ವರ್ಷಗಳಾದ ಹಿನ್ನೆಲೆಯಲ್ಲಿ 'ಸುವರ್ಣ ಮಹೋತ್ಸವ' ಕಾರ್ಯಕ್ರಮವನ್ನು ಉದ್ಘಾಟಿಸಿ ಸಂವಿಧಾನದ ಪ್ರತಿ ಬೋಧಿಸಿ ಮಾತನಾಡಿದರು.

ಶುದ್ಧ ಗಾಳಿ, ನೀರು, ಆಹಾರ ನೀಡುವುದರ ಮೂಲಕ ಭವಿಷ್ಯದ ಜನರಿಗೆ ಉತ್ತಮ ಆರೋಗ್ಯ ನೀಡುವುದು ನಮ್ಮ ಕರ್ತವ್ಯವಾಗಿದೆ ಇಂದಿನ ಜನರು ಎದುರುಸುತ್ತಿರುವ ಪ್ರಮುಖ ಸಮಸ್ಯೆ ಎಂದರೆ ಅದು ಜಾಗತಿಕ ತಾಪಮಾನ. ನೈಸರ್ಗಿಕ ಸಂಪನ್ಮೂಲಗಳ ದುರ್ಬಳಕೆ, ಅತಿಯಾದ ಇಂಧನಗಳ ಬಳಕೆ, ರಾಸಾಯನಿಕ ಕೈಗಾರಿಕೆಗಳಿಂದ ಘನ ವಾಯು ಸೋಸುವಿಕೆಯಿಂದಾಗಿ ತಾಪಮಾನ ಹೆಚ್ಚಳ ಆಗುತ್ತಿದೆ. ಏಕ ಬಳಕ ಪ್ಲಾಸ್ಟಿಕ್ ಬಳಕೆ ಮಾಡಬಾರದು ಘನತ್ಯಾಜ್ಯ ಸಂಸ್ಕರಿಸಿ 2ನೇ ಪುಟನೋಡಿ

ಫ್ಲೆಕ್ಸ್ ಬ್ಯಾನರ್ ಭಗವಾಧ್ವಜ ತೆರವು: ಬಿಜೆಪಿ ಕಿಡಿ

ಕಲಬುರಗಿ: ಅ.18: ಜಿಲ್ಲೆಯ ಚಿತ್ತಾಪುರದಲ್ಲಿ ಆರ್‌ಎಸ್‌ಎಸ್ ಅಳವಡಿಸಿದ್ದ ಬ್ಯಾನರ್‌ಗಳು ಮತ್ತು ಭಗವಾಧ್ವಜಗಳನ್ನು ತೆಗೆದುಹಾಕಲಾಗಿದ್ದು, ಈ ಸಂಬಂಧ ರಾಜ್ಯ ಬಿಜೆಪಿ ಶನಿವಾರ ಸಚಿವ ಪ್ರಿಯಾಂಕ್ ಖರ್ಗೆ ಅವರನ್ನು ತೀವ್ರ ತರಾಟೆಗೆ ತೆಗೆದುಕೊಂಡಿದೆ. ಆದರೆ ಕೇಸರಿ ಸಂಘಟನೆಯು ಈ ಕಾರ್ಯಕ್ರಮಕ್ಕೆ ಅನುಮತಿ ಪಡೆದಿಲ್ಲ ಎಂದು ಕಾಂಗ್ರೆಸ್ ಮುಖಂಡರು ಹೇಳಿದ್ದಾರೆ.

ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ಮತ್ತು ಸರ್ಕಾರಿ ಸ್ಥಳಗಳಲ್ಲಿ ಯಾವುದೇ ಕಾರ್ಯಕ್ರಮ ನಡೆಸಲು ಅನುಮತಿ ಕಡ್ಡಾಯ ಎಂಬ ನಿಯಮ ಜಾರಿಗೆ ತರಲು ನಿರ್ಧರಿಸಿದ ಸಮಯದಲ್ಲಿ ಆರ್‌ಎಸ್‌ಎಸ್ ಭಾನುವಾರ ಚಿತ್ತಾಪುರದಲ್ಲಿ 'ಪಥ ಸಂಚಲನ' ಕಾರ್ಯಕ್ರಮ ಆಯೋಜಿಸಿದ್ದು, ಇದು ತನ್ನ ಶಕ್ತಿ ಪ್ರದರ್ಶನವೆಂದು ಪರಿಗಣಿಸಲಾದ ರೂಟ್ ಮಾರ್ಚ್ ಆಗಿದೆ.

ನಾಳೆ 'ಪಥಸಂಚಲನದ ಹಿನ್ನೆಲೆಯಲ್ಲಿ ಆರ್‌ಎಸ್‌ಎಸ್ ಇಂದು ಚಿತ್ತಾಪುರದಲ್ಲಿ ಭಗವಾಧ್ವಜ, ಫ್ಲೆಕ್ಸ್ , ಬ್ಯಾನರ್‌ಗಳು ಮತ್ತು ಪೋಸ್ಟರ್‌ಗಳನ್ನು ಹಾಕಿತ್ತು. ಆದರೆ ಪೊಲೀಸರು ಕಾರ್ಯಕ್ರಮಕ್ಕೆ ಅನುಮತಿ ಪಡೆದಿಲ್ಲ ಎಂದು ಅವುಗಳನ್ನು ತೆಗೆದುಹಾಕಿದ್ದಾರೆ.

ಚಿತ್ತಾಪುರ ಖರ್ಗೆ ಕುಟುಂಬದ ರಿಪಬ್ಲಿಕ್ ಆಗಿದೆಯೇ? ಪ್ರಿಯಾಂಕ್ ಖರ್ಗೆ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ ಪ್ರತಿಪಕ್ಷ ನಾಯಕ ಆರ್. ಅಶೋಕ್ ಅವರು, ಚಿತ್ತಾಪುರ ಭಾರತದಲ್ಲಿದೆಯೇ ಅಥವಾ ಖರ್ಗೆ ಕುಟುಂಬದ ರಿಪಬ್ಲಿಕ್ ಆಗಿದೆಯೇ? ಎಂದು ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದಾರೆ.

ಇದಕ್ಕೆ ಪ್ರತಿಕ್ರಿಯಿಸಿದ ಖರ್ಗೆ, (ಆರ್‌ಎಸ್‌ಎಸ್) ಅವರು ಅದಕ್ಕೆ ಅನುಮತಿ ಪಡೆದಿದ್ದಾರೆಯೇ ಎಂದು ಕೇಳಿದ್ದಾರೆ. ಅಧಿಕಾರಿಗಳಿಂದ ಅನುಮತಿ ಪಡೆಯದೆ ಪೋಸ್ಟರ್‌ಗಳು ಮತ್ತು ಬ್ಯಾನರ್‌ಗಳನ್ನು ಹಾಕಿದ್ದಕ್ಕಾಗಿ ದಂಡ ವಿಧಿಸಲಾಗಿದೆ ಎಂದು ಅವರು ಹೇಳಿದರು. 2ನೇ ಪುಟನೋಡಿ

ಡಿ. 7ಕ್ಕೆ ಶಿಕ್ಷಕರ ಅರ್ಹತಾ ಪರೀಕ್ಷೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ಅ.18: ಡಿಸೆಂಬರ್ 7ರಂದು ಶಿಕ್ಷಕರ ಅರ್ಹತಾ ಪರೀಕ್ಷೆ ನಡೆಸಲು ಶಿಕ್ಷಣ ಇಲಾಖೆ ದಿನಾಂಕ ಘೋಷಣೆ ಮಾಡಿದೆ.

ಈ ಸಂಬಂಧ ಶಾಲಾ ಶಿಕ್ಷಣ ಇಲಾಖೆ ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿದೆ. ಡಿ.7ಕ್ಕೆ ಟಿಇಟಿ ಪರೀಕ್ಷೆ ನಡೆಸಲು ದಿನಾಂಕ ನಿಗದಿ ಮಾಡಿದ್ದು, ಡಿ.31ಕ್ಕೆ ಫಲಿತಾಂಶ ಪ್ರಕಟವಾಗಲಿದೆ. ಶಿಕ್ಷಕರ ಅರ್ಹತಾ ಪರೀಕ್ಷೆ ಕುರಿತ ಅಧಿಸೂಚನೆ ಹೊರಡಿಸಲಾಗುತ್ತಿದ್ದು, ಅಭ್ಯರ್ಥಿಗಳು ಅ.23ರಿಂದ ನ.09ರವರೆಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಕಲ್ಯಾಣ ಕರ್ನಾಟಕ ಪ್ರದೇಶದ ಮತ್ತು ಉಳಿದ ಶಿಕ್ಷಕರ ಹುದ್ದೆಗಳ ಭರ್ತಿಗೂ ಸಿಇಟಿ ಪರೀಕ್ಷೆಯ ಮೂಲಕ ಶೀಘ್ರದಲ್ಲೇ ಕ್ರಮ ಕೈಗೊಳ್ಳಲಾಗುವುದು ಎಂದು ಇಲಾಖೆ ಮಾಹಿತಿ ನೀಡಿದೆ.

ಸಚಿವಸ್ಥಾನಕ್ಕಾಗಿ ಎಸ್‌ಐಟಿದಾಳಿ: ಗುತ್ತೇದಾರ್

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಅ.18: ಆಳಂದ ಕ್ಷೇತ್ರದಲ್ಲಿ ಯಾವುದೇ ಅಭಿವೃದ್ಧಿಯಾಗದೇ ಇದ್ದರೂ ಸಹ ಸಚಿವ ಸಂಪುಟಕ್ಕೆ ಸೇರಲು ಲೋಕಸಭೆಯಲ್ಲಿನ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರನ್ನು ಮೆಚ್ಚಿಸುವ ಉದ್ದೇಶದಿಂದ ಮತಗಳ್ಳತನದ ಅಭಿಯಾನದ ಅಂಗವಾಗಿ ಆಳಂದ ಮತಕ್ಷೇತ್ರವನ್ನು ಸಾಕ್ಷಿಯನ್ನಾಗಿ ಮಾಡಿಕೊಂಡು ತಮ್ಮ ಮೇಲೆ ವಿಶೇಷ ತನಿಖಾ ದಳದ ಕಾರ್ಯಾಚರಣೆಯನ್ನು ಆರಂಭಿಸಿದ್ದಾರೆ. ಶಾಸಕ ಬಿ.ಆರ್. ಪಾಟೀಲ್ ಎಂದು ಬಿಜೆಪಿಯ ಮಾಜಿ ಶಾಸಕ ಸುಭಾಷ್ ಆರ್. ಗುತ್ತೇದಾರ್ ಅವರು ಆರೋಪಿಸಿದರು. ನಗರದ ಪತ್ರಿಕಾ ಭವನದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ ಶುಕ್ರವಾರ ನನ್ನ ಪುತ್ರ ಹರ್ಷಾನಂದ್ ಗುತ್ತೇದಾರ್ ಮತ್ತು ಸಂತೋಷ ಗುತ್ತೇದಾರ್ ಅವರ ಮನೆಗಳ ಮೇಲೆ ವಿಶೇಷ ತನಿಖಾ ತಂಡದವರು ಕಾರ್ಯಾಚರಣೆ ಕೈಗೊಂಡಿದ್ದಾರೆ. ಕಾರ್ಯಾಚರಣೆಯ ವೇಳೆ ಯಾವುದೇ ರೀತಿಯಲ್ಲಿ ದಾಖಲೆಗಳು ಎಸ್‌ಐಟಿ ತನಿಖಾ ತಂಡಕ್ಕೆ ದೊರಕಿಲ್ಲ ಎಂದು ಸ್ಪಷ್ಟಪಡಿಸಿದರು. ದಾಳಿಯ ಕಾಲಕ್ಕೆ ಮತದಾರರಪಟ್ಟಿ ದೊರಕಿದೆ. ನಾನು ಮಾಜಿ ಶಾಸಕನಾಗಿರುವುದರಿಂದ ಕ್ಷೇತ್ರದ ಮತದಾರರಪಟ್ಟಿಯನ್ನು ಹೊಂದುವುದರಲ್ಲಿ ಯಾವುದೇ ರೀತಿಯಲ್ಲಿ ವಿವಾದವಲ್ಲ. ಅಲ್ಲದೇ ಶೀಘ್ರ ಜಿಲ್ಲಾ ಸಹಕಾರ ಬ್ಯಾಂಕ್ ಚುನಾವಣೆ ಜರುಗಲಿದೆ. ಹಾಗಾಗಿ ಆ ಮತದಾರರಪಟ್ಟಿಯನ್ನು ಹೊಂದಲಾಗಿತ್ತು ಎಂದು ಹೇಳಿದ ಅವರು, ಆಳಂದದಲ್ಲಿ ಮತದಾರರ ಗುರುತಿನ ಚೀಟಿಗಳನ್ನು

ಒಂದನೇ ಪುಟದಿಂದ

ವಿದ್ಯೆ ಯಾರೊಬ್ಬರಸ್ವತ್ತು ಅಲ್ಲ: ಸಿಎಂ

ಇನ್ನು ಮೇಲು ಕೀಳು ಬಡವ ಬಲ್ಲಿದ ಎಂಬ ಅಸಮಾನತೆ ಇನ್ನೂ ಹಾಗೇ ಇದೆ. ಮುಖ್ಯ ನ್ಯಾಯಮೂರ್ತಿಗಳ ಮೇಲೆ ಶೂ ಎಸೆಯುವ ಜಾತಿ ವ್ಯವಸ್ಥೆ ಇನ್ನೂ ಇದೆ ಇದು ತಲೆ ತಗ್ಗಿಸುವಂತಹ ಸಂಗತಿ. ನಾನು ಅಂಬೇಡ್ಕರ್ ವಾದದಲ್ಲಿ, ಬಸವಣ್ಣನವರ ತತ್ವದಲ್ಲಿ, ಗೌತಮ ಬುದ್ಧ ಅವರ ವಿಚಾರಗಳಲ್ಲಿ ನಂಬಿಕೆ ಇಟ್ಟುಕೊಂಡಿದ್ದೇನೆ. ನಾವು ಸ್ವಾಭಿಮಾನಿಗಳು ಆಗಬೇಕು. ಗುಲಾಮಗಿರಿಯನ್ನು ತೊಡೆದು ಹಾಕಬೇಕು ಎಂದರು. ಕರ್ನಾಟಕದಲ್ಲಿ ಅಂಬೇಡ್ಕರ್ ಹೆಜ್ಜೆ ಗುರುತುಗಳು ಸಾಕ್ಷ ಚಿತ್ರವನ್ನು ಸಮಾಜ ಕಲ್ಯಾಣ ಇಲಾಖೆಯ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಹೆಚ್ ಸಿ ಮಹದೇವಪ್ಪ ಅವರು ಬಿಡುಗಡೆ ಮಾಡಿ ಮಾತನಾಡಿದ ಅವರು ಮೈಸೂರು ವಿಶ್ವ ವಿದ್ಯಾಲಯ ವಿಶ್ವದ ಶ್ರೇಷ್ಠ ವಿಶ್ವ ವಿದ್ಯಾಲಯಗಳಲ್ಲಿ ಒಂದಾಗಿದೆ. ಇದರಲ್ಲಿ ದೇಶದ ಮೊದಲ ರಾಷ್ಟ್ರಪತಿ ಸರ್ವಪಲ್ಲಿ ರಾಧಾಕೃಷ್ಣನ್, ರಾಷ್ಟ್ರ ಕವಿ ಕುವೆಂಪು ಅವರು ಸಹ ಅಧ್ಯಯನ ಮಾಡಿದ್ದಾರೆ ಎಂದು ತಿಳಿಸಿದರು.

ವಿಶ್ವ ವಿದ್ಯಾನಿಲಯ ಚಿಂತನೆಗಳ ಚಿಲುಮೆ. ಕುವೆಂಪು ಅವರು ಮೈಸೂರು ವಿಶ್ವ ವಿದ್ಯಾಲಯದ ಕುಲ ಪತಿಗಳು ಆಗಿದ್ದ ಕಾಲದಲ್ಲಿ ಸಂಧರ್ಭದಲ್ಲಿ ವಿಶ್ವವಿದ್ಯಾಲಯಕ್ಕೆ ಅನೇಕ ಅಭಿವೃದ್ಧಿಕೇಂದ್ರಗಳನ್ನು ಸ್ಥಾಪನೆ ಮಾಡಿ ಜ್ಞಾನಾರ್ಜನೆಗೆ ಹೆಚ್ಚಿನ ಒತ್ತು ನೀಡಿದರು. ವಿಶ್ವವಿದ್ಯಾನಿಲಯಗಳು ಸಮ ಸಮಾಜದ ನಿರ್ಮಾಣ ಮಾಡುವ ಜ್ಞಾನ ಕಣಜಗಳಾಗಿ ಬೆಳೆಯಬೇಕು. ಲಾರ್ಡ್ ಮೌಂಟ್ ಬ್ಯಾಟನ್ ಅವರು ಗಾಂಧೀಜಿಯವರನ್ನು ಕುರಿತು ನಾನು ಭಾರತದಲ್ಲಿ ಒಬ್ಬ ದೇವರನ್ನು ನೋಡಿದ್ದೇನೆ ಎಂದು ಹೇಳಿದ್ದಾರೆ ಎಂದು ತಿಳಿಸಿದರು. ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಸಂವಿಧಾನವನ್ನು ರಚನೆ ಮಾಡಿ ಕೊಟ್ಟಿದ್ದಾರೆ. ಸಂವಿಧಾನ ಪ್ರತಿಯೊಬ್ಬರಿಗೂ ಹಕ್ಕು ಹಾಗೂ ಕರ್ತವ್ಯಗಳನ್ನು ನೀಡಿದ್ದಾರೆ. ವಿಶ್ವವಿದ್ಯಾಲಯವು ಜಾಗೃತಿ ಮೂಡಿಸುವ ಕೆಲಸವನ್ನು ಮಾಡಬೇಕು. ಬೆಂಗಳೂರಿನಲ್ಲಿ ಆಂಧ್ರ ಪ್ರದೇಶದ ಮಾದರಿಯಲ್ಲಿ ಅಂಬೇಡ್ಕರ್ ಉದ್ಯಾನವನವನ್ನು ಬೆಂಗಳೂರಿನಲ್ಲಿ ಸ್ಥಾಪನೆ ಮಾಡಲು 25 ಎಕರೆ ಜಾಗವನ್ನು ಗುರುತಿಸಲಾಗಿದೆ. ಇದರಲ್ಲಿ ಅಂಬೇಡ್ಕರ್ ಬಾಲ್ಯ ದಿಂದ ಅವರ ಕೊನೆಯವರೆಗೆ ನಡೆದು ಬಂದ ಹಾದಿಯನ್ನು ಚಿತ್ರಿಸಲಾಗುವುದು. ವ್ಯಕ್ತಿ ಪೂಜೆಯನ್ನು ಮಾಡಬಾರದು. ವ್ಯಕ್ತಿ ಪೂಜೆ ಸರ್ವಾಧಿಕಾರಿಯನ್ನು ಸೃಷ್ಟಿಸುತ್ತದೆ ಎಂದು ಅಂಬೇಡ್ಕರ್ ಅವರು ತಿಳಿಸಿದ್ದಾರೆ. ಕೋಟ್ಯಂತರ ಜನರು ನಿರ್ದಿಷ್ಟ ಆದಾಯ ಇಲ್ಲದೆ ಬದುಕುತ್ತಿದ್ದಾರೆ. ಅವರಿಗೆ ಆರ್ಥಿಕವಾಗಿ ಶಕ್ತಿ ತುಂಬಲು 5 ಗ್ಯಾರೆಂಟಿ ಯೋಜನೆಗಳನ್ನು ಜಾರಿಗೆ ತರಲಾಗಿದೆ. ಸಮ ಸಮಾಜದ ನಿರ್ಮಾಣ ಮಾಡುವುದು ನಮ್ಮ ಗುರಿ ಎಂದು ತಿಳಿಸಿದರು. ಮೈಸೂರು ವಿಶ್ವವಿದ್ಯಾಲಯದ ಕುಲಪತಿಗಗಳಾದ ಎನ್ ಕೆ ಲೋಕನಾಥ್ ಅವರು ಮಾತನಾಡಿ ಡಾ. ಬಿ ಆರ್ ಅಂಬೇಡ್ಕರ್ ಸಂಶೋಧನಾ ಕೇಂದ್ರವು ಸಣ್ಣ ಪ್ರಮಾಣದಲ್ಲಿ ಪ್ರಾರಂಭವಾಗಿ ನಂತರ ಈ ಹಂತಕ್ಕೆ ಬೆಳೆದು ನಿಂತಿದೆ. ಮಾನ್ಯ ಮುಖ್ಯಮಂತ್ರಿಗಳು ಹಾಗೂ ಸಮಾಜ ಕಲ್ಯಾಣ ಸಚಿವರು ಇದರ ಬೆಳವಣಿಗೆಗೆ ಅಪಾರ ಅನುದಾನವನ್ನು ನೀಡಿ ಪೂ???ತ್ತಾ ಹಿಸಿದ್ದಾರೆ ಇವರಿಗೆ ನನ್ನ ಅಭಿನಂದನೆಗಳು. ಅಂಬೇಡ್ಕರ್ ಅವರ ಚಿಂತನೆಗಳನ್ನು ವಿಶ್ವ ಮಟ್ಟದಲ್ಲಿ ತಿಳಿಸಲು ನಾವು ಕಟಿಬದ್ಧವಾಗಿ ಕಾರ್ಯ ನಿರ್ವಹಿಸುತ್ತೇವೆ ಎಂದು ತಿಳಿಸಿದರು. ಡಾ. ಬಿ ಆರ್ ಅಂಬೇಡ್ಕರ್ ಸಂಶೋಧನಾ ಹಾಗೂ ವಿಸ್ತರಣಾ ಕೇಂದ್ರದ ಹಿರಿಯ ಪ್ರಾಧ್ಯಾಪಕರಾದ ಡಾ. ಜೆ ಸೋಮಶೇಖರ್ ಅವರು ಮಾತನಾಡಿ 1994 ರಲ್ಲಿ ಮೈಸೂರು ವಿಶ್ವವಿದ್ಯಾಲಯದ ಅಮೃತಮಹೋತ್ಸವ ಸಂದರ್ಭದಲ್ಲಿ ಅಂಬೇಡ್ಕರ್ ಪೀಠ ಸ್ಥಾಪನೆ ಆಯಿತು. ನಂತರ 2000 ನೇ ಇಸವಿಯಿಂದ ಡಾ. ಬಿ ಆರ್ ಅಂಬೇಡ್ಕರ್ ಸಂಶೋಧನಾ ಹಾಗೂ ವಿಸ್ತರಣಾ ಕೇಂದ್ರ ವಾಗಿ ನಡೆದುಕೊಂಡು ಬರುತ್ತಿದೆ. ಈ ಕೇಂದ್ರದಲ್ಲಿ ಅಂಬೇಡ್ಕರ್ ಅವರು ಗಳಿಸಿದ ಜ್ಞಾನವನ್ನು ವಿಶ್ವಮಟ್ಟದಲ್ಲಿ ಸಾರುವ ಕಾರ್ಯವನ್ನು ಮಾಡುತ್ತಿದೆ. ದಿವಂಗತ ಮಾಜಿ ಸಂಸದರಾದ ಶ್ರೀನಿವಾಸ್ ಪ್ರಸಾದ್ ಅವರು ಈ ಕೇಂದ್ರವನ್ನು ಸ್ಥಾಪನೆ ಮಾಡಿದರು. ಮಾನ್ಯ ಮುಖ್ಯಮಂತ್ರಿಗಳು ಮೊದಲು ಮುಖ್ಯಮಂತ್ರಿಗಳಾದ 50 ಲಕ್ಷ ನೀಡಿದ್ದರು. ಅನಂತರ ಸಚಿವರಾದ ಮಹದೇವಪ್ಪ ಅವರು 3 ಕೋಟಿ ನೀಡಿದ್ದರು. ಈಗ ಸಂವಿಧಾನ ಅಧ್ಯಯನ ಪೀಠಕ್ಕೆ 10 ಕೋಟಿ ಅನುಧಾನ ನೀಡಿದ್ದಾರೆ. ಜ್ಞಾನ ದರ್ಶನ ಕೇಂದ್ರದಲ್ಲಿ ಅಂಬೇಡ್ಕರ್ ಮ್ಯೂಸಿಯಂ, ಕಂಪ್ಯೂಟರ್ ತರಬೇತಿ ಕೇಂದ್ರ, ದಲಿತ ಡಾಕ್ಯುಮೆಂಟ್ ಸೆಂಟರ್ ನ್ನು ಸ್ಥಾಪಿಸಲಾಗಿದೆ. ಕೇಂದ್ರವನ್ನು ಇನ್ನೂ ಅಭಿವೃದ್ಧಿ ಪಡಿಸಲು 15 ಕೋಟಿ ಅನುಧಾನ ನೀಡಬೇಕು ಎಂದು ಮನವಿ ಮಾಡಿದರು.

ವಾಯು, ನೀರು ಉಳಿಸಿಕೊಳ್ಳುವುದು ಅತ್ಯಗತ್ಯ: ಸ್ವಾಮಿ

ಪರಿಸರ ಸ್ನೇಹಿಯಾಗಿ ಆಚರಿಸುವಂತೆ ಅರಿವು ಮೂಡಿಸಲಾಗುತ್ತಿದೆ. ಏಕ ಬಳಕೆಯ ಪ್ಲಾಸ್ಟಿಕ್ ನಿಷೇಧದ ಕುರಿತು ಸಾರ್ವಜನಿಕರು ಮತ್ತು ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ ಎಂದು ಹೇಳಿದರು.

ಮಾಜಿ ಪ್ರಧಾನಿ ದಿವಂಗತ ಇಂದಿರಾ ಗಾಂಧಿ 1974ರಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಅಧೀನದಲ್ಲಿ ಮಾಲಿನ್ಯ ನಿಯಂತ್ರಣ ಮಂಡಳಿಗಳನ್ನು ಸ್ಥಾಪಿಸಿ ಮಾಲಿನ್ಯ ನಿಯಂತ್ರಣಕ್ಕೆ ಮುನ್ನುಡಿ ಬರೆದರು. ಈಗ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ 50 ವರ್ಷ ಪೂರೈಸಿ ರಾಜ್ಯಾದ್ಯಂತ ಸುವರ್ಣ ಮಹೋತ್ಸವ ವ ಆಚರಿಸಿಕೊಳ್ಳುತ್ತಿದೆ. ಪರಿಸರ ಸಂರಕ್ಷಣೆ ಮತ್ತು ಮಾಲಿನ್ಯ ನಿಯಂತ್ರಣದ ಬಗ್ಗೆ ಜಾಗೃತಿ ಮೂಡಿಸುವುದು ಸುವರ್ಣ ಮಹೋತ್ಸವ ದ ಗುರಿಯಾಗಿದೆ ಎಂದು ನರೇಂದ್ರಸ್ವಾಮಿ ಹೇಳಿದರು.

ಶ್ರೀಮತಿ ಇಂದಿರಾ ಗಾಂಧಿ ಅವರು ಮಾಲಿನ್ಯ ನಿಯಂತ್ರಣ ಮಂಡಳಿಗಳನ್ನು ಸ್ಥಾಪನೆ ಮಾಡಿರುವುದು ಮಾತ್ರವಲ್ಲ, ಪರಿಸರ ಸಂರಕ್ಷಣೆ ಮತ್ತು ಮಾಲಿನ್ಯ ನಿಯಂತ್ರಣಕ್ಕೆ ಸಂಬಂಧಪಟ್ಟಂತೆ ಹಲವು ಕಾಯಿದೆಗಳನ್ನು ಜಾರಿಗೆ ತಂದರು. 1972ರಲ್ಲಿ ರಾಷ್ಟ್ರೀಯ ಪರಿಸರ ಯೋಜನೆ ಮತ್ತು ಸಮನ್ವಯ ಸಮಿತಿ ರಚಿಸಿದರು. ಅದೇ ವರ್ಷ ಅಳಿವಿನಂಚಿನಲ್ಲಿರುವ ಪ್ರಾಣಿ-ಪಕ್ಷಿಗಳ ಪ್ರಭೇದಗಳನ್ನು ರಕ್ಷಿಸಲು ವನ್ಯ ಜೀವಿ ಸಂರಕ್ಷಣಾ ಕಾಯ್ದೆ - 1972 ಅನ್ನು ಜಾರಿಗೆ ತಂದರು. 1973ರಲ್ಲಿ ಅಳಿವಿನಂಚಿನಲ್ಲಿರುವ ಹುಲಿಗಳನ್ನು ಮತ್ತು ಅವುಗಳ ಆವಾಸಸ್ಥಾನಗಳನ್ನು ರಕ್ಷಿಸಲು ಪ್ರಾಜೆಕ್ಟ್ ಟೈಗರ್ ಎಂಬ ವನ್ಯಜೀವಿ ಸಂರಕ್ಷಣಾ ಯೋಜನೆಯನ್ನು ರೂಪಿಸಿದರು. 1974ರಲ್ಲಿ ಜಲ ಮಾಲಿನ್ಯ ನಿಯಂತ್ರಣ ಕಾಯ್ದೆಯನ್ನು ಜಾರಿಗೆ ತಂದರು. ಇದಕ್ಕೂ ಮೊದಲು 1972ರಲ್ಲಿ ವಿಶ್ವಸಂಸ್ಥೆಯ ಸ್ಟಾಕ್‌ಹೋಮ್ ಸಮ್ಮೇಳನ ಉದ್ದೇಶಿಸಿ ಮಾತನಾಡಿದ ಇಂದಿರಾ ಗಾಂಧಿ ಇಡೀ ಜಗತ್ತಿಗೆ ಮೊದಲ ಬಾರಿಗೆ ಪರಿಸರ ಸಂರಕ್ಷಣೆಯ ಪಾಠ ಮಾಡಿದರು. ಹಾಗಾಗಿ ಮಾಲಿನ್ಯ ನಿಯಂತ್ರಣ ಮಂಡಳಿಯ ಸುವರ್ಣ ಮಹೋತ್ಸವದ ವೇಳೆ ಇಂದಿರಾ ಗಾಂಧಿ ಅವರ ಕೊಡುಗೆಗಳನ್ನು ಸ್ಮರಿಸಿಕೊಳ್ಳಬೇಕಾದುದು ಮತ್ತು ಅವರು ತಂದ ಕಾಯಿದೆಗಳ ಬಗ್ಗೆ ತಿಳಿದುಕೊಳ್ಳುವುದು ಕೂಡ ನಮ್ಮ ಕರ್ತವ್ಯ ಎಂದು ವಿವರಿಸಿದರು.

ಭವಿಷ್ಯದ ಪೀಳಿಗೆಗೆ ಪರಿಸರ ಸಂರಕ್ಷಣೆ ಅಗತ್ಯ: ಖಂಡ್ರೆ

ಅದನ್ನು ಮರುಬಳಕೆ ಮಾಡುವ ಕ್ರೀಯಾ ಯೋಜನೆ ಹಾಕಬೇಕು. ಸ್ವಚ್ಛ ಬೀದರ, ಸುಂದರ ಬೀದರ, ನಿರ್ಮಲ ಬೀದರ ಮಾಡೋಣ ಎಂದರು. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಅಧ್ಯಕ್ಷ ಪಿ. ಎಂ ನರೇಂದ್ರಸ್ವಾಮಿ ಮಾತನಾಡಿ, ಇಂದಿರಾ ಗಾಂಧಿ ಪ್ರಧಾನಿಯಾಗಿದ್ದ ಸಂದರ್ಭದಲ್ಲಿ ಪರಿಸರ ಸಂರಕ್ಷಣೆಗೆ ಸಂಬಂಧಿಸಿದಂತೆ ಅನೇಕ ಕಾಯ್ದೆಗಳನ್ನು ಜಾರಿಗೆ ತಂದಿದ್ದಾರೆ. 1972 ರಲ್ಲಿ ವನ್ಯಜೀವಿ ಸಂರಕ್ಷಣಾ ಕಾಯ್ದೆ, 1973ರಲ್ಲಿ ಹುಲಿಗಳ ಸಂರಕ್ಷಣೆಗೆ ಟೈಗರ್ ಪ್ರಾಜೆಕ್ಟ್, 1974ರಲ್ಲಿ ಜಲ ಸಂರಕ್ಷಣಾ ಕಾಯ್ದೆ ಜಾರಿಗೆ ತಂದರು. ಜಲ ಸಂರಕ್ಷಣಾ ಕಾಯ್ದೆಯ ಸೆಕ್ಷನ್ 4ರ ಅಡಿಯಲ್ಲಿ ಮಾಲಿನ್ಯ ನಿಯಂತ್ರಣ ಮಂಡಳಿಯನ್ನು ಸ್ಥಾಪಿಸಲಾಯಿತು. ಘನತ್ಯಾಜ್ಯ, ಇ-ತ್ಯಾಜ್ಯ, ಪ್ಲಾಸ್ಟಿಕ್ ಸೇರಿದಂತೆ ಇತರೆ ತ್ಯಾಜ್ಯಗಳನ್ನು ನಿಯಂತ್ರಿಸಿ, ಆರೋಗ್ಯವಂತ ಸಮಾಜ ನಿರ್ಮಾಣ ಮಾಡಲಾಗುವುದು ತಮ್ಮ ಮುಖ್ಯ ಗುರಿ ಎಂದರು. ಕಾರ್ಯಕ್ರಮದಲ್ಲಿ ಜಿಲ್ಲೆಯ ಪರಿಸರವಾದಿಗಳಿಗೆ ಇಂದಿರಾ ಪ್ರಿಯದರ್ಶಿನಿ ಪರಿಸರ ಪ್ರಶಸ್ತಿ ಹಾಗೂ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು. ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಚಂದ್ರಶೇಖರ ಪಾಟೀಲ, ಮಾಜಿ ವಿಧಾನ ಪರಿಷತ್ ಸದಸ್ಯ ಅರವಿಂದಕುಮಾರ ಅರಳಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಸದಸ್ಯ ಶರಣುಕುಮಾರ ಎಂ. ಮೋದಿ, ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ ಹಾಗೂ ಕೃಷ್ಣ ಮೇಲ್ದಂಡೆ ಯೋಜನೆ ಅಧ್ಯಕ್ಷರಾದ ಬಾಬು ಹೊನ್ನನಾಯ್ಕ, ನಗರಸಭೆ ಅಧ್ಯಕ್ಷ ಮಹಮ್ಮದ್ ಗೌಸ್, ಬೀದರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ, ಜಿಲ್ಲಾ ಗ್ಯಾರಂಟಿ ಅನುಷಾ??ನ ಸಮಿತಿ ಅಧ್ಯಕ್ಷ ಅಮೃತರಾವ ಚಿಮಕೋಡೆ, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಅರಣ್ಯ ಸಂರಕ್ಷಣಾಧಿಕಾರಿ ಆಶೀಶ್ ರೆಡ್ಡಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ವಲಯ ಕಛೇರಿ ಕಲಬುರಗಿಯ ಹಿರಿಯ ಪರಿಸರ ಅಧಿಕಾರಿ ಬಿ.ಎಸ್.ಮುರಳಿಧರ, ಬೀದರ ಪ್ರಾದೇಶಿಕ ಪರಿಸರ ಅಧಿಕಾರಿ ಮೃತ್ಯುಂಜಯ ಬಿ.ಬಸನಕೊಪ್ಪ ಸೇರಿದಂತೆ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ಟ್ಯೂಷನ್ ಟೀಚರ್‌ಗೆ 10 ವರ್ಷ ಜೈಲು

ನೇತೃತ್ವದಲ್ಲಿ ಪ್ರಕರಣದ ತನಿಖೆ ನಡೆಸಿ, ಬಳಿಕ ದೋಷಾರೋಪಪಟ್ಟಿಯನ್ನು ಸಲ್ಲಿಸಿದ್ದರು. ವಾದ-ಪ್ರತಿವಾದ ಬಳಿಕ ತೆಲಂಗಾಣದ ವಿಶೇಷ ನ್ಯಾಯಾಲಯದ ನ್ಯಾಯಾಧೀಶ ಪಿ. ಆಂಜನೇಯುಲು ಅವರು ತೀರ್ಪು ಪ್ರಕಟಿಸಿ, ಆದೇಶ ಹೊರಡಿಸಿದ್ದಾರೆ.

ಫ್ಲೆಕ್ಸ್ ಬ್ಯಾನರ್ ಭಗವಾಧ್ವಜ ತೆರವು: ಬಿಜೆಪಿ ಕಿಡಿ

ನನಗೆ ಇರುವ ಮಾಹಿತಿಯೆಂದರೆ ಅವರು (ಆರ್‌ಎಸ್‌ಎಸ್) ತಮ್ಮ ಕಾರ್ಯಕ್ರಮದ ಬಗ್ಗೆ ಮಾಹಿತಿ ನೀಡಿದ್ದಾರೆ. ಆದರೆ ಅವರು ಅನುಮತಿ ಪಡೆದಿಲ್ಲ. ಆರ್‌ಎಸ್‌ಎಸ್ ಧ್ವಜ ಭಾರತದ ರಾಷ್ಟ್ರಧ್ವಜವೇ. ಅವರು ಕಾನೂನುಬಾಹಿರವಾಗಿ ಧ್ವಜ ಹಾಕುತ್ತಿದ್ದಾರೆ ಮತ್ತು ಅದಕ್ಕೆ ನಮ್ಮ ಮೇಲೆ ಆರೋಪ ಮಾಡುತ್ತಿದ್ದಾರೆ ಎಂದು ತಿರುಗೇಟು ನೀಡಿದ್ದಾರೆ. ರಾಷ್ಟ್ರೀಯ ಸ್ವಯಂಸೇವಕ ಸಂಘದ (ಆರ್‌ಎಸ್‌ಎಸ್) ಸ್ವಯಂಸೇವಕರು, 'ಮತಾಂಧರು' ನನ್ನ ಮನೆಗೆ ನುಗ್ಗಿ ಹೊಡೆಯುತ್ತಾರೆ ಎಂದು ಬಿಜೆಪಿ ಕಾರ್ಯಕರ್ತರೊಬ್ಬರು ಬೆದರಿಕೆ ಹಾಕಿದ್ದಾರೆ ಎಂದು ಖರ್ಗೆ ಆರೋಪಿಸಿದ್ದಾರೆ. ನಾನು ಈ ಸಂಬಂಧ ಪೊಲೀಸ್ ಮಹಾನಿರ್ದೇಶಕರಿಗೆ ದೂರು ನೀಡುತ್ತೇನೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಆಸ್ಪತ್ರೆಯಲ್ಲಿ ಸ್ವಚ್ಛತೆ ಕೊರತೆ ವೈದ್ಯರ ನಿರ್ಲಕ್ಷ್ಯ : ಭೀಮ ಆರ್ಮಿ

ಮಲ್ಲಮ್ಮ ನುಡಿ ವಾರ್ತೆ

ಬೀದರ್, ಅ. 18 : ಬೀದರ್‌ನ ಬ್ರೀಮ್ಸ್ ಆಸ್ಪತ್ರೆಯಲ್ಲಿ ಸ್ವಚ್ಛತೆ ಮತ್ತು ವೈದ್ಯಕೀಯ ಸೇವೆಗಳಲ್ಲಿ ಗಂಭೀರ ಅವ್ಯವಸ್ಥೆ ನಡೆದು ಬರುತ್ತಿದೆ ಎಂಬ ಆರೋಪದ ಹಿನ್ನೆಲೆಯಲ್ಲಿ ದಲಿತ ಸಂಘಟನೆಗಳ ನಾಯಕರು ಆಸ್ಪತ್ರೆ ಆಡಳಿತದ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಇಂಡಿಯನ್ ನ್ಯಾಷನಲ್ ಭೀಮ ಆರ್ಮಿ ಸಂಸ್ಥಾಪಕ ರಾಜ್ಯಾಧ್ಯಕ್ಷ ದೀಲಿಪಕುಮಾರ ವರ್ಮಾ ಹಾಗೂ ರಾಜ್ಯ ಉಪಾಧ್ಯಕ್ಷ ಅಶೋಕ ಭಾವಿದೊಡ್ಡಿ ಹಾಗೂ ಸದಸ್ಯರಾದ ದಿಲೀಪ ಸೋಮರಾಜ ಅವರು ಬ್ರೀಮ್ಸ್ ನಿರ್ದೇಶಕರಿಗೆ ಸಲ್ಲಿಸಿದ ಮನವಿಯಲ್ಲಿ, ಆಸ್ಪತ್ರೆಯ ಒಳಾಂಗಣಗಳಲ್ಲಿ ಗಬ್ಬು ದುರ್ವಾಸನೆ, ಹರಿದು ಹೋದ ಬೆಡ್‌ಗಳು, ಅಸಮರ್ಪಕ ಶೌಚಾಲಯಗಳು ಹಾಗೂ ರೋಗಿಗಳಿಗೆ ಆಹಾರ ಮತ್ತು ಔಷಧೋಪಚಾರದಲ್ಲಿ ನಿರ್ಲಕ್ಷ್ಯ ನಡೆಯುತ್ತಿರುವುದನ್ನು ಉಲ್ಲೇಖಿಸಿದ್ದಾರೆ.

ಅವರು ಆರೋಪಿಸಿದ್ದು □ ಸುಮಾರು 150ಕ್ಕೂ ಹೆಚ್ಚು ಸ್ವಚ್ಛತಾ ಸಿಬ್ಬಂದಿ ಇದ್ದರೂ ಆಸ್ಪತ್ರೆಯಲ್ಲಿ ಶುದ್ಧತೆ ಕಂಡುಬರುವುದಿಲ್ಲ. ಸರ್ಕಾರಿ ವೈದ್ಯರು ಕರ್ತವ್ಯದ ಸಮಯದಲ್ಲಿ ಹಾಜರಿರದೆ ಖಾಸಗಿ ಆಸ್ಪತ್ರೆಗಳಲ್ಲಿ ಸೇವೆ ನೀಡುತ್ತಿದ್ದಾರೆ. ವೈದ್ಯಕೀಯ ತರಬೇತಿ ವಿದ್ಯಾರ್ಥಿಗಳಿಂದ ರೋಗಿಗಳನ್ನು ತಪಾಸಣೆ ಮಾಡಿಸುತ್ತಿರುವುದು ಕಾನೂನು ಉಲ್ಲಂಘನೆಯಾಗಿದೆ ಎಂದು ತಿಳಿಸಿದ್ದಾರೆ.

ಅವರ ಮನವಿಯಲ್ಲಿ, ಸ್ವಚ್ಛತೆ ಇಲಾಖೆಯ ಮುಖ್ಯಸ್ಥ ಶಿವಯೋಗಿ ಬಾಳಿ ಅವರನ್ನು ಅಮಾನತ್ತು ಮಾಡುವಂತೆ ಹಾಗೂ ಆಸ್ಪತ್ರೆಯ ಸ್ಥಿತಿಗತಿ ಸುಧಾರಿಸಲು ತಕ್ಷಣ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಲಾಗಿದೆ.

ಅವರು ಎಚ್ಚರಿಸಿದ್ದು □ ತಕ್ಷಣ ಕ್ರಮ ಕೈಗೊಳ್ಳದಿದ್ದಲ್ಲಿ ದಲಿತ ಸಂಘಟನೆಗಳು ಬ್ರೀಮ್ಸ್ ಆವರಣದಲ್ಲಿ ಉಗ್ರ ಹೋರಾಟ ಕೈಗೊಳ್ಳಲಿವೆ ಎಂದು ತಿಳಿಸಿದ್ದಾರೆ.

ದುಬಾರಿ ಟಿಕೆಟ್ ದರ ವಸೂಲಿ ಆರೋಪ ಖಾಸಗಿ ಬಸ್‌ಗಳ ವಿರುದ್ಧ ಕ್ರಮಕ್ಕೆ ಸೇನೆ ಆಗ್ರಹ

ಮಲ್ಲಮ್ಮ ನುಡಿ ವಾರ್ತೆ

ಬೀದರ್. ಅ.18: ದೀಪಾವಳಿಗೆ ತಮ್ಮ ತಮ್ಮ ಊರುಗಳಿಗೆ ಮರಳುವ ಪ್ರಯಾಣಿಕರಿಂದ ದುಬಾರಿ ಟಿಕೆಟ್ ದರ ವಸೂಲಿ ಮಾಡುತ್ತಿರುವ ಖಾಸಗಿ ಬಸ್‌ಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ನಮ್ಮ ಕರ್ನಾಟಕ ಸೇನೆ ಜಿಲ್ಲಾ ಘಟಕ ಆಗ್ರಹಿಸಿದೆ.

ಸೇನೆಯ ಪದಾಧಿಕಾರಿಗಳು ಜಿಲ್ಲಾ ಘಟಕದ ಅಧ್ಯಕ್ಷ ಗಣೇಶ ಪಾಟೀಲಜ್ಯಾಂತಿ ಅವರನೇತೃತ್ವದಲ್ಲಿ ನಗರದಲ್ಲಿ ಶನಿವಾರ ಈ ಕುರಿತು ಸಾರಿಗೆ ಇಲಾಖೆಯ ಕಲಬುರಗಿ ಜಂಟಿ ಆಯುಕ್ತರಿಗೆ ಬರೆದ ಮನವಿ ಪತ್ರವನ್ನು ಪ್ರಾದೇಶಿಕ ಸಾರಿಗೆ ಅಧಿಕಾರಿ ಜಿ.ಕೆ. ಬಿರಾದಾರ ಅವರಿಗೆ ಸಲ್ಲಿಸಿದರು

ಬಹಳಷ್ಟು ಜನ ಬದುಕಲು, ಶಿಕ್ಷಣ ಹಾಗೂ ಕಚೇರಿ ಕೆಲಸಕ್ಕಾಗಿ ಬೆಂಗಳೂರಿಗೆ ಹೋಗಿರುತ್ತಾರೆ. ದೀಪಾವಳಿ ಆಚರಿಸಲು ಸ್ವಂತ ಊರಿಗೆ ವಾಪಸ್ಸಾಗುತ್ತಾರೆ.

ಆದರೆ, ಖಾಸಗಿ ಬಸ್‌ನವರು ದೀಪಾವಳಿ ದೃಷ್ಟಿಕೋನದಲ್ಲಿ ಇಟ್ಟುಕೊಂಡು ಟಿಕೆಟ್ ದರದಲ್ಲಿ ಭಾರಿ ಹೆಚ್ಚಳ ಮಾಡಿದ್ದಾರೆ ಎಂದು ಗಣೇಶ ಪಾಟೀಲ ಗಮನ ಸೆಳೆದರು.

ಬೆಂಗಳೂರಿನಿಂದ ಬೀದರಗೆ ಖಾಸಗಿ ಬಸ್‌ಗಳ ಟಿಕೆಟ್ ದರ ರೂ. 800 ರಿಂದ ರೂ. 1,200 ವರೆಗೆ ಇದೆ. ಆದರೆ, ಇದೀಗ ಖಾಸಗಿ ಬಸ್‌ನವರು ರೂ. 4,000 ರಿಂದ ರೂ. 5,000 ವರೆಗೆ ವಸೂಲಿ ಮಾಡುತ್ತಿದ್ದಾರೆ. ಇದರಿಂದ ಬೀದರ್ ಹಾಗೂ ಕಲ್ಯಾಣ ಕರ್ನಾಟಕದ ಜಿಲ್ಲೆಗಳ ಪ್ರಯಾಣಿಕರು ಸಂಕಷ್ಟಕ್ಕೆ ಒಳಗಾಗಿದ್ದಾರೆ ಎಂದು ಹೇಳಿದರು.

ದುಬಾರಿ ಟಿಕೆಟ್ ದರ ಪಡೆಯುತ್ತಿರುವ ಖಾಸಗಿ ಬಸ್‌ಗಳನ್ನು ಮುಟ್ಟುಗೋಲು ಹಾಕಿಕ

ಅರಣ್ಯ ಪ್ರದೇಶದಲ್ಲಿ ಗಾಂಜಾ ಬೆಳೆಯುತ್ತಿದ್ದರೆ ಅಂತಹವರ ವಿರುದ್ಧ ಕ್ರಮ ತೆಗೆದುಕೊಳ್ಳಿ– ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಅರಣ್ಯ ಪ್ರದೇಶದಲ್ಲಿ ಗಾಂಜಾ ಬೆಳೆಯುವುದು ಕಂಡು ಬಂದರೆ ಅಂತಹವರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕೆಂದು ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಅವರು ಉಪ ಅರಣ್ಯ ಸಂರಕ್ಷಣಾಧಿಕಾರಿಗೆ ಸೂಚನೆ ನೀಡಿದರು.

ಅವರು ಶನಿವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕರೆದ ನಾರ್ಕೋ ಕೋ–ಆಡಿನೇಷನ್ ಸೆಂಟರ್ (ಓಅಔಖಅ) ಸಮನ್ವಯ ಸಮಿತಿಯ ಸಭೆಯಲ್ಲಿ ಅಧ್ಯಕ್ಷತೆವಹಿಸಿ ಮಾತನಾಡಿದರು.

ಮಾದಕವಸ್ತುಗಳ ಉತ್ಪನ್ನ, ಸಾಗಾಟ, ಸಂಗ್ರಹ ಮತ್ತು ಮಾರಾಟ ಶಿಕ್ಷಾರ್ಹ ಅಪರಾದವಾಗಿದೆ. ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಧಾಬಾ, ಹೋಟೆಲ್, ರೆಸಾರ್ಟ್ಗಳಿಗೆ ಸರಪ್ಪೈಸ್ ಭೇಟಿ ನೀಡಿ, ಹಾಗೇನಾದರೂ ಮಾಧಕವಸ್ತುಗಳ ಸೇವನೆ, ಮಾರಾಟ ಕಂಡು ಬಂದರೆ ಅವುಗಳ ಮೇಲೆ ಕೇಸಗಳನ್ನು ದಾಖಲಿಸಬೇಕೆಂದರು.

ಜನರು ದುಶ್ಚಟಗಳಿಂದ ದೂರ ಇರಲು ವಿವಿಧ ಇಲಾಖೆಗಳ ಸಹಯೋಗದಲ್ಲಿ ಶಾಲಾ–ಕಾಲೇಜುಗಳು, ಶಿಕ್ಷಣ ಸಂಸ್ಥೆಗಳು, ಹಾಸ್ಟೆಲಗಳು ಮತ್ತು ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಸೇರುವ ಸ್ಥಳಗಳಲ್ಲಿ ಮಾದಕ ವ್ಯಸನದಿಂದಾಗುವ ದುಷ್ಪರಿಣಾಮಗಳ ಕುರಿತು ವಿವಿಧ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕೆಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ ಎಲ್. ಅರಸಿದ್ದಿ ಅವರು ಮಾತನಾಡಿ, ಆಸ್ಪತ್ರೆಗಳಲ್ಲಿ ಯಾವ ರೀತಿಯ ಕೇಸಗಳು ಬರುತ್ತವೆ ಎನ್ನುವುದರ ಕುರಿತು ನಮಗೆ ವರದಿ ನೀಡಬೇಕೆಂದು ಔಷಧ ನಿಯಂತ್ರಣ ಅಧಿಕಾರಿಗಳಿಗೆ ಸೂಚನೆ ನೀಡಿದರು. ಇಂತಹ ಪ್ರಕರಣಗಳು ಜಿಲ್ಲೆಯಲ್ಲಿ ಕಂಡು ಬಂತರೆ ತಕ್ಷಣ ಕ್ರಮ ವಹಿಸಲಾಗುತ್ತದೆ. ಈ ಕುರಿತು ನಮ್ಮ ಪೊಲೀಸ್ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗುವುದು ಎಂದು ಹೇಳಿದರು.

ಈ ಸಭೆಯಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಉಪ ಅರಣ್ಯ ಸಂರಕ್ಷಣಾಧಿಕಾರಿ ನಿರ್ಮಲಾ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಟಿ. ಲಿಂಗರಾಜು, ವಾರ್ತಾ ಇಲಾಖೆಯ ಸಹಾಯಕ ನಿರ್ದೇಶಕರಾದ ಸುರೇಶ ಜಿ. ಸೇರಿದಂತೆ ಇತರರು ಉಪಸ್ಥಿತರಿದ್ದರು.

ದೊಡ್ಡಪ್ಪ ಅಪ್ಪ ಕಾಲೋನಿಯಲ್ಲಿ ಸಿಸಿ ರಸ್ತೆ ಕಾಮಗಾರಿ ಚಾಲನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ನಗರದ ವಾರ್ಡ್ ನಂಬರ್ 55 ರಲ್ಲಿ ಬರುವ ದೊಡ್ಡಪ್ಪ ಅಪ್ಪ ಕಾಲೋನಿಯಲ್ಲಿ ಕೆಕೆಆರ್ ಡಿಬಿ ಅನುದಾನದ ಅಡಿಯಲ್ಲಿ 10. ಲಕ್ಷ ರೂ. ವೆಚ್ಚದ ಸಿಸಿ ರಸ್ತೆ ಕಾಮಗಾರಿಗೆ ಮಹಾನಗರ ಪಾಲಿಕೆ ಸದಸ್ಯರಾದ ಅರ್ಚನಾ ಬಸವರಾಜ್ ಪಾಟೀಲ್ ಅವರು ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, "ನಗರದ ಮೂಲಸೌಕರ್ಯ ಅಭಿವೃದ್ಧಿಗೆ ನಾಗರಿಕರ ಸಹಕಾರ ಅತ್ಯವಶ್ಯಕ. ಸಾರ್ವಜನಿಕರ ಅಗತ್ಯಗಳನ್ನು ಗಮನದಲ್ಲಿಟ್ಟುಕೊಂಡು ಹಂತ ಹಂತವಾಗಿ ರಸ್ತೆ, ಒಳಚರಂಡಿ ಹಾಗೂ ಬೆಳಕಿನ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ," ಎಂದು ಹೇಳಿದರು. ಈ ಸಂದರ್ಭದಲ್ಲಿ ಬಸವರಾಜ್ ಪಾಟೀಲ್ ಬಿರಾಳ, ಚಂದಣ್ಣ ಸೇರಿ ಸೌಕಾರ್ ಸಗರ್, ಶಶಿಕಾಂತ ಮಹೇಂದ್ರಕರ್, ಮೋಹನ್ ರಾವ್ ಕುಲಕರ್ಣಿ, ಶಾಂತಗೌಡ ಪಾಟೀಲ್, ಮಲ್ಲಿನಾಥ ಗೌಡ ಪಾಟೀಲ್, ಕೋರೇಶ್ ಪಾಟೀಲ್, ಬಾಗೇಶಕುಮಾರ ಸೇರಿ, ಸತ್ಯನಾರಾಯಣ ಇಂಜಿನಿಯರ್ ಸೇರಿದಂತೆ ಇತರರು ಇದ್ದರು.

ಬಿ.ಎಸ್.6 ದ್ವಿಚಕ್ರ ವಾಹನದ ರಿಪೇರಿ ತರಬೇತಿ ಶಿಬಿರ ಯಶಸ್ವಿ

ಕಲಬುರಗಿ: ನಗರದ ಕಲಾ ಮಂಡಳದಲ್ಲಿ ಕರ್ನಾಟಕ ರಾಜ್ಯ ಕಲಿಯೋಣ ಕಲಿಸೋಣ ಮೆಕ್ಯಾನಿಕ ಸಂಘದ ವತಿಯಿಂದ ಒಂದು ದಿನ ಬಿ.ಎಸ್.6 ದ್ವಿಚಕ್ರವಾಹನದ ರಿಪೇರಿ ತರಬೇತಿ ಶಿಬಿರವನ್ನು ಏರ್ಪಡಿಸಲಾಯಿತು. ಈ ಸಂದಭದಲ್ಲಿ ಕರ್ನಾಟಕ ರಾಜ್ಯ ಕಲಿಯೋಣ ಕಲಿಸೋಣ ಮೆಕ್ಯಾನಿಕ ಸಂಘದ ರಾಜ್ಯ ಅಧ್ಯಕ್ಷ ಆರ್. ಬಲರಾಮ, ಕಲಬುರಗಿ ಗೌರವ ಅಧ್ಯಕ್ಷ ಜಗನ್ನಾಥಲಗಶೆಟ್ಟಿ, ಕಲಬುರಗಿ ಜಿಲ್ಲಾ ಅಧ್ಯಕ್ಷ ಜ್ಞಾನೋಬಾ ಅಟ್ಟೂರ, ಕಾರ್ಯದರ್ಶಿಗಳಾದ ಬಾಬು ನೆಲಮಂಗಲ, ವಿರಣ್ಣಾ ಅಂಕಲಗಿ, ಟೀಮ್ ಡೆವಲಪರಾದ ಪುಟ್ಟರಾಜ, ಸುಭಾಷ ಕುಲಕರ್ಣಿ, ಸದಸ್ಯರಾದ ಸಂಜು ಮಡಕಿ, ಶಂಕರ, ಶ್ರೀನಿವಾಸ, ಹಿರಿಯೂರ ನಾಗರಾಜ, ಆರ್. ಆರ್. ನಗರ ಬಾಬು, ಭದ್ರಾವತಿ ಬಾಬು, ಸುಂದರ ಭೈರಾಮಡಗಿ, ಆನಂದ ಗೌಳಿ, ಬಾಬು ಗೌಳಿ, ಮಲ್ಲಿಕಾರ್ಜುನ ಪಾಟೀಲ ಸೇರಿದಂತೆ ಇತರರು ಇದ್ದರು.

ನಂತರ ಬಿ.ಎಸ್.6 ದ್ವಿಚಕ ವಾಹನಗಳ ರಿಪೇರಿ ತರಬೇತಿ ಕುರಿತು ಇದರ ಅನೇಕ ಮೆಕ್ಯಾನಿಕಗಳಿಗೆ ವಿವರಿಸಲಾಗಿದೆ. ಎಲ್ಲಾ ಮೆಕ್ಯಾನಿಕಗಳು ಲಾಭವನ್ನು ಪಡೆದುಕೊಂಡು ಗ್ರಾಹಕರಿಗೆ ಸೇವೆಯನ್ನು ನೀಡುವುದರ ಮೂಲಕ ಸಂತೋಷವನ್ನು ವ್ಯಕ್ತಪಡಿಸಿದರು.

ಅಲ್ ಇಂಡಿಯಾ ಬಂಜಾರ ಸೇವಾ ಸಂಘದ ಅಧ್ಯಕ್ಷರಾಗಿ ಕುಪೇಂದ್ರ ರಾಠೋಡ ಪ್ರಧಾನ ಕಾರ್ಯದರ್ಶಿಯಾಗಿ ಪರಶುರಾಮ ಚವ್ಹಾಣ ನೇಮಕ

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ಆಲ್ ಇಂಡಿಂ–ಯಾ ಬಂಜಾರ ಸೇವಾ ಸಂಘದ ತಾಲೂಕಾಧ್ಯಕ್ಷರಾಗಿ ಕುಪೇಂದ್ರ ರಾಠೋಡ ಅಲ್ಲಿಪುರ್ ಪ್ರಧಾನ ಕಾರ್ಯದರ್ಶಿಯಾಗಿ ಪರಶುರಾಮ ಚವ್ಹಾಣ ಭಾದ್ರಪುರ್ ತಾಂಡಾ ಇವರನ್ನು ಜಿಲ್ಲಾಧ್ಯಕ್ಷ ಸುಧಾಕರ್ ರಾಠೋಡ ಇವರು ನೇಮಕ ಮಾಡಿ ಆದೇಶ ಪತ್ರ ನೀಡಿದ್ದಾರೆ. ತಾಲೂಕಿನಲ್ಲಿ ಬಂಜಾರ ಸಮಾಜವನ್ನು ಸಂಘಟಿಸುವುದರ ಜೊತೆಗೆ ಸಮಾಜದ ಸೇವೆ ಹಾಗೂ ಸಂಘಟನೆಯ ಸದಸ್ಯತ್ವವನ್ನು ಹೆಚ್ಚಿಸಬೇಕು. ಬಂಜಾರ ಸಮಾಜದ ಸಭೆ, ಸಮಾರಂಭಗಳು ಸೇರಿದಂತೆ, ಹೋರಾಟಗಳನ್ನು ನಿಯಮಿತವಾಗಿ ಕೈಗೊಂಡು ಬಲಿಷ್ಠ ಸಮಾಜ ಕಟ್ಟಲು ನಿಸ್ವಾರ್ಥ ಮನೋಭಾವದಿಂದ ಸೇವೆಯನ್ನು ಸಲ್ಲಿಸಬೇಕು. ಒಂದು ವೇಳೆ ಸಂಘದ ಹೆಸರಿನಲ್ಲಿ ಸಂಘಕ್ಕೆ ಹಾಗೂ ಸಮಾಜಕ್ಕೆ ಕಳಂಕ ತರುವ ಕೆಲಸ ಮಾಡಿದರೆ ತಮ್ಮನ್ನು ತಕ್ಷಣವೇ ಸಂಘದಿಂದ ವಜಾ ಮಾಡಲಾಗುವುದು ಎಂದು ನೇಮಕಾತಿ ಆದೇಶ ಪತ್ರದಲ್ಲಿ ಜಿಲ್ಲಾಧ್ಯಕ್ಷ ಸುಧಾಕರ್ ರಾಠೋಡ ತಿಳಿಸಿದ್ದಾರೆ.

ಉಪಾಧ್ಯಕ್ಷರಾಗಿ ವಿಶಾಲ ಚಿಂತಕೋಟಿ ನೇಮಕ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ಕನ್ನಡ ಸಾಹಿತ್ಯ ಪರಿಷತ್ತು ಬಲಿಷ್ಠ ಪಡಿಸುವ ನಿಟ್ಟಿನಲ್ಲಿ ಕನ್ನಡ ನಾಡು, ನುಡಿ, ನೆಲ, ಭಾಷೆ, ಸಾಹಿತ್ಯ ಉಳಿವಿಗಾಗಿ ಶ್ರಮಿಸಬೇಕೆಂದು ಕನ್ನಡ ಸಾಹಿತ್ಯ ಪರಿಷತ್ತಿನ ನಗರ ಘಟಕ ಉಪಾಧ್ಯಕ್ಷನಾಗಿ ವಿಶಾಲ ಎಸ್. ಚಿಂತಕೋಟಿ ಇವರನ್ನು ತಾಲೂಕಾಧ್ಯಕ್ಷ ಅನೀಲಕುಮಾರ್ ಸಿಂಧೆ ಇವರ ಆದೇಶದಂತೆ ನೇಮಕ ಮಾಡಲಾಗಿದೆ ಎಂದು ನಗರ ಘಟಕ ತಾಲುಕಾಧ್ಯಕ್ಷ ರಾಜಕುಮಾರ್ ಆರ್. ಹಡಪದ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಸವಕಲ್ಯಾಣ :– ತಾಲೂಕಿನ ಹಾರಕೂಡ ಸಂಸ್ಥಾನ ಹಿರೇಮಠದಲ್ಲಿ ಪೀಠಾಧಿಪತಿಗಳಾದ ಪೂಜ್ಯಶ್ರೀ ಚನ್ನವೀರ ಶಿವಾಚಾರ್ಯರು ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ (ಕಾಡಾ) ಕೃಷ್ಣಾ ಮೇಲ್ದಂಡೆ ಯೋಜನೆ ಭೀಮರಾಯನಗುಡಿ ಅಧ್ಯಕ್ಷರಾದ ಬಾಬು ಹೊನ್ನಾ ನಾಯಕ ಅವರಿಗೆ ಪೂಜರು ಸತ್ಕರಿಸಿ ಗೌರವಿಸಿದರು. ಈ ಸಂದರ್ಭದಲ್ಲಿ ಶಾಸಕ ಶರಣು ಸಲಗರ, ಮಲ್ಲಿನಾಥ ಹಿರೇಮಠ ಹಾರಕೂಡ. ಕೋಹಿನೂರ ಜಿ. ಪಂ. ಮಾಜಿ ಸದಸ್ಯ ಆನಂದ ಪಾಟೀಲ್. ಕಲಬುರ್ಗಿಯ ಶಿಕ್ಷಣ ಆಯುಕ್ತರ ಕಚೇರಿಯ ಅಧಿಕಾರಿಗಳಾದ ಶಿವರಾಚಪ್ಪ ವಾಲಿ ನರೋಣ. ಅಪ್ಪಣ್ಣ ಜನವಾಡ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.(ಮಲ್ಲಮ್ಮ ನುಡಿ ವಾರ್ತೆ ಚಿತ್ರ).

ಭಾಗ್ಯವಂತಿ ದೇವಿಯ ಕಳಸಾ ಮೆರವಣಿಗೆ ವೈಭವದಿಂದ ಜರುಗಿತು

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಅ 18 ತಾಲೂಕಿನ ಕೌಡಿಯಾಳ ಗ್ರಾಮದಲ್ಲಿ ಶ್ರೀ ಭಾಗ್ಯವಂತಿ ದೇವಿಯ ಅದ್ದೂ–ರಿಯಾಗಿ ಕಳಸ ಮೆರವಣಿಗೆ ಜರುಗಿತು. ಮೆರವಣಿಗೆ ಚಾಲನೆ ರಾಜೇಶ್ವರದ ಪೂಜ್ಯಶ್ರೀ ಘನಲಿಂಗ ರುದ್ರಮುನಿ ಶಿವಾಚಾರ್ಯರು ಚಾಲನೆ ನೀಡಿದರು. ಇದೇ ಸಂದರ್ಭದಲ್ಲಿ ತಡೋಳಾ ಪೂಜ್ಯ ಶ್ರೀ ಬಾಲ ತಪಸ್ವಿ ಶಿವರಾಣಿ ಮಹಾದೇವಿ. ತಿಪುರಾಂತಿನ ನಿಜಶರಣ ಅಂಬಿಗರ ಚೌಡಯ್ಯ ಜಾಗ್ರತೆ ಆಶ್ರಮದ ಪೂಜ್ಯ ಶ್ರೀ ರತ್ನಕಾಂತ ಶಿವಯೋಗಿಗಳು. ಹುಮನಾಬಾದ ತಾಲೂಕಿನ ಬ್ರಾಹ್ಮಣ ಸಮಾಜದ ಉಪಾಧ್ಯಕ್ಷರಾದ ಮಿಲಿಂದ್ ಮುರಳಿಧರ್ ರಾವ್ ಕುಲಕರ್ಣಿ. ಹಾಗೂ ರಾಜೇಶ್ವರ ಹಾಗೂ ಕೌಡಿಯಾಳ ಮಹಿಳಾ ಸಂಘದವರು ಕಳಸಾರೋಹಣ ಕಾರ್ಯಕ್ರಮದಲ್ಲಿ ಸಮಸ್ತ ಗ್ರಾಮಸ್ಥರ ಸಮ್ಮುಖದಲ್ಲಿ ಜರುಗಿತು. ಈ ಕಾರ್ಯಕ್ರಮಕ್ಕೆ ಬಂದಂತಹ ಭಕ್ತಾದಿಗಳಿಗೆ ಮಹಾಪ್ರಸಾದ ವೆವಸ್ಥೆ ಮಾಡಲಾಯಿತು.

ಬಸವಕಲ್ಯಾಣ :– ಇಲ್ಲಿನ ಅನುಭವ ಮಂಟಪದ ಪರಿಸರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಾಹಿತಿ ಸೂರ್ಯಕಾಂತ ಸಸಾನೆ ಅವರ ಅಭಿನಂದನಾ ಗ್ರಂಥ ಸೂರ್ಯತೇಜ ಬಿಡುಗಡೆ ಮಾಡಲಾಯಿತು. ಈ ಸಂದರ್ಭದಲ್ಲಿ ಅನುಭವ ಮಂಟಪದ ಟ್ರಸ್ಟಿನ ಸಂಚಾಲಕರಾದ ಪೂಜ್ಯ ಶ್ರೀ ಶಿವಾನಂದ ದೇವರು. ಪೂಜ್ಯ ಶ್ರೀ ಪಂಚಾಕ್ಷರಿ ಮಹಾಸ್ವಾಮಿಜಿ. ಶ್ರೀ ಕಾಂತ ಸ್ವಾಮಿಜಿ. ಪೂಜ್ಯಶ್ರೀ ಚಿತ್ರಮ್ಮಾ ತಾಯಿ. ಸೂರ್ಯಕಾಂತ ಸಸಾನೆ. ಭಾರತ ಸಾತಪುತೆ. ವಿಷ್ಣು ಖಿಂಡಾಳೆ. ಲಕ್ಷ್ಮೀಬಾಯಿ ಪಾಟೀಲ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ).

ಯುವ ಪೀಳಿಗೆಯು ಉದ್ಯಮಶೀಲತೆಯನ್ನು ಬೆಳೆಸಿಕೊಳ್ಳಿ: ಯಶವಂತರಾಜ್ ನಾಗಿರೆಡ್ಡಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.18– ಲೀನ್ ಯೋಜನೆ ಮತ್ತು ಝಡ್.ಇ.ಡಿ ಹಾಗೂ ರಪ್ಪು ಯೋಜನೆಗಳಿಂದ ವಿವಿಧ ಸೌಲಭ್ಯಗಳನ್ನು ಪಡೆದು ವ್ಯಾಪಾರ ಮತ್ತು ಸಂಘ ಸಂಸ್ಥೆ ಜೊತೆ ಸೇರಿ ಯುವಕರು ನವ ಉದ್ಯಮವನ್ನು ಆರಂಭಿಸಿ ಉದ್ಯಮಶೀಲತೆ ಬೆಳೆಸಿಕೊಳ್ಳಬೇಕು ಎಂದು ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಅಧ್ಯಕ್ಷ ಯಶವಂತರಾಜ್ ನಾಗಿರೆಡ್ಡಿ ಅವರು ಹೇಳಿದರು.

ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರ, ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನಾ ಕೇಂದ್ರ (ವಿಟಿಪಿಸಿ) ಹಾಗೂ ಕರ್ನಾಟಕ ಸಣ್ಣ ಕೈಗಾರಿಕೆಗಳ ಸಂಘ ಇವರ ಸಹಯೋಗದಲ್ಲಿ "ಎಂ.ಎಸ್.ಎಂ.ಇ ಗಳ ಕಾರ್ಯಕ್ಷಮತೆಯನ್ನು ಹೆಚ್ಚಿಸುವುದು ಮತ್ತು ವೇಗಗೊಳಿಸುವುದು" ಯೋಜನೆಯಡಿ ನಗರದ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಘದ ಸಭಾಂಗಣದಲ್ಲಿ ಶನಿವಾರ ಆಯೋಜಿಸಿದ್ದ ಲೀನ್ ಯೋಜನೆ ಮತ್ತು ಝಡ್.ಇ.ಡಿ ಹಾಗೂ ರಪ್ಪು ಕುರಿತು ಒಂದು ದಿನದ ಅರಿವು ಮೂಡಿಸುವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಸರ್ಕಾರ ಕೈಗಾರಿಕಾ ಸಂಬಂಧಿಸಿದ ವಿವಿಧ ಕಾರ್ಯಕ್ರಮಗಳನ್ನು ಮಾಡುವುದರ ಮೂಲಕ ಯುವಕರು ಉದ್ಯಮವನ್ನು ಸ್ಥಾಪಿಸಲು ಒಂದು ಉತ್ತಮ ಅವಕಾಶ ದೊ–ರೆಯುತ್ತದೆ. ರೈತರು, ಕಾಲೇಜು ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ಉದ್ಯಮಶೀಲತೆಯನ್ನು ಬೆಳೆಸಿಕೊಳ್ಳಬೇಕು. ಸರ್ಕಾರದಿಂದ ಸಣ್ಣ ಗುಡಿ ಕೈಗಾರಿಕೆ ಸ್ಥಾಪಿಸಲು ಸಬ್ಸಿಡಿ ವ್ಯವಸ್ಥೆ ಇದ್ದು, ಇದರ ಸೌಲಭ್ಯ ಪಡೆದು ನಿರುದ್ಯೋಗಿಗಳಿಗೆ ಕೆಲಸವನ್ನು ನೀಡಬೇಕು ಎಂದು ಹೇಳಿದರು.

ಜಿಲ್ಲಾ ಕೈಗಾರಿಕಾ ಸಂಘದ ಅಧ್ಯಕ್ಷ ವಿ.ರಾಮಚಂದ್ರ ಅವರು ಮಾತನಾಡಿ, ನಮ್ಮ ದೇಶದಲ್ಲಿ ಸಣ್ಣ ಕೈಗಾರಿಕೆಗಳು ಅತಿ ಹೆಚ್ಚಾಗಿ ಕಂಡು ಬರುತ್ತವೆ. ಅತಿ ಹೆಚ್ಚು ಸಣ್ಣ ಕೈಗಾರಿಕೆಗಳು ರೈತರಿಂದ ಬೆಳವಣಿಯಾಗಿವೆ ಮತ್ತು ರೈತರಿಂದಲೇ ಉದ್ಯಮಗಳು ಬೆಳೆಯುತ್ತಿವೆ ಎಂದು ಹೇಳಿದರು.

ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಸೋಮಶೇಖರ್ ಬಿ ಅವರು ಮಾತನಾಡಿದರು. ಭಾರತ ದೇಶವು ಆರ್ಥಿಕವಾಗಿ 4ನೇ ಸ್ಥಾನದಲ್ಲಿದೆ. ಅಭಿವೃದ್ಧಿಯಲ್ಲಿ ಕೃಷಿ ಮತ್ತು ಕೈಗಾರಿಕೆಗಳು ಪ್ರಧಾನಪಾತ್ರ ವಹಿಸುತ್ತವೆ. ಸಣ್ಣ ಪ್ರಮಾಣದ ಕೈಗಾರಿಕೆಗಳಿಂದ ಗ್ರಾಮೀಣ ಜನರಿಗೆ ಉದ್ಯೋಗ ಸಿಗುತ್ತದೆ. ವಿದ್ಯಾರ್ಥಿಗಳು ಮತ್ತು ಉದ್ಯಮದಾರರು ಪ್ರೋಡಕ್ಟ್ ಉತ್ಪನ್ನ ಮಾಡಲು ಈ ಯೋಜನೆಯು ಉತ್ತಮವಾಗಿದೆ. ಜಪಾನ್ ದೇಶದ ರೀತಿ ಉತ್ತಮ ಪ್ರೋಡಕ್ಟಗಳನ್ನು ಉತ್ಪತ್ತಿ ಮಾಡಬೇಕು ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಹತ್ತಿ ಗಿರಣಿಗಳ ಸಂಘದ ಅಧ್ಯಕ್ಷ ಡಿ.ತಿಪ್ಪಯ್ಯ, ಕಾಸಿಯಾ ಉಪಾಧ್ಯಕ್ಷ ನಿಂಗಣ್ಣ ಎಸ್ ಬಿರಾದರ, ಜಿಲ್ಲಾ ಕೈಗಾರಿಕಾ ಜಂಟಿ ಕಾರ್ಯದರ್ಶಿ ಕೆ.ಸಿ ಸುರೇಶ್‌ಬಾಬು, ಕಾಸಿಯಾ ಜಂಟಿ ಕಾರ್ಯದರ್ಶಿ ಕೇಶವ ಮೂರ್ತಿ ಆರ್, ಜಿಲ್ಲಾ ಅಭಿವೃದ್ಧಿ ಸಮಿತಿಯ ಪ್ಯಾನಾಲ್ ಅಧ್ಯಕ್ಷ ನಾಗರಾಜ ಸಿ ಯಲಿಗಾರ ಸೇರಿದಂತೆ ಸಂಘ–ಸಂಸ್ಥೆಗಳ ಪದಾಧಿಕಾರಿಗಳು, ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

ವಿಜಯನಗರ ಶ್ರೀಕೃಷ್ಣದೇವರಾಯ ವಿವಿಯ ಡಾ.ವಿ.ಲೋಕೇಶ್ ವಿದೇಶ ಪ್ರಯಾಣ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.18– ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಗಣಿತಶಾಸ್ತ್ರ ವಿಭಾಗದ ಮುಖ್ಯಸ್ಥ ಹಾಗೂ ಪ್ರಾಧ್ಯಾಪಕರಾದ ಡಾ.ವಿ.ಲೋಕೇಶ್ ಅವರು ಅ.21 ರಿಂದ 26 ರವರೆಗೆ ಇಂಡೋನೇಷ್ಯಾದಲ್ಲಿ ಜರುಗಲಿರುವ "ಐಐಸಿಎಂಎ–2025 ಅಂತರಾಷ್ಟ್ರೀಯ ಸಮ್ಮೇಳನ" ದಮುಖ್ಯ ಭಾಷಣಕಾರರಾಗಿ ಭಾಗವಹಿಸಲು ವಿದೇಶ ಪ್ರಯಾಣ ಮಾಡಲಿದ್ದಾರೆ.

ಪ್ರತಿಷ್ಠಿತ 37ನೇ ಆವೃತ್ತಿಯ 'ಇಂಡೋ ಎಂಎಸ್' ಅಂತರಾಷ್ಟ್ರೀಯ ಸಮ್ಮೇಳನವು ಇಂಡೋನೇಷ್ಯಾದ ಈಸ್ಟ್ ಜಾವಾದಲ್ಲಿರುವ ಜಂಬೆರ್ ವಿಶ್ವವಿದ್ಯಾಲಯದಲ್ಲಿ ಈ ಬಾರಿ ಆಯೋಜಿಸಲಾಗಿದೆ. ಜಂಬೆರ್ ವಿಶ್ವವಿದ್ಯಾಲಯದ ಜಾಂಗ್‌ಜಿಯಾನ್ ಮೆಥಮೆಟಿಕಲ್ ಸೊಸೈಟಿ ಮತ್ತು ಸಿಜಿಎಎನ್‌ಟಿ ರಿಸರ್ಚ್ ಗ್ರೂಪ್ ಸಹಭಾಗಿತ್ವದಲ್ಲಿ ಪ್ರತಿವರ್ಷ ಸಮ್ಮೇಳನವನ್ನು ಆಯೋಜಿಸಲಾತ್ತದೆ. ಟರ್ಕಿ, ಚೀನಾ, ದಕ್ಷಿಣ ಕೊ–ರಿಯಾ, ಫ್ರಾನ್ಸ್ ದೇಶಗಳ ಖ್ಯಾತ ಗಣಿತಶಾಸ್ತ್ರ ಪ್ರಾಧ್ಯಾಪಕರುಗಳು ಮುಖ್ಯ ಭಾಷಣಕಾರರಾಗಿ ಮತ್ತು ಸುಮಾರು 50ಕ್ಕೂ ಅಧಿಕ ದೇಶಗಳ ಶೈಕ್ಷಣಿಕ ವಲಯದ ಪ್ರತಿನಿಧಿಗಳು ಸಮ್ಮೇಳನದಲ್ಲಿ ಪಾಲ್ಗೊಳ್ಳಲಿದ್ದಾರೆ.

ಪ್ರತಿಷ್ಠಿತ ಸಮ್ಮೇಳನದಲ್ಲಿ ಭಾಗವಹಿಸಲು ಪ್ರಯಾಣ ಬೆಳೆಸಲಿರುವ ಡಾ.ವಿ.ಲೋಕೇಶ್ ಅವರಿಗೆ ವಿವಿಯ ಕುಲಪತಿ

ನಶಾ ಮುಕ್ತ ಭಾರತ ಅಭಿಯಾನ ಯೋಜನೆಯ ಪ್ರತಿಜ್ಞಾ ವಿಧಿ ಬೋಧನೆ

ಯಾದಗಿರಿ : ಅ 18 : ನಶಾ ಮುಕ್ತ ಭಾರತ ಅಭಿಯಾನ ಯೋಜನೆಯ ಪ್ರತಿಜ್ಞಾ ವಿಧಿ ಸ್ವೀಕರಿಸಲಾಗಿಯಿತು ಎಂದು ಯಾದಗಿರಿ ಜಿಲ್ಲಾ ಅಂಗವಿಕಲರ ಮತ್ತು ಹಿರಿಯ ನಾಗರಿಕರ ಕಲ್ಯಾಣಾಧಿಕಾರಿ ಶರಣಪ್ಪ ಅವರು ಹೇಳಿದರು.

ಯಾದಗಿರಿ ನಗರದ ಸರಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜುದಲ್ಲಿ ಇಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಯಾದಗಿರಿ ಸಂಯುಕ್ತಾಶ್ರಯದಲ್ಲಿ ಕೇಂದ್ರ ಸರ್ಕಾರದ ನಶಾ ಮುಕ್ತ ಭಾರತ ಅಭಿಯಾನ ಯೋಜನೆಯು 5 ವರ್ಷ ಪೂರ್ಣಗೊಂಡ ಹಿನ್ನೆಲೆ ಮಾದಕ ವಸ್ತು ಸೇವನೆ ಮಾಡದೇ ಇರುವುದಾಗಿ ಸಾಮೂಹಿಕ ಪ್ರತಿಜ್ಞೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಾದಕ ವಸ್ತುಗಳ ಸೇವನೆ ಮಾಡದೇ ಇರುವ ಕುರಿತು ಪ್ರತಿಜ್ಞೆ ಬೋಧಿಸಿದರು.

ಈ ಸಂದರ್ಭದಲ್ಲಿ ಸರಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು ಪ್ರಾಂಶುಪಾಲರು ಡಾ.ಹರೀಶ್, ಸರಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು ಉಪನ್ಯಾಸಕರು ಡಾ.ವಿದ್ಯಾಸಾಗರ ಬಿ.ಹೂಗಾರ, ಡಾ.ಉದಯಕುಮಾರ ದೊಡ್ಡಮನಿ, ಡಾ.ಮಹ್ಮದ್ ಖಲೀಲ ಮಸೂದ, ಯಾದಗಿರಿ ವ್ಯಸನ ಮುಕ್ತ ಕೇಂದ್ರ ಸಿಬ್ಬಂದಿಗಳಾದ ಶ್ರೀ ವೈಷ್ಣವಿ, ಶ್ರೀಮತಿ ಸವಿತಾ, ಹಾಗೂ ಜಿಲ್ಲಾ ಅಂಗವಿಕಲರ ಪುನರ್ವಸತಿ ಕೇಂದ್ರದ ಸಿಬ್ಬಂದಿಗಳು, ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರದ ಸಿಬ್ಬಂದಿಗಳು, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಛಲವಾದಿ ಮನೆ ಭದ್ರತೆ ವಾಪಸ್ : ಮಹೇಶ ರೆಡ್ಡಿ ಮುದ್ನಾಳ ಖಂಡನೆ

ಯಾದಗಿರಿ :ಅ.18: ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕರಾದ ಛಲವಾದಿ ನಾರಾಯಣಸ್ವಾಮಿ ಅವರ ನಿವಾಸಕ್ಕೆ ಭದ್ರತೆಗೆ ನಿಯೋಜಿಸಿದ್ದ ಪೊಲೀಸ್ ಸಿಬ್ಬಂದಿಯನ್ನು ವಾಪಸ್ ಪಡೆದ ರಾಜ್ಯ ಸರ್ಕಾರದ ಕ್ರಮವನ್ನು ಬಿಜೆಪಿ ಯುವ ನಾಯಕ ಮಹೇಶ ರೆಡ್ಡಿ ಮುದ್ನಾಳ ಖಂಡಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಶಾಸಕಾಂಗ ವ್ಯವಸ್ಥೆಯ ಘನತರಾದ ಹುದ್ದೆಯಲ್ಲಿ ಇರುವ ಓರ್ವ ಹಿರಿಯ ನಾಯಕನಿಗೆ ಸಿಎಂ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಮಾಡಿದ ಅವಮಾನವೆಂದು ಜರಿದಿದ್ದಾರೆ.

ಉದ್ದೇಶಪೂರ್ವಕವಾಗಿ ರಾಜಕಾರಣ ಮಾಡುವ ನಿಟ್ಟಿನಲ್ಲಿ ಈ ಕೆಲಸ ಮಾಡಲಾಗಿದೆ.

ಇದು ಸಂಪೂರ್ಣ ಟಾರ್ಗೆಟ್ ರಾಜಕಾರಣದ ಭಾಗ ಮತ್ತು ಪ್ರಜಾಪ್ರಭುತ್ವದ ಮೌಲ್ಯಗಳಿಗೆ ವಿರುದ್ಧವಾಗಿದೆ ಎಂದು ಮಹೇಶರಡ್ಡಿ ಮುದ್ನಾಳ ಟೀಕಿಸಿದ್ದಾರೆ.

ಹೀಗೆ ಪ್ರತಿಪಕ್ಷದ ನಾಯಕನಿಗೆ ಅವಮಾನ ಮಾಡುವ ಮೂಲಕ ರಾಜ್ಯದಲ್ಲಿ ಅಘೋಷಿತ ತುರ್ತು ಪರಸ್ಥಿತಿ ಹೇರಲು ರಾಜ್ಯ ಸರ್ಕಾರ ಮುಂದಾಗಿದೆ ಎಂದು ಯುವ ನಾಯಕ ಮುದ್ನಾಳ ವ್ಯಂಗ್ಯವಾಡಿದ್ದಾರೆ.

ಫ್ಲಿಪ್‌ಕಾರ್ಟ್ ಬಿಗ್ ಬ್ಯಾಂಗ್ ದೀಪಾವಳಿ ಸೇಲ್‌ನಲ್ಲಿ

Hubli,October2025: motorolaedge60PRO, motorola edge 60 FUSION, moto g96 5G, motog86POWER,ಮತ್ತು motorola razr 60 ಮೇಲೆ ಆಕರ್ಷಕ ಆಫರ್‌ಗಳೊಂದಿಗೆ ಮೊಟೊರೊಲಾ ಹಬ್ಬದ ಕಾಲವನ್ನು ಬೆಳಗಿಸಿದೆ.

motorolaedge60PRO ಬಿಗ್ ಬ್ಯಾಂಗ್ ದೀಪಾವಳಿ ಸೇಲ್‌ನ ಎರಡನೇ ಹಂತದಲ್ಲಿ motorola edge 60 PRO ತನ್ನ Pantone™ ದೃಢೀಕರಿಸಲಾದ ಟ್ರಿಪಲ್ 50MP ಕ್ಯಾಮೆರಾ ವ್ಯವಸ್ಥೆ ಮತ್ತು ವಿಶ್ವದ ಅತ್ಯಂತ ಬಲವಾದ 6.7" 1.5K ಟ್ರೂ ಕಲರ್ ಕ್ವಾಡ್-ಕರ್ವ್ ಡಿಸ್ಪ್ಲೇ ಮೂಲಕ ಹಬ್ಬದ ಸರಣಿಯನ್ನು ಮುನ್ನಡೆಸುತ್ತಿದೆ. ಇದು MediaTek Dimensity 8350 Extreme ಪ್ರೊಸೆಸರ್, 16GB ವರೆಗೆ LPDDR5X RAM ಹಾಗೂ DXOMARK ಗೋಲ್ಡ್ #1 ರೇಟಿಂಗ್ ಪಡೆದ 6000mAh ಬ್ಯಾಟರಿಯು 90W TurboPower™ ಚಾರ್ಜಿಂಗ್‌ನೊಂದಿಗೆ ಸಜ್ಜಾಗಿದೆ. ಸಾಧನವು motoAI, Google Gemini, Microsoft Copilot ಮತ್ತು Perplexity ಜೊತೆ ನಿಖರವಾಗಿ ಸಂಯೋಜಿತವಾಗಿದೆ. ಹಬ್ಬದ ಬೆಲೆಗಳು ?24,999*(8+256GB), ?28,999* (12+256GB), ಮತ್ತು ?32,999*(16+512GB) ಇಂದ ಪ್ರಾರಂಭವಾಗುತ್ತವೆ.

ಅನುಸೂಯ ಜಹಗೀರದಾರರ ಗಜಲ್ ಗಳು ಪಠ್ಯಕ್ಕೆ ಆಯ್ಕೆ

ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ :ಅ.18: ಯಲಬುರ್ಗಾ ತಾಲೂಕಿನ ಬೇವೂರ ಸರಕಾರಿ ಪ್ರೌಢ ಶಾಲೆಯ ಸಹ ಶಿಕ್ಷಕಿ ಅನುಸೂಯ ಜಹಗೀರದಾರ ರವರ ಎರಡು ಗಜಲ್ ಗಳು ನೆರೆ ರಾಜ್ಯ ಮಹಾರಾಷ್ಟ್ರದ ಎರಡು ವಿಶ್ವವಿದ್ಯಾಲಯಗಳಿಗೆ ಪಠ್ಯಕ್ಕೆ ಆಯ್ಕೆ ಆಗಿವೆ ಕೊಲ್ಲಾಪುರದ ಶಿವಾಜಿ ವಿಶ್ವವಿದ್ಯಾಲಯದ ಬಿ.ಎ.ಎರಡನೆಯ ವರ್ಷ ಹಾಗೂ ಪುಣ್ಯಶ್ಲೋಕ ಅಹಿಲ್ಯಾದೇವಿ ಹೋಳ್ಕರ್ ಸೊಲ್ಲಾಪುರ ವಿಶ್ವವಿದ್ಯಾಲಯದ ಬಿ.ಕಾಮ್ ಮೂರನೆಯ ವರ್ಷ ಹಾಗು ಬಿ.ವಿ.ಎ (ಬ್ಯಾಚಲರ್ ಆಫ್ ವಿಸ್ಯುಯಲ್ ಆರ್ಟ್ಸ್) ನ ಮೂರನೆಯ ಸೆಮಿಸ್ಟರ್ ಒಟ್ಟು ಎರಡು ವಿಶ್ವವಿದ್ಯಾಲಯ ಮೂರು ಕಡೆಗಳಲ್ಲಿ 2025–26 ನೇ ಸಾಲಿನಿಂದ ಪಠ್ಯವಾಗಿ ಆಯ್ಕೆಯಾಗಿವೆ ಎಂದು ಗಜಲ್ ಧಾರೆ ಪಠ್ಯಪುಸ್ತಕದ ಪ್ರಧಾನ ಸಂಪಾದಕರಾದ ಡಾ.ಸಿದ್ಧರಾಮ ಹೊನ್ಕಲ್ ಹಾಗು ಶಿವಾಜಿ ವಿ.ವಿ.ಕನ್ನಡ ಅಭ್ಯಾಸ ಮಂಡಳಿ ಅಧ್ಯಕ್ಷ ಡಾ.ಗುರುಸಿದ್ದಯ್ಯ ಸ್ವಾಮಿ ತಿಳಿಸಿದ್ದಾರೆ. ಒಟ್ಟು 50 ಗಜಲ್ ಕಾರರ 100 ಗಜಲ್ ಗಳು ಈ ಪಠ್ಯದಲ್ಲಿ ಇವೆ. ಅನುಸೂಯಾರವರು ಪ್ರಸಿದ್ಧ ಕಥೆಗಾರ್ತಿಯಾಗಿ ಹನಿಗವನ ಕಾವ್ಯ ಗಜಲ್ ಸೇರಿದಂತೆ ಆರು ಪುಸ್ತಕಗಳನ್ನು ಪ್ರಕಟಿಸಿದ್ದಾರೆ.

ಹಿಂದುಸ್ಥಾನಿ ಸಂಗೀತ ಕಲಾವಿದರಾದ ಇವರು ಕನ್ನಡಪರ ವಿವಿಧ ಸಂಘಟನೆಯ ಪದಾಧಿಕಾರಿಯಾಗಿ ಸೇವೆ ಸಲ್ಲಿಸುತ್ತಿದ್ದಾರೆ.

ರಾಜ್ಯ ಮಟ್ಟದ ಹಲವಾರು ಪ್ರಶಸ್ತಿ ಪುರಸ್ಕಾರಗಳು ಇವರಿಗೆ ಸಂದಿವೆ. 2007 ರಲ್ಲಿ ಕರ್ನಾಟಕ ಸರಕಾರದಿಂದ ರಾಜ್ಯ ಮಟ್ಟದ ಉತ್ತಮ ವಿಶೇಷ ಶಿಕ್ಷಕಿ ಪ್ರಶಸ್ತಿಗೆ ಭಾಜನರಾಗಿದ್ದಾರೆ. ಸದಾ ಕ್ರಿಯಾ ಶೀಲರಾಗಿ ಗುರುತಿಸಲ್ಪಡುವ ಅನುಸೂಯಾ ಜಹಗೀರದಾರ ರವರ ಸಾಹಿತ್ಯ ಕೃಷಿ ಹೀಗೆ ಮುಂದುವರಿಯಲಿ ಎಂದು ಅವರ ಅಭಿಮಾನಿಗಳು ಶುಭ ಹಾರೈಸಿದ್ದಾರೆ.

ರೈತರಿಂದ ಭತ್ತ, ಕಿರು ಸಿರಿಧಾನ್ಯಗಳನ್ನು (ಸಾಮೆ ಮತ್ತು ನವಣೆ), ಬಿಳಿಜೋಳ ಖರೀದಿಸಲು ರೈತರ ನೊಂದಣಿ ಕೇಂದ್ರ ಆರಂಭ

ಯಾದಗಿರಿ : ಅ 18 : 2025–26ನೇ ಸಾಲಿನ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ರೈತರಿಂದ ಭತ್ತ ಮತ್ತು ಕಿರು ಸಿರಿಧಾನ್ಯಗಳನ್ನು (ಸಾಮೆ ಮತ್ತು ನವಣೆ) ಹಾಗೂ ಬಿಳಿಜೋಳ ಖರೀದಿಸಲು ರೈತರ ನೊಂದಣಿ ಕೇಂದ್ರ ಆರಂಭಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿ ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್ ಅವರು ತಿಳಿಸಿದ್ದಾರೆ.

ಸರ್ಕಾರದ ಆದೇಶದಂತೆ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ರೈತರಿಂದ ಭತ್ತ ಮತ್ತು ಕಿರು ಸಿರಿಧಾನ್ಯಗಳನ್ನು (ಸಾಮೆ ಮತ್ತು ನವಣೆ) ಹಾಗೂ ಬಿಳಿಜೋಳ ಖರೀದಿಸಲು ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಭತ್ತ–ಸಾಮಾನ್ಯ ಪ್ರತಿ ಕ್ವಿಂಟಾಲ್ 2369 ರೂ.ಗಳ ಹಾಗೂ 'ಎ' ಗ್ರೇಡ್ ಪ್ರತಿ ಕ್ವಿಂಟಾಲ್‌ಗೆ 2389 ರೂ.ಗಳಂತೆ ಮತ್ತು ಬಿಳಿ ಜೋಳ ಹೈಬ್ರಿಡ್ ಪ್ರತಿ ಕ್ವಿಂಟಾಲ್‌ಗೆ 3699 ರೂ.ಗಳ ಹಾಗೂ ಬಿಳಿ ಜೋಳ ಮಾಲ್ದಂಡಿ ಪ್ರತಿ ಕ್ವಿಂಟಾಲ್‌ಗೆ 3749 ರೂ.ಗಳ ಖರೀದಿಸಲು ಈ ಕೆಳಕಂಡ ತಾಲ್ಲೂಕು ಕೇಂದ್ರಗಳಲ್ಲಿ ನೊಂದಣಿ ಕೇಂದ್ರ ತೆರೆಯಲಾಗಿದೆ.

ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಆವರಣ, ಯಾದಗಿರಿ, (ನೊಂದಣಿ ಕೇಂದ್ರ), ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಆವರಣ, ಸುರಪುರ ಸಗಟು ಮಳಿಗೆ, ವೆಂಕಟಾಪುರ, (ನೋಂದಣಿ ಕೇಂದ್ರ), ಕರ್ನಾಟಕ ಆಹಾರ ನಾಗರಿಕ ಸರಬರಾಜು ನಿಗಮ ನಿಯಮಿತ, ಆವರಣ ಶಹಾಪೂರ, (ನೋಂದಣಿ ಕೇಂದ್ರ), ತಾಲ್ಲೂಕಾ ಒಕ್ಕಲುತನ ಹುಟ್ಟುವಳಿ ಮಾರಾಟ ಸಹಕಾರ ಸಂಘ, ಟಿ.ಎ.ಪಿ.ಸಿ.ಎಂ.ಎಸ್. ಆವರಣ (ಮಹಾದೇವಪ್ಪ ಬಳಿಕಲ್ಯಾಣಮಂಟಪ ಎದುರುಗಡೆ, ತಾಳಿಕೋಟೆ ರಸ್ತೆ), (ನೋಂದಣಿ ಕೇಂದ್ರ) ಹುಣಸಗಿ, ಕೃಷಿ ಇಲಾಖೆಯವರು ಸಿದ್ದಪಡಿಸಿದ ಫ್ರೂಟ್ ಎಂಬ ತಂತ್ರಾಂಶದಲ್ಲಿ ನಮೂದಿಸಿರುವ ಬೆಳೆಯ ಆಧಾರದ ಮೇಲೆ ರೈತರ ಹೆಸರನ್ನು ನೊಂದಾಯಿಸಿಕೊಳ್ಳಲಾಗುವುದು, ಒಂದು ವೇಳೆ ಫ್ರೂಟ್ ತಂತ್ರಾಂಶದಲ್ಲಿ ತೊಂದರೆ ಇದ್ದಲ್ಲಿ ಹತ್ತಿರವಿರುವ ರೈತ ಸಂಪರ್ಕ ಕೇಂದ್ರಗಳಿಗೆ ಭೇಟಿ ನೀಡಿ ತಂತ್ರಾಂಶದಲ್ಲಿ ಸರಿಪಡಿಸಿಕೊಂಡು ನೊಂದಣಿ ಮಾಡಿಕೊಳ್ಳಬೇಕು. ಸರ್ಕಾರ ಆದೇಶ ಸಂಖ್ಯೆ ಇ–ಆನಸ 123 ಆರ್.ಪಿ.ಆರ್ 2025 (1859274) ಬೆಂಗಳೂರು 2025ರ ಸೆಪ್ಟೆಂಬರ್ 12ರ ಮತ್ತು ಸರ್ಕಾರ ಆದೇಶ ಸಂಖ್ಯೆ: ಆನಸ 106 ಆರ್‌ಪಿಆರ್ 2025 ಭಾ–2 (1920388) ಬೆಂಗಳೂರು 2025ರ ಸೆಪ್ಟೆಂಬರ್ 20ರ ಸರ್ಕಾರದ ಆದೇಶ ಪ್ರಕಾರ ಈ ಕೆಳಕಂಡ ಮಾರ್ಗ ಸೂಚಿಗಳನ್ನು ಹೊರಡಿಸಿರುತ್ತಾರೆ. ಮಾರ್ಗ ಸೂಚಿಸಿದೆ. ಭತ್ತವನ್ನು ಪ್ರತಿ ರೈತರಿಂದ ಪ್ರತಿ ಎಕರೆಗೆ 25 ಕ್ವಿಂಟಾಲ್‌ನಂತೆ ಪ್ರತಿ ರೈತರಿಂದ ಗರಿಷ್ಠ 50 ಕ್ವಿಂಟಾಲ್ ಖರೀದಿಸುವುದು. ಪ್ರತಿ ರೈತರಿಂದ ಹಿಡುವಳಿಯನ್ನಾಧರಿಸಿ ಪ್ರತಿ ಎಕರೆಗೆ 15 ಕ್ವಿಂಟಾಲ್‌ನಂತೆ ಪ್ರತಿ ರೈತರಿಂದ ಗರಿಷ್ಠ 150 ಕ್ವಿಂಟಾಲ್ ಬಿಳಿ ಜೋಳವನ್ನು ಖರೀದಿಸುವುದು. ಭತ್ತವನ್ನು ರೈತರು ಅವರ ಚೀಲಗಳಲ್ಲಿ ತಂದು ಖರೀದಿ ಕೇಂದ್ರಗಳಿಗೆ ಸಲ್ಲಿಸಿದಾಗ ಪ್ರತಿ ಕ್ವಿಂಟಾಲ್ ಚೀಲಕ್ಕೆ 6 ರೂ.ಗಳ ರಂತೆ ಖರೀದಿ ಏಜೆನ್ಸಿಗಳು ರೈತರಿಗೆ ಪಾವತಿಸಬೇಕು.

ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ರೈತರಿಂದ ಭತ್ತ ಖರೀದಿಸಬೇಕಾಗಿರುವುದರಿಂದ ರೈತ ಭಾಂದವರು ನೊಂದಣಿ ಕೇಂದ್ರಗಳಲ್ಲಿ 2025ರ ಸೆಪ್ಟೆಂಬರ್ 15 ರಿಂದ 2025ರ ಅಕ್ಟೋಬರ್ 31ರ ವರೆಗೆ ನೊಂದಣಿ ಮಾಡಿಕೊಳ್ಳಲಾಗುವುದು ಹಾಗೂ 2025ರ ನವೆಂಬರ್ 1 ರಿಂದ 2026ರ ಫೆಬ್ರವರಿ 28ರ ಅವಧಿಯವರೆಗೆ ಭತ್ತ ಖರೀದಿಸುವುದು ಹಾಗೂ 2025ರ ಡಿಸೆಂಬರ್ 1 ರಿಂದ 2026ರ ಮಾರ್ಚ್ 31ರ ವರೆಗೆ ನೊಂದಣಿ ಮಾಡಿಕೊಳ್ಳಬೇಕು. ಹಾಗೂ 2026ರ ಜನವರಿ 1 ರಿಂದ 2026ರ ಮಾರ್ಚ್ 31ರ ಅವಧಿಯವರೆಗೆ ಬಿಳಿ ಜೋಳ ಖರೀದಿಸಲಾಗುವುದು ಜಿಲ್ಲೆಯ ರೈತಭಾಂದವರು ಸರ್ಕಾರದ ಕನಿಷ್ಠ ಬೆಂಬಲ ಬೆಲೆ ಯೋಜನೆಯನ್ನು ಸದುಪಯೋಗಪಡಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವ್ಯವಸ್ಥಾಪಕರು ಕರ್ನಾಟಕ ಆಹಾರ ನಾಗರಿಕ ಸರಬರಾಜು ನಿಗಮ ನಿಯಮಿತ ದೂ.ಸಂ.8618860551, ಯಾದಗಿರಿ ತಾಲ್ಲೂಕು ಖರೀದಿ ಕೇಂದ್ರಗಳ ಮೇಲ್ವಿಚಾರಕರು ವಿಠ್ಠಲ್ ಬಂದಾಳ ಮೊ.ನಂ.8971236664, ಶಹಾಪೂರ ತಾಲ್ಲೂಕು ಬಸವರಾಜ ಪತ್ತಾರ ಮೊ.ನಂ.8861819836, ಸುರಪುರ ತಾಲ್ಲೂಕು ಆದಯ್ಯ ಹಿರೇಮಠ ಮೊ.ನಂ.8660813747, ಹುಣಸಗಿ ತಾಲ್ಲೂಕು ಸಿ.ಎಸ್. ರಾಜು ಮೊ.ನಂ.9632659336 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಾದಕ ವಸ್ತುಗಳ ನಿರ್ಮೂಲನೆಗೆ :ಪಣ ತೊಡೋಣ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಅ 18: ಮದ್ಯ ಮತ್ತು ಮಾದಕ ವಸ್ತುಗಳ ವಿರುದ್ಧ ಅಭಿಯಾನದಲ್ಲಿ ಬನ್ನಿ ಮಾದಕ ವಸ್ತುಗಳ ನಿರ್ಮೂಲನೆಗೆ ನಾವೆಲ್ಲರೂ ಒಟ್ಟಾಗಿ ಸೇರಿ ಪಣ ತೊಡೋಣ ಎಂದು ಯಾದಗಿರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀ ಪೃಥ್ವಿಕ್ ಶಂಕರ್ ಅವರು ಹೇಳಿದರು.

ಯಾದಗಿರಿ ನಗರದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಛೇರಿ ಆವರಣದಲ್ಲಿ ಇಂದು ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಮಂತ್ರಾಲಯ ನವದೆಹಲಿ ಹಾಗೂ ಯಾದಗಿರಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಹಾಗೂ ಹಿರಿಯ ನಾಗರಿಕರ ಸಹಾಯವಾಣಿ ಸಂಯುಕ್ತಾಶ್ರಯದಲ್ಲಿ ಮದ್ಯ ಮತ್ತು ಮಾದಕ ವಸ್ತುಗಳ ವಿರುದ್ಧ ಅಭಿಯಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪುನರ್ವಸತಿ ಹಾಗೂ ಚಿಕಿತ್ಸೆಗಾಗಿ ರಾಜ್ಯ ಸರ್ಕಾರದ ಆರೋಗ್ಯ ಇಲಾಖೆಯ ಪುನರ್ವಸತಿ ಕೇಂದ್ರ, ಪುನರ್ವಸತಿ ಹಾಗೂ ಚಿಕಿತ್ಸೆಗಾಗಿ ಕೇಂದ್ರ ಸರ್ಕಾರದ ಮಾದಕ ವಸ್ತು ವ್ಯಸನಿಗಳ ಪುನರ್ವಸತಿ ಕೇಂದ್ರಗಳ, ಕೊಕೆನ್, ಮಾರ್ಫಿನ್, ಹೆರಾಯಿನ್, ಮಾದಕ ಸೇವನೆ ಮಾಡಿದಲ್ಲಿ 20,000 ರೂ.ಗಳ ದಂಡ, ಒಂದು ವರ್ಷದ ಕಠಿಣ ಶಿಕ್ಷೆಯೊಂದಿಗೆ ಜೈಲು ವಾಸ ಇದೆ ಎಂದು ತಿಳಿಸಿದರು.

ಮಾದಕ ವ್ಯಸನಕ್ಕೆ ಒಳಗಾಗಿರುವ ಯುವಕರ ವ್ಯಸನತ್ಯಜಿಸಿ, ಆರೋಗ್ಯಕರ ಜೀವನ ಕ್ರಮ ಅಳವಡಿಸಿಕೊಳ್ಳಿ, ನಿಮ್ಮ ಕುಟುಂಬ, ಸುತ್ತ ಮುತ್ತಲಿನ ಜನ, ಸಮುದಾಯ ನೆಮ್ಮದಿಯ ಜೀವನ ನಡೆಸಲು ಸಹಕರಿಸಿ ರಾಷ್ಟ್ರದ ಏಳಿಗೆಯಲ್ಲಿ ಪಾಲ್ಗೊಳ್ಳಬೇಕು ಎಂದರು. ಉತ್ತಮ ಸಮಾಜ ನಿರ್ಮಾಣ ನಮ್ಮೆಲ್ಲರ ಸಂಕಲ್ಪವನ್ನು ಮಾದಕ ವಸ್ತು ಸೇವಿಸುವವರು ಕಂಡುಬಂದಲ್ಲಿ, ಸಮೀಪದ ಮಾದಕ ವ್ಯಸನಿಗಳ ಪುನರ್ವಸತಿ ಕೇಂದ್ರಗಳನ್ನು ಪೊಲೀಸ್ ಇಲಾಖೆ ಟೋಲ್ ಫ್ರೀ ದೂರವಾಣಿ ಸಂಖ್ಯೆಗಳು ಕರ್ನಾಟಕ ರಾಜ್ಯಾದ್ಯಂತ 112ನೇ ಕರೆ ಮಾಡಿ ಸಹಾಯ ಪಡೆಯಬೇಕು. ಬೆಂಗಳೂರು ನಗರ ವ್ಯಾಪ್ತಿಯಲ್ಲಿರುವವರು 1908ಗೆ ಕರೆ ಮಾಡಿ, ಡ್ರಗ್ ಫ್ರೀ ಕರ್ನಾಟಕ ಆಪ್ ಮೂಲಕ ಮಾಹಿತಿ ನೀಡಬಹುದು, ಮಾಹಿತಿ ನೀಡಿದವರ ವಿವರವನ್ನು ಗೌಪ್ಯವಾಗಿ ಇಡಲಾಗುವುದು ಹಾಗೂ ಹೆಚ್ಚಿನ ಮಾಹಿತಿಗಾಗಿ ಆಯಾ ಜಿಲ್ಲೆಯ ಅಂಗವಿಕಲರ ಕಲ್ಯಾಣಾಧಿಕಾರಿಗಳನ್ನು ಸಂಪರ್ಕಿಸಬೇಕು ಎಂದು ಹೇಳಿದರು. ಹಿರಿಯ ನಾಗರಿಕರ ಸಿಬ್ಬಂದಿ ಸಮಾಲೋಚಕರಾದ ಶ್ರೀಮತಿ ಯಶೋಧ ಅವರು ಮಾತನಾಡಿ, ಮದ್ಯ ಮತ್ತು ಮಾದಕ ವಸ್ತುಗಳ ವಿರುದ್ಧ ಅಭಿಯಾನದಲ್ಲಿ ನಶ ಮುಕ್ತ ಭಾರತ ನಿರ್ಮಾಣ ಮಾಡದರಲ್ಲಿ ಯುವಕರು, ಯುವತಿಯರು ಸಮಾಜದ ಎಲ್ಲಾ ಬಂದವರು, ಕಟ್ಟು ಬದ್ದಾಗಿ ಪಾಲಿಸಿದಾಗ ನಶ ಮುಕ್ತ ಭಾರತ ಆಗುವುದು ಎಂದರು. ಪ್ರತಿಜ್ಞಾವಿಧ: ಯುವಕರು ರಾಷ್ಟ್ರದ ಶಕ್ತಿಯಾಗಿದ್ದಾರೆ, ಯುವ ಶಕ್ತಿಯು ಸಮಾಜ ಮತ್ತು ದೇಶದ ಅಭಿವೃದ್ಧಿಯಲ್ಲಿ ಪ್ರಮುಖ ಕೊಡುಗೆಯನ್ನು ಹೊಂದಿದ್ದಾರೆ. ನಶಾ ಮುಕ್ತ ಭಾರತ ಅಭಿಯಾನದಲ್ಲಿ ಗರಿಷ್ಠ ಸಂಖ್ಯೆಯ ಯುವಕ, ಯುವತಿಯರು ಸೇರುವುದು ಬಹಳ ಮುಖ್ಯ, ದೇಶದ ಈ ಸವಾಲನ್ನು ಸ್ವೀಕರಿಸಿ, ಇಂದು ನಾವು ನಶಾ ಮುಕ್ತ ಭಾರತ ಅಭಿಯಾನದಡಿಯಲ್ಲಿ ಒಂದಾಗುತ್ತಿದ್ದೇವೆ. ಸ್ನೇಹಿತರು, ಕುಟುಂಬ, ಸಮಾಜ ಮಾತ್ರವಲ್ಲದೆ ನಾವೂ ಸಹ ಮಾದಕ ವ್ಯಸನ ಮುಕ್ತರಾಗುತ್ತೇವೆ, ಏಕೆಂದರೆ ಬದಲಾವಣೆ ನಮ್ಮಿಂದಲೇ ಪ್ರಾರಂಭವಾಗಬೇಕು. ಆದ್ದರಿಂದ ನಾವೆಲ್ಲರೂ ಸೇರಿ ನಮ್ಮ ಯಾದಗಿರಿ ಜಿಲ್ಲೆಯನ್ನು ಮಾದಕ ವ್ಯಸನ ಮುಕ್ತಗೊಳಿಸಲು ದೃಢ ನಿರ್ಧಾರ ಕೈಗೊಳ್ಳೋಣ, ನನ್ನ ದೇಶವನ್ನು ಮಾದಕದ್ರವ್ಯ ಮುಕ್ತಗೊಳಿಸಲು ನನ್ನ ಸಾಮರ್ಥ್ಯಕ್ಕನುಗುಣವಾಗಿ ಸಾಧ್ಯವ

ಪ್ರಾಥಮಿಕ ಕೃಷಿ ಪತ್ತಿನ ಸಂಘಕ್ಕೆ ನ. 2ಕ್ಕೆ ಚುನಾವಣೆ ಘೋಷಣೆ

ಮಲ್ಲಮ್ಮ ನುಡಿ ವಾರ್ತೆ

ಕುಕನೂರ:ತಾಲೂಕಿನಮಂಡಲಗಿರಿ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಕ್ಕೆ ನವೆಂಬರ್ 2ರಂದು ರವಿವಾರ ಆಡಳಿತ ಮಂಡಳಿ ನಿರ್ದೇಶಕರ ಸಾಮಾನ್ಯ ಚುನಾವಣೆಯನ್ನುನಡೆಸಲಾಗುವುದು ಎಂದು ಚುನಾವಣಾ ಅಧಿಕಾರಿ ಚಂದ್ರಶೇಖರ್ ದೊಡ್ಡಮನಿ ತಿಳಿಸಿರುತ್ತಾರೆ.

ಮಂಡಲಗಿರಿ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿಯಮಿತದ ಆಡಳಿತ ಮಂಡಳಿ ನಿರ್ದೇಶಕರ ಅವಧಿ ಪೂರ್ಣಗೊಂಡಪ್ರಯುಕ್ತಚುನಾವಣಾ ಅಧಿಕಾರಿಗಳು ಹಾಗೂ ಸಹಕಾರ ಸಂಘಗಳ ಉಪನಿಬಂಧಕರು ಕೊಪ್ಪಳ ಜಿಲ್ಲೆ ಇವರ ಆದೇಶದ ಮೇರೆಗೆ ಚುನಾವಣಾ ಘೋಷಣೆ ಮಾಡಿದ್ದು,ಸಾಲಗಾರರ ಸಾಮಾನ್ಯ ಮತದಾರಕ್ಷೇತ್ರದಿಂದ 05 ಸ್ಥಾನಗಳು, ಸಾಲಗಾರರಪರಿಶಿಷ್ಟಜಾತಿಮತದಾರರ ಮೀಸಲು ಕ್ಷೇತ್ರದಿಂದ 01 ಸ್ಥಾನ, ಸಾಲಗಾರರ ಪರಿಶಿಷ್ಟ ಪಂಗಡದ ಮತದಾರರ ಮೀಸಲು ಕ್ಷೇತ್ರದಿಂದ 01ಸ್ಥಾನ,ಸಾಲಗಾರರ ಹಿಂದುಳಿದ ವರ್ಗ–ಅ ಮತ್ತು ಬ ಮತದಾರರ ಮೀಸಲು ಕ್ಷೇತ್ರದಿಂದ 02 ಸ್ಥಾನ, ಸಾಲಗಾರರ ಮಹಿಳಾ ಮತದಾರ ಮೀಸಲು ಕ್ಷೇತ್ರದಿಂದ 02 ಸ್ಥಾನ, ಸಾಲಗಾರರಲ್ಲದ ಸಾಮಾನ್ಯಮತದಾರ ಕ್ಷೇತ್ರದಿಂದ 01 ಸ್ಥಾನ ಸೇರಿದಂತೆ

ಒಟ್ಟು 12 ಸ್ಥಾನಗಳಿಗೆ ಚುನಾವಣಾ ಪ್ರಕ್ರಿಯೆ ಜರಗಲಿದ್ದು ಆಕಾಂಕ್ಷೆವುಳ್ಳ ಅಭ್ಯರ್ಥಿಗಳು 18–10–2025ರಂದು ಶನಿವಾರ ಬೆಳಗ್ಗೆ 11 ಗಂಟೆಯಿಂದ ಮಧ್ಯಾಹ್ನ 3 ಗಂಟೆಯವರೆಗೆ ನಾಮಪತ್ರ ಸ್ವೀಕರಿಸುವ ಕಾರ್ಯ ಪ್ರಾರಂಭಗೊಳ್ಳಲಿದ್ದು, ನಾಮಪತ್ರ ಸ್ವೀಕರಿಸುವ ಕೊನೆಯ ದಿನಾಂಕ 25.10.2025ರ ಶನಿವಾರ 100 ಗಂಟೆ ಯಾಗಿರುತ್ತದೆ.

26.10.2025ರಂದು ನಾಮಪತ್ರಗಳ ಪರಿಶೀಲನೆಗೆನಿಗದಿಪಡಿಸಿದ್ದು,ಅದೇ ದಿನ ಕ್ರಮಬದ್ಧವಾಗಿ ನಾಮಪತ್ರ ಸಲ್ಲಿಸಿದ ಅಭ್ಯರ್ಥಿಗಳ ಪಟ್ಟಿಸಂಘದ ನೋಟಿಸ್ ಬೋರ್ಡಿನ ಮೇಲೆ ಪ್ರಕಟಿಸಲಾಗುವುದು. ಸ್ಪರ್ಧೆಯಿಂದ ಅಭ್ಯರ್ಥಿಗಳುನಾಮಪತ್ರತೆಗೆದುಕೊಳ್ಳಲು 27 10 2025ರಂದು ಸೋಮವಾರ ಮಧ್ಯಾಹ್ನ 3:00 ಕೊನೆಯ ಅವಧಿಯಾಗಿದ್ದು ಅದೇ ದಿನ ಸಾಯಂಕಾಲ 4:00ಗೆ ಕ್ರಮಬದ್ಧ ಸ್ಪರ್ಧೆಯಲ್ಲಿರುವ ಅಭ್ಯರ್ಥಿಗಳ ಪಟ್ಟಿ ಪ್ರಕಟಿಸಲಾಗುವುದು.

27 10 2025 ಸೋಮವಾರ ಸಾಯಂಕಾಲ 4ಗಂಟೆಗೆಚುನಾವಣಾ ಅಧಿಕಾರಿಗಳಿಂದ ಅಭ್ಯರ್ಥಿಗಳ ಅಪೇಕ್ಷಿಸಿದ್ದಲ್ಲಿ ಚಿಹ್ನೆಗಳ ಹಂಚಿಕೆ ಕಾರ್ಯ ಜರುಗಲಿದ್ದು, 29 10 2025 ಬುಧವಾರ 11 ಗಂಟೆಯ ನಂತರ ಚಿಹ್ನೆ ಸಹಿತ ಕಮ ಬದ್ಧವಾದ ಸ್ಪರ್ಧೆಯಲ್ಲಿರುವ ಅಭ್ಯರ್ಥಿಗಳ ಪಟ್ಟಿ ಪ್ರಕಟಿಸಲಾಗುವುದು,02.11.2025ರ ರವಿವಾರ ಮಂಡಲಗಿರಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಬೆಳಗ್ಗೆ 9:00 ರಿಂದ ಮಧ್ಯಾಹ್ನ 4:00 ವರೆಗೆ ಮತದಾನ ನಡೆಯಲಿದ್ದು ಅದೇ ದಿನ ಮತದಾನ ಮುಗಿದ ತಕ್ಷಣ ಮತ ಎಣಿಕೆ ಕಾರ್ಯ ಪ್ರಾರಂಭವಾಗಲಿದ್ದು, ಮತ ಎಣಿಕೆ ಸಂಪೂರ್ಣಗೊಂಡ ಮೇಲೆರಿಟರ್ನಿಂಗ್ ಅಧಿಕಾರಿಯಿಂದ ಫಲಿತಾಂಶ ಪ್ರಕಟಣೆಯನ್ನು ಸಂಘದ ನೋಟಿಸ್ ಬೋರ್ಡ್ ಮೇಲೆ ಪ್ರಕಟಿಸಲಾಗುವುದು ಎಂದು ಚುನಾವಣೆ ಅಧಿಕಾರಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ದೀಪಾವಳಿ ಹಬ್ಬ: ಮುನ್ನೆಚ್ಚರಿಕೆ ವಹಿಸಲು ಆರೋಗ್ಯ ಇಲಾಖೆಯಿಂದ ಮಹತ್ವದ ಸಲಹೆಗಳು

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 18 –ದೀಪಾವಳಿ ಹಬ್ಬದ ಸಂಭ್ರಮಾಚರಣೆಯಲ್ಲಿಸಾರ್ವಜನಿಕರು ಮುಂಜಾಗ್ರತೆಯನ್ನುತೆಗೆದುಕೊಳ್ಳಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಾದ ಡಾ.ಸುರೇಂದ್ರಬಾಬು ಅವರು ತಿಳಿಸಿದ್ದಾರೆ.

ಪಟಾಕಿಗಳಿಗೆ ಬೆಂಕಿ ಹಚ್ಚುವಾಗ ಅವುಗಳ ಕಡೆ ಮುಖ ಮಾಡಿ ಅದರಿಂದ ದೂರ ಸೆರೆದು ಬೆಂಕಿ ಹಚ್ಚಬೇಕು., ಪಟಾಕಿಗೆ ಬೆಂಕಿ ಹಚ್ಚಿದ ಬಳಕೆ ಅದನ್ನು ಕೈಯಲ್ಲಿ ಮುಟ್ಟಬೇಡಿ ಅಥವಾ ಕೈಯಲ್ಲಿ ಹಿಡಿದು ಬೇರೆ ಕಡೆ ಕೊಂಡೋಯ್ಯಬೇಡಿ,ಸಡಿಲವಾದ ಅಥವಾ ನೈಲಾನ್ ಬಟ್ಟೆಗಳನ್ನು ಧರಿಸಬೇಡಿ,ಮೇಣದಬತ್ತಿ ಅಥವಾ ಲೈಟರಗಳನ್ನು ಬಳಸಿ ಪಟಾಕಿ ಸುಡಬೇಡಿ ಉದ್ದನೇ ಸುರು ಸುರು ಬತ್ತಿಯಿಂದ ಪಟಾಕಿಗೆ ಬೆಂಕಿ ಹಚ್ಚಿ ತಕ್ಷಣವೇ ದೂರ ಸರಿಯಿರಿ, ನಿಮ್ಮ ಕಣ್ಣುಗಳನ್ನು ಹೊಗೆ ಮತ್ತು ಬೆಂಕಿಯಿಂದ ರಕ್ಷಿಸಲು ಪಟಾಕಿ ಸಿಡಿಸುವಾಗ ಕನ್ನಡಕವನ್ನು ಧರಿಸಿರಿ, ನೀರಿನ ಬಕೆಟ್ ಮತ್ತು ಪ್ರಥಮ ಚಿಕಿತ್ಸೆ ಪೆಟ್ಟಿಗೆಯನ್ನುಪಕ್ಕದಲ್ಲಿಇಟ್ಟುಕೊಳ್ಳಿ, ತೆರೆದ ಜಾಗದಲ್ಲಿ ಮಾತ್ರ ಪಟಾಕಿ ತಿಳಿಸಿ ಮನೆ ಅಂಗಳ ಉತ್ತಮ ಮನೆಯ ಒಳಗೆ ಪಟಾಕಿಗೆ ಬೆಂಕಿ ಹಚ್ಚಬೇಡಿಮತ್ತುಪಟಾಕಿಸಿಡಿಸುವಾಗ ಪಾದರಕ್ಷಗಳನ್ನು ಕಡ್ಡಾಯವಾಗಿ ಧರಿಸಲು ಮರೆಯದಿರಿ ಎಂದು ಅವರು ಸಲಹೆ ಮಾಡಿದ್ದಾರೆ.

ತುರ್ತು ಸಂಪರ್ಕಕ್ಕೆ ವ್ಯವಸ್ಥೆ: ದೀಪಾವಳಿ ಹಬ್ಬದ ಸಂಭ್ರಮಾಚರಣೆಯಲ್ಲಿಪಟಾಕಿಗಳು ಹೊಡೆಯುವ ಸಂದರ್ಭದಲ್ಲಿ ಸಾರ್ವಜನಿಕರು ಸರ್ಕಾರದ ಸೂಚನೆಯಂತೆ ಹಸಿರು ಪಟಾಕಿಗಳನ್ನು ಸಿಡಿಸುವದರಿಂದ ಪರಿಸರ ಮಾಲಿನ್ಯ ಮತ್ತು ಆರೋಗ್ಯಕರವಾಗಿರುತ್ತದೆ.ಬೇರೆ ಪಟಾಕಿ ಹೆಚ್ಚಿನ ಮದ್ದು ಉಳ್ಳ ಪಟಾಕಿಗಳನ್ನುಸಿಡಿಸುವಾಗಕಣ್ಣಿಗೆ ತೊಂದರೆ ಮತ್ತು ಏನಾದರು ಅವಗಡಗಳು ಸಂಭವಿಸಿದರೆ ತಕ್ಷಣ ಹತ್ತಿರದ ಸರ್ಕಾರಿ ಆಸ್ಪತ್ರೆ ಅಥವಾ ತಾಲೂಕಿನ ತಾಲೂಕು ಸಾರ್ವಜನಿಕ ಆಸ್ಪತ್ರೆಗೆ ಹೋಗಬೇಕು ಮತ್ತು ಅಲ್ಲಿ ಎಲ್ಲಾ ತಜ್ಞರು ಲಭ್ಯವಿರುತ್ತಾರೆ. ಹೆಚ್ಚಿನ ಮಾಹಿತಿಗಾಗಿ ಆಯಾ ಕಡೆಗಿನ ವೈದ್ಯರುಮತ್ತುವೈದ್ಯಾಧಿಕಾರಿಗಳಿಗೆ ಸಂಪರ್ಕಿಸಬಹುದಾಗಿದೆ ಎಂದು ಡಿಎಚ್ಓ ಅವರುಸಲಹೆಮಾಡಿದ್ದಾರೆ. ಅಧಿಕಾರಿಗಳ ವಿವರ:ರಾಯಚೂರು ತಾಲೂಕಿಗೆ ಸಂಬಂಧಿಸಿದಂತೆ ರಿಮ್ಸ್ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕರಾದಡಾ.ಸೂರ್ಯಕಾಂತ ಮಂಡೋಲಕರ್ಮೊ.9448179303 ಮತ್ತು ತಾಲೂಕು ಆರೋಗ್ಯ ಅಧಿಕಾರಿಗಳಾದ ಡಾ.ಫರಾನಾ ಮೊ.9686590067 ಅವರಿಗೆ ಸಂಪರ್ಕಿಸಬಹುದಾಗಿದೆ.

ಮಾನವಿತಾಲೂಕಿಗೆಸಂಬಂಧಿಸಿದಂತೆ ಪ್ರಭಾರಿ ತಾಲೂಕು ಆರೋಗ್ಯ ಅಧಿಕಾರಿಡಾ.ಶರಣಬಸವರಾಜ್ ಮೊ.7019496475 ಮತ್ತು ತಾಲೂಕ ಸಾರ್ವಜನಿಕ ಆಸ್ಪತ್ರೆಯ ಮುಖ್ಯವೈದ್ಯಾಧಿಕಾರಿ ಡಾ.ಅರವಿಂದಮೊ.9591155480 ಸಂಪರ್ಕಿಸಬಹುದಾಗಿದೆ.

ಸಿಂಧನೂರ ತಾಲೂಕಿಗೆ ಸಂಬಂಧಿಸಿದಂತೆ ತಾಲೂಕ ಆರೋಗ್ಯಅಧಿಕಾರಿಡಾ.ಅಯ್ಯನಗೌಡ ಮೊ.7259403400ಅಥವಾತಾಲೂಕು ಸಾರ್ವಜನಿಕ ಆಸ್ಪತ್ರೆಯ ಮುಖ್ಯ ವೈದ್ಯಾಧಿಕಾರಿ ಡಾ.ಸುರೇಶಗೌಡ ಮೊ.9448034170 ಅವರಿಗೆ ಸಂಪರ್ಕಿಸಬಹುದಾಗಿದೆ.

ಲಿಂಗಸ್ಗೂರು ತಾಲೂಕಿಗೆ ಸಂಬಂಧಿಸಿದಂತೆ ತಾಲೂಕು ಆರೋಗ್ಯಅಧಿಕಾರಿಡಾ.ಅಮರೇಶ ಪಾಟೀಲ್ ಮೊ.9902848859 ಹಾಗೂ ತಾಲೂಕ ಸಾರ್ವಜನಿಕ ಆಸ್ಪತ್ರೆಯ ಮುಖ್ಯವೈದ್ಯಾಧಿಕಾರಿ ರುದ್ರಗೌಡ ಮೊ.9986515047 ಅವರಿಗೆಸಂಪರ್ಕಿಸಬಹುದಾಗಿದೆ.

ದೇವದುರ್ಗ ತಾಲೂಕಿಗೆ ಸಂಬಂಧಿಸಿದಂತೆ ತಾಲೂಕು ಆರೋಗ್ಯ ಅಧಿಕಾರಿ ಹಾಗೂ ತಾಲೂಕು ಸಾರ್ವಜನಿಕ ಆಸ್ಪತ್ರೆಯ ಮುಖ್ಯವೈದ್ಯಾಧಿಕಾರಿ ಡಾ.ಬಂದೇಶ್ವರಮೊ.9343690209ಗೆ ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

ಉಚಿತ ಕಣ್ಣು ತಪಾಸಣೆ ಶಸ್ತ್ರಚಿಕಿತ್ಸಾ ಶಿಬಿರ ಯಶಸ್ವಿ
ರೋಗಿಗಳಿಗೆ ಉಚಿತ ಕನ್ನಡಕ ವಿತರಣೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಹಮಾರಾ ಬಂಧನ್ ಇ.ವಿ (ಜರ್ಮನಿ) ಸಂಸ್ಥೆಯ ಪ್ರಾಯೋಜಕತ್ವದಲ್ಲಿ ಹಾಗೂ ಶ್ರೀ ಸಿದ್ದರಾಮೇಶ್ವರ ಕಣ್ಣಿನ ಆಸ್ಪತ್ರೆ, ಕಲಬುರಗಿ ಇವರ ಸಂಯುಕ್ತ ಆಶ್ರಯದಲ್ಲಿ ಅಕ್ಟೋಬರ್ 17, 2025 ರಂದು ಬೆಳಿಗ್ಗೆ 9.00 ಗಂಟೆಯಿಂದ ಸರಕಾರಿ ಪ್ರಾಥಮಿಕ ಶಾಲೆ, ರಿಬ್ಬನಪಳ್ಳಿ ಗ್ರಾಮದಲ್ಲಿ ಉಚಿತ ಕಣ್ಣು ತಪಾಸಣೆ ಹಾಗೂ ಮೋತಿಬಿಂದು ಶಸ್ತ್ರಚಿಕಿತ್ಸಾ ಶಿಬಿರವನ್ನು ಆಯೋಜಿಸಲಾಯಿತು. ರೋಗಿಗಳಿಗೆ ಉಚಿತ ಕನ್ನಡಕವನ್ನು ಶಾಸಕ ಅಲ್ಲಮಪ್ರಭು ವಿತರಿಸಿದರು.

ಡಾ. ವಿಶ್ವನಾಥ ರೆಡ್ಡಿ, ಡಾ. ರಾಜಶ್ರೀ ರೆಡ್ಡಿ ಮತ್ತು ಡಾ. ಸಿದ್ದಲಿಂಗ ರೆಡ್ಡಿ ಯವರ ನೇತೃತ್ವದಲ್ಲಿ, ನೇತ್ರಶಾಸ್ತ್ರಜ್ಞರಾದ ನಾಗರಾಜ ರೆಡ್ಡಿ, ಸವಿತಾ, ಮಲ್ಲಿಕಾರ್ಜುನ ನೀಲಶೆಟ್ಟಿ, ಆಕಾಶ ಬೀರಾದರ ಶಿಬಿರ ನಡೆಸಿಕೊಟ್ಟರು.

ಈ ಶಿಬಿರದಲ್ಲಿ ಸುಮಾರು 250 ಜನರ ಕಣ್ಣುಗಳ ತಪಾಸಣೆ ನಡೆಯಿತು. ಅವರಲ್ಲಿ 15 ಜನರಿಗೆ ಮೋತಿಬಿಂದು ಶಸ್ತ್ರಚಿಕಿತ್ಸೆ ಅಗತ್ಯ ಎಂದು ತಜ್ಞ ವೈದ್ಯರು ಪತ್ತೆಹಚ್ಚಿದರು. ಆಯ್ಕೆಯಾದ ರೋಗಿಗಳಿಗೆ ಉಚಿತ ಶಸ್ತ್ರಚಿಕಿತ್ಸೆಯನ್ನು ನೆರವೇರಿಸಲಾಯಿತು.

ಶಿಬಿರದಲ್ಲಿ ವೈದ್ಯರು, ಸಿಬ್ಬಂದಿಗಳು ಹಾಗೂ ಸ್ಥಳೀಯ ಸ್ವಯಂಸೇವಕರು ಸಕ್ರಿಯವಾಗಿ ಪಾಲ್ಗೊಂಡು ಶಿಬಿರವನ್ನು ಯಶಸ್ವಿಗೊಳಿಸಿದರು. ಗ್ರಾಮಸ್ಥರು ಈ ಶಿಬಿರದ ಮೂಲಕ ಉಚಿತ ಸೇವೆಗಳನ್ನು ಪಡೆಯುವ ಅವಕಾಶ ಸಿಕ್ಕ ಹಿನ್ನೆಲೆಯಲ್ಲಿ ಸಂತೋಷ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ಶಾಂತು ಪಾಟೀಲ, ಸುಭಾಷ್‌ಚಂದ್ರ ಡೆಂಕಿ, ಚನ್ನಪ್ಪ ಎಸ್.ಮರಬ, ಲಕ್ಷ್ಮಣ ಪೂಜಾರಿ ನಂದಿಕೂರ ಸೇರಿದಂತೆ ಇತರರು ಇದ್ದರು.

ಅರ್ಹ ಶಿಕ್ಷಕರು ಹೆಚ್ಚಿನ ಸಂಖ್ಯೆಯಲ್ಲಿ ನೋಂದಣಿ ಮಾಡಿಸಲಿ: ಈಶ್ವರ್ ಕಾಂದೂ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 18– ಅರ್ಹ ಶಿಕ್ಷಕರು ಹೆಚ್ಚಿನ ಸಂಖ್ಯೆಯಲ್ಲಿ ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರ ನೋಂದಣಿ ಪ್ರಕ್ರಿಯೆಯಲ್ಲಿ ಭಾಗವಹಿಸಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕು ಎಂದು ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರ ನೋಂದಣಿ ಪ್ರಕ್ರಿಯೆ ಜಿಲ್ಲಾ ಸ್ವೀಪ್ ಸಮಿತಿಯ ಅಧ್ಯಕ್ಷರ ಆಗಿರುವ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಈಶ್ವರ್ ಕಾಂದೂ ಅವರು ಸಲಹೆ ಮಾಡಿದರು.

ಜಿಲ್ಲಾ ಪಂಚಾಯತ್ ಕಚೇರಿಯ ಜಲನಿರ್ಮಲ ಸಭಾಂಗಣದಲ್ಲಿ ಅಕ್ಟೋಬರ್ 17ರಂದು ನಡೆದ ಜಿಲ್ಲಾಮಟ್ಟದ ಸ್ವೀಪ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅರ್ಹತಾ ದಿನಾಂಕ 01.11.2025ಕ್ಕೆಅನ್ವಯಿಸುವಂತೆ ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯನ್ನು ನೂತನವಾಗಿ ಸಿದ್ಧಪಡಿಸಲು ಭಾರತ ಚುನಾವಣಾ ಆಯೋಗವು ಸೂಚನೆ ನೀಡಿದೆ. ನಮೂನೆ 19ರಲ್ಲಿನ ಅರ್ಜಿಯನ್ನು ಸ್ವೀಕರಿಸಲು 06ನೇ ನವಂಬರ್ 2025 ಕೊನೆಯ ದಿನವಾಗಿದೆ. ಕರಡು ಮತದಾರರ ಪಟ್ಟಿಯನ್ನು 25ನೇ ನವೆಂಬರ್ 2025ರಂದು ಪ್ರಕಟಣೆ ಮಾಡಲಾಗುತ್ತದೆ. 25ನೇ ನವೆಂಬರ್ 2025ರಿಂದ 10ನೇ ಡಿಸೆಂಬರ್ 2025ರ ಅವಧಿವರೆಗೆ ಹಕ್ಕು ಮತ್ತು ಆಕ್ಷೇಪಣೆಗಳಿಗೆ ಅವಕಾಶ ನೀಡಲಾಗಿದೆ. 30ನೇ ಡಿಸೆಂಬರ್ 2025ರಂದು ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಣೆ ಮಾಡಲಾಗುತ್ತದೆ.

ಈ ಮತದಾರ ನೋಂದಣಿ ಪ್ರಕ್ರಿಯೆ ಮುಕ್ತಾಯಗೊಳ್ಳುವವರೆಗೆ ಅರ್ಹ ವ್ಯತದಾರರನ್ನ ಗುರುತಿಸಿ ನೋಂದಣಿ ಮಾಡಿಸುವಲ್ಲಿ ಎಲ್ಲರೀತಿಯ ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರಾದ ಕುಲಪತಿಗಳು, ಪ್ರಾಂಶುಪಾಲರು, ಮುಖ್ಯಾಧ್ಯಾಪಕರು ಹಾಗೂ ಇತರೆ ಸಮುಚಿತವೆನಿಸುವ ಇಲಾಖೆಗಳ ಅಧಿಕಾರಿಗಳ ತಮ್ಮ

ವ್ಯಾಪ್ತಿಯಲ್ಲಿನ ಅರ್ಹ ವ್ಯತದಾರರನ್ನು ಗುರುತಿಸಿ ನೋಂದಣಿ ಮಾಡಿಸುವಲ್ಲಿ ಮುತುವರ್ಜಿ ವಹಿಸಬೇಕು ಮತ್ತು ಈ ಬಗ್ಗೆ ವ್ಯಾಪಕ ಪ್ರಚಾರ ನಡೆಸಿ ಅಚಿತಹ ಅರ್ಹರಿಂದ ನಮೂನೆ 19ರಲ್ಲಿ ನೋಂದಣಿಗಾಗಿ ಅರ್ಜಿ ಪಡೆದು ಸಂಬಂಧಪಟ್ಟ ಸಹಾಯಕ ಮತದಾನನೋಂದಣಾಧಿಕಾರಿಗಳಿಗೆ ಸಲ್ಲಿಸಬೇಕು ಎಂದು ಸಿಇಓ ಅವರು ಸೂಚನೆ ನೀಡಿದರು.

ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ ಬಯಸುವ ಪ್ರತಿಯೊಬ್ಬರು ಅರ್ಜಿ ನಮೂನೆ 19 ನ್ನು ಭರ್ತಿಮಾಡಿ ಅದರೊಂದಿಗೆ ಶೈಕ್ಷಣಿಕ ಸಂಸ್ಥೆಗಳಲ್ಲಿ 1ನೇ ನವೆಂಬರ್ 2025ಕ್ಕೆ ಮೊದಲು 6 ವರ್ಷಗಳ ಅವಧಿಯಲ್ಲಿ ಒಟ್ಟುಕನಿಷ್ಟ 3 ವರ್ಷ ಭೋದನಾ ವೃತಿಯಲ್ಲಿನಿರತವಾಗಿರುವ ಬಗ್ಗೆ ಶೈಕ್ಷಣಿಕ ಸಂಸ್ಥೆಗಳಿಂದ ಅನುಬಂಧ–2 ರಲ್ಲಿ ಸಂಬಳ ಬಟವಾಡೆ ಅಧಿಕಾರಿಯಿಂದ ಪ್ರಮಾಣ ಪತ್ರ ಸಲ್ಲಿಸಬೇಕು. ಅರ್ಜಿದಾರರು ನಮೂನೆ–19ರ ಅರ್ಜಿಯೊಂದಿಗೆ ಆಧಾರ ಕಾರ್ಡ್, ಚುನಾವಣಾ ಗುರುತಿನ ಚೀಟಿ ಹಾಗೂ ಬೀಳಿ ಬಣ್ಣದ ಹಿನ್ನೆಲೆ ಹೊಂದಿದ 2 ಪಾಸ್‌ಪೋರ್ಟ ಅಳತೆಯ ಭಾವಚಿತ್ರಗಳನ್ನು ಸಲ್ಲಿಸಬೇಕು ಎಂದು ಸಿಇಓ ಅವರು ತಿಳಿಸಿದರು.

ಖಡಿಪಿಐ,ಡಿಡಿಪಿಯುಗೆ ಸೂಚನೆ: ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರ ನೋಂದಣಿ ಪ್ರಕ್ರಿಯೆಗೆ ಸಂಬಂಧಿಸಿದಂತೆ ಜಾಗೃತರಾಗಿ ಕೆಲಸ ಮಾಡಬೇಕು. ವ್ಯಾಪಕ ಪ್ರಚಾರ–ಕ್ಕೆ ಕ್ರಮವಹಿಸಬೇಕು ಎಂದು ಇದೆ ವೇಳೆ ಸಿಇಓ ಅವರು ಡಿಡಿಪಿಐ ಮತ್ತು ಡಿಡಿಪಿಯುಗೆ ಸೂಚನೆ ನೀಡಿದರು.

ಮತದಾರರ ಮಿಂಚಿನ ನೋಂದಣಿ: ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣಾಧಿಕಾರಿ ಹಾಗೂ ಮತದಾರರ ನೋಂದಣಾಧಿಕಾರಿಗಳು ಆಗಿರುವ ಕುಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ ಅವರು ಶಿಕ್ಷಕರ ಕ್ಷೇತ್ರದ ಮತದಾರ ನೋಂದಣಿ ಪ್ರಕ್ರಿಯೆಯನ್ನು ಎಲ್ಲಾ ಜಿಲ್ಲೆಗಳಲ್ಲಿ ಚುರುಕಾಗಿ ನಡೆಸಲು ಕಟ್ಟುನಿಟ್ಟಿನ ನಿರ್ದೇಶನ ನೀಡಿದ್ದಾರೆ. ಹೀಗಾಗಿ ಈ ಕಾರ್ಯಕ್ಕೆ ನಿಯೋಜನೆಗೊಂಡ ಅಧಿಕಾರಿಗಳು ಈ ಕಾರ್ಯಕ್ಕೆ ಮೊದಲಾದ್ಯತೆ ನೀಡಬೇಕು. ರಾಯಚೂರು ಜಿಲ್ಲೆಯು ಉತ್ತಮ ಸ್ಥಾನ ಕಾಯ್ದುಕೊಳ್ಳವು ಹಾಗೆ ಪ್ರತಿದಿನ ಅರ್ಹ ಶಿಕ್ಷಕರ ಕ್ಷೇತ್ರದ ಮತದಾರ ನೋಂದಣಿ ಪ್ರಕ್ರಿಯೆಯು ಬಿರುಸಾಗಿ ನಡೆಯಬೇಕು. ಈ ನಿಟ್ಟಿನಲ್ಲಿ ಅಕ್ಟೋಬರ್ 27, 30 ಹಾಗೂ ನವೆಂಬರ್ 3ರಂದು ಮತದಾರರ ಮಿಂಚಿನ ನೋಂದಣಿ ಕಾರ್ಯಾಚರಣೆಗೆ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಸಿಇಓ ಅವರು ಸೂಚನೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಹಾಲಸಿದ್ದಪ್ಪ ಪೂಜಾರಿ, ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಕೆ.ಡಿ.ಬಡಿಗೇರ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಸೋಮಶೇಖರಪ್ಪಹೊಕ್ರಾಣಿ, ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಉಪ ಕುಲಸಚಿವರಾದ ಡಾ.ಜಿ.ಎಸ್.ಬಿರಾದಾರ, ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಸಹಾಯಕ ಕುಲಸಚವರಾದ ವಿರುಪಣ್ಣ ಕೆ.ಎಂ., ಸ್ವೀಪ್ ಸಮಿತಿಯ ನೋಡಲ್ ಅಧಿಕಾರಿಗಳಾದ ಡಾ.ವಾಲ್ಮೀಕಿ ಬಿ ಎಂ., ಇಸಿಓ ರಾಘವೇಂದ್ರ, ಮತದಾರ ಸಾಕ್ಷರತಾ ಕ್ಲಬ್‌ನ ನೋಡಲ್ ಅಧಿಕಾರಿ ಡಾ.ದಂಡಪ್ಪ ಬಿರಾದಾರ, ವಾರ್ತಾ ಇಲಾಖೆಯ ವಾರ್ತಾ ಸಹಾಯಕರಾದ ಗವಿಸಿದ್ದಪ್ಪ ಹೊಸಮನಿ, ವಿವಿಧ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ಇನ್ನೀತರರು ಇದ್ದರು.

ವಿದ್ಯಾರ್ಥಿಗಳು ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಭಾಗಿಯಾಗಲಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 18 : ವಿದ್ಯಾರ್ಥಿಗಳು ಓದಿನ ಜ

ಅ.23 ರಂದು ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.18–ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ಸ್ವಾತಂತ್ರ್ಯ ಹೋರಾಟಗಾರ್ತಿ ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ ಕಾರ್ಯಕ್ರಮವನ್ನು ಅ.23 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಡಾ. ರಾಜ್‌ಕುಮಾರ್ ರಸ್ತೆಯ ಸಾಂಸ್ಕೃತಿಕ ಸಮುಚ್ಚಯದ ಹೊಂಗಿರಣ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ.

ವಸತಿ,ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಉಸ್ತುವಾರಿ ಸಚಿವರಾದ ಬಿ.ಜೆಡ್.ಜಮೀರ್ ಅಹ್ಮದ್ ಖಾನ್ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಅಧ್ಯಕ್ಷತೆ ವಹಿಸುವರು.

ಸಂಸದರಾದ ಈ.ತುಕಾರಾಂ, ಕೆ.ರಾಜಶೇಖರಬಸವರಾಜ ಹಿಟ್ನಾಳ್, ಡಾ.ಸೈಯದ್ ನಾಸೀರ್ ಹುಸೇನ್, ಶಾಸಕರಾದ ಬಿ.ನಾಗೇಂದ್ರ, ಜೆ.ಎನ್ ಗಣೇಶ್, ಬಿ.ಎಂ.ನಾಗರಾಜ, ಶಾಸಕರಾದ ಈ ಅನ್ನಪೂರ್ಣ, ವಿಧಾನಪರಿಷತ್ ಶಾಸಕರಾದ ಡಾ.ಚಂದ್ರಶೇಖರ್ ಬಿ.ಪಾಟೀಲ, ಶಶೀಲ್ ನಮೋಶಿ,ವೈ.ಎಂ.ಸತೀಶ್, ಡಾ.ಬಾಬು ಜಗಜೀವನ್‌ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ,ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್,ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್. ಆಂಜನೇಯಲು, ಕರ್ನಾಟಕ ಸ್ಟೇಟ್ ಮಿನಿರಲ್ಸ್ ಕಾಪೋರೇಷನ್ ಲಿಮಿಟೆಡ್ ಉಪಾಧ್ಯಕ್ಷ ಹೆಚ್.ಲಕ್ಷ್ಮಣ, ಜಿಲ್ಲಾ ಗ್ಯಾರೆಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಕೆ.ಇ ಚಿದಾನಂದಪ್ಪ, ವೀರಶೈವ ಲಿಂಗಾಯತ ಪಂಚಮಶಾಲಿ ಸಮಾಜದ ಅಧ್ಯಕ್ಷ ಜಿ.ನೀಲಗೌಡ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಮೋಕಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾಧ್ಯಾಪಕರಾದ ಡಾ.ಕಲಾವತಿ ಬಿ.ಜಿ ಅವರು ಜಯಂತಿಯ ಕುರಿತು ವಿಶೇಷ ಉಪನ್ಯಾಸ ನೀಡುವರು. ಬಳ್ಳಾರಿಯ ಜಯಲಕ್ಷ್ಮೀ ಎಂ.ಎಸ್ ಅವರಿಂದ ವಚನ ಸಂಗೀತ ಇರಲಿದೆ.

ಮೆರವಣಿಗೆ:

ಜಯಂತಿಯ ಅಂಗವಾಗಿ ಮೆರವಣಿಗೆಯು ನಡೆಯಲಿದ್ದು, ಅಂದು ಬೆಳಿಗ್ಗೆ 9.30 ಗಂಟೆಗೆ ನಗರದ ಮುನ್ಸಿಪಾಲ್ ಕಾಲೇಜು ಮೈದಾನದಿಂದ ಆರಂಭಗೊಂಡು ಇಂದಿರಾ ವೃತ್ತ–ಡಾ.ರಾಜ್ ಕುಮಾರ್ ರಸ್ತೆ– ಸಾಂಸ್ಕೃತಿಕ ಸಮುಚ್ಚಯದ ಹೊಂಗಿರಣದ ಸಭಾಂಗಣದವರೆಗೆ ನಡೆಯಲಿದೆ.

ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭರಾಣಿ ವಿ.ಜೆ., ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಮಹಮ್ಮದ್ ಹಾರಿಸ್ ಸುಮೇರ್, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್, ಮಹಾನಗರ ಪಾಲಿಕೆ ಆಯುಕ್ತರು ಮಂಜುನಾಥ ಪಿ.ಎಸ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಸೇರಿದಂತೆ ಇತರರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

ಮಹಿಳೆಯರು ಅಧಿಕ ಆದಾಯದ ಸಣ್ಣ ಪ್ರಮಾಣದ ಚಟುವಟಿಕೆಗಳನ್ನು ಕೈಗೊಳ್ಳಬೇಕು: ಎಸ್.ಎನ್.ಮಂಜುನಾಥ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.18–ಮಹಿಳೆಯರು ಅಧಿಕ ಆದಾಯವನ್ನುಗಳಿಸುವಂತಹ ಸಣ್ಣ ಪ್ರಮಾಣದ ಚಟುವಟಿಕೆಗಳನ್ನು,ಮಹಿಳಾ ಸ್ವಸಹಾಯ ಸಂಘಗಳು ಕೈಗೊಳ್ಳಬೇಕು. ಕೇವಲ ಕೃಷಿ ಇಲಾಖೆ ಅಲ್ಲದೇ, ಮೀನುಗಾರಿಕೆ, ತೋಟಗಾರಿಕಾ ಇಲಾಖೆ ಟಿಜಜಜಿಟಿಜಜಯಲ್ಲೂ ಸಹ ಗುಂಪುಗಾರಿಕೆಗೆ ಅವಕಾಶವಿದ್ದು, ತಾವೆಲ್ಲರೂ ಸದುಪಯೋಗಪಡಿಸಿಕೊಳ್ಳಬೇಕು ಎಂದು ಉಪ ಕೃಷಿ ನಿರ್ದೇಶಕ ಎಸ್ ಎನ್ ಮಂಜುನಾಥ ಅವರು ಹೇಳಿದರು.

ನಗರದ ಜಂಟಿ ಕೃಷಿ ನಿರ್ದೇಶಕರ ಕಚೇರಿಯ ಸಭಾಂಗಣದಲ್ಲಿ ಶುಕ್ರವಾರ ಆಯೋಜಿಸಿದ್ದ ಕೃಷಿ ಇಲಾಖೆಯ ಆತ್ಮ ಯೋಜನೆಯಡಿ ಮಹಿಳಾ ಕಿಸಾನ್ ದಿವಸ್ ಅಂಗವಾಗಿ ಬಳ್ಳಾರಿ ಹಾಗೂ ಕುರುಗೋಡು ತಾಲ್ಲೂಕಿನ ಮಹಿಳಾ ಸ್ವಸಹಾಯ ಗುಂಪುಗಳಿಗೆ ಕೌಶಲ್ಯಾಭಿವೃದ್ಧಿ ಹಾಗೂ ಬಲವರ್ಧನೆ ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಮಹಿಳೆಯರು ಸಣ್ಣ ಒಕ್ಕೂಟಗಳನ್ನು ಮಾಡಿಕೊಂಡು ಕೃಷಿ ಇಲಾಖೆಯಡಿ ದೊರೆಯುವ ಪಿ.ಎಮ್.ಎಫ್.ಎಂ.ಇ ಯೋಜನೆಯನ್ನು ಸದುಪಯೋಗಪಡಿಸಿಕೊಳ್ಳಬೇಕು. ಕಾರ್ಯಕ್ರಮದಲ್ಲಿ ಪ್ರಾತ್ಯಕ್ಷಿಕೆ ಮುಖಾಂತರ ತೋರಿಸಲಾಗುತ್ತಿರುವ ಜಾಮ್ ತಯಾರಿ ಹಾಗೂ ಕ್ರೋಶೆಟ್ ಚಟುವಟಿಕೆಯನ್ನು ಮುಂದಿನ ಒಂದು ವರ್ಷದೊಳಗೆ ಮಹಿಳಾ ಸ್ವಸಹಾಯ ಸಂಘಗಳು ಅಥವಾ ಕೃಷಿ ಸಖಿಯರು ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಮಹಿಳಾ ಸ್ವಸಹಾಯ ಸಂಘಗಳು ತಮ್ಮ ಉತ್ಪನ್ನಗಳನ್ನು ಬ್ರ್ಯಾಂಡಿಂಗ್ ಮಾಡಿ ಮಾರಾಟ ಮಾಡಬೇಕು. ಒಳ್ಳೆಯ ಉತ್ಪನ್ನವನ್ನು ತಯಾರಿಸಿದಲ್ಲಿ, ಮಾರ್ಟ್‌ಗಳು ತಮ್ಮಲ್ಲಿಗೇ ಬಂದು ಖರೀದಿಸುತ್ತಾರೆ. ಇದರಿಂದ ತಮ್ಮ ಉತ್ಪನ್ನದ ಬೇಡಿಕೆ ಕೂಡ ಹೆಚ್ಚಾಗುತ್ತದೆ. ಕೃಷಿ ಸಖಿಯರು ಎಲ್ಲಾ ಇಲಾಖೆಗಳ ಸೌಲಭ್ಯಗಳನ್ನು ತಿಳಿದು ಮಹಿಳಾ ಸ್ವಸಹಾಯ ಸಂಘಗಳಿಗೆ ಹಾಗೂ ರೈತ ಶಕ್ತಿ ಗುಂಪುಗಳಿಗೆ ಮಾಹಿತಿ ನೀಡಬೇಕು ಎಂದು ಹೇಳಿದರು.

ಸಹಾಯಕ ಕೃಷಿ ನಿರ್ದೇಶಕರಾದ ನದಾಫ್ ಅವರು ಮಾತನಾಡಿ, ರೈತ ಮಹಿಳೆಯರು ಕೇವಲ ಮನೆಕೆಲಸಕ್ಕಷ್ಟೇ ಸೀಮಿತವಾಗದೆ, ಮನೆಯ ಖರ್ಚನ್ನು ಭರಿಸುವ ಸಣ್ಣ ಉದ್ಯಮಗಳಾದ ಹಸಿಮೆಣಸಿನ ಪುಡಿ, ಅಗಸೆ ಪುಡಿ, ಗುಲಾಬ್ ಜಾಮೂನ್ ಪುಡಿ, ಮಿಕ್ಷಣ್ಣಿನ ಜಾಮ್ ಇನ್ನೂ ಮುಂತಾದವುಗಳನ್ನು ಒಂದು ಬ್ರ್ಯಾಂಡಿ ಹೆಸರನ್ನು ನೀಡಿ ತಮ್ಮ ಹಳ್ಳಿಗಳಲ್ಲಿ ಅಥವಾ ತಾಲೂಕಿನ ಮಳಿಗೆಗಳಲ್ಲಿ ಮಾರಬಹುದು. ಇದರಿಂದ ಮಹಿಳೆಯರು ಉಳಿತಾಯದ ಮನೋಭಾವವನ್ನು ಬೆಳೆಸಿಕೊಂಡು ಅಧಿಕ ಲಾಭವನ್ನು ಗಳಿಸಿ ಆರ್ಥಿಕವಾಗಿ ಸಶಕ್ತರಾಗಬೇಕೆಂದು ಮಹಿಳೆಯರಿಗೆ ಹುಮ್ಮಸ್ಸು ನೀಡಿದರು.

ಬಳಿಕ ಮಹೇಶ್ವರಿ ಅವರು ಕಾರ್ಯಕ್ರಮದಲ್ಲಿ ಸುಮಾರು ಎರಡು ಗಂಟೆಗಳ ಕಾಲ ಮಹಿಳಾ ಸ್ವಸಹಾಯ ಗುಂಪುಗಳಿಗೆ ಹಾಗೂ ಕೃಷಿ ಸಖಿಯರಿಗೆ ಸೀರೆಗಳಿಗೆ ಕ್ರೋಶೆಟ್ ಕೆಲಸ (ಕೊಂಬೆ ಹೆಣಿಗೆ) ಹಾಗೂ ವೇಸ್ಟ್ ಬಟ್ಟೆಗಳಿಂದ ಮ್ಯಾಟ್ ತಯಾರಿಸುವುದರ ಬಗ್ಗೆ ಪ್ರಾತ್ಯಕ್ಷಿಕೆ–ಯ ಮುಖಾಂತರ ತರಬೇತಿಯನ್ನು ನೀಡಿದರು. ಸುಮಂಗಲ ಅವರು ವಿವಿಧ ಬಗೆಯ ಹಣ್ಣುಗಳಿಂದ ಸೇಬು, ಬಾಳೆಹಣ್ಣು, ಕಿತ್ತಳೆ, ಕರಿದ್ರಾಕ್ಷಿ, ಸಪೋಟ ಮಿಕ್ಷಣ್ಣಿನ ಜಾಮ್ ತಯಾರಿಸುವುದನ್ನು ತಿಳಿಸಿ ಎಲ್ಲರಿಗೂ ಸವಿಯಲು ನೀಡಿದರು.

ಈ ಸಂದರ್ಭದಲ್ಲಿ ಆಡಳಿತಾಧಿಕಾರಿ ಕವಿತಾ, ಕೃಷಿ ಅಧಿಕಾರಿಗಳಾದ ಸೌಮ್ಯ, ರೇಖಾ, ಜ್ಯೋತಿ, ಗಾಯಿತ್ರಿ ಹಾಗೂ ಸಹಾಯಕ ಕೃಷಿ ಅಧಿಕಾರಿ ಅರುಣಾ, ಸುಷ್ಮ, ಆತ್ಮ ಯೋಜನೆಯ ತಾಲ್ಲೂಕು ತಾಂತ್ರಿಕ ವ್ಯವಸ್ಥಾಪಕರಾದ ವಾಣಿ ಕೋರಪ್ಪಳ, ಸಹಾಯಕ ತಾಂತ್ರಿಕ ವ್ಯವಸ್ಥಾಪಕರಾದ ಶಿಲ್ಪಾ ಸೇರಿದಂತೆ ಸ್ವ–ಸಹಾಯ ಗುಂಪಿನ ಸದಸ್ಯರು ಹಾಗೂ ಸಿಬ್ಬಂದಿಗಳು ಇತರರು ಉಪಸ್ಥಿತರಿದ್ದರು.

ಯಶಸ್ವಿಯಾದ ನಾಗರಿಕ ಸಮಿತಿಗಳು & ಒಗ್ಗೂಡಿಸುವಿಕೆ ಮೇಳದ ಕುರಿತು ತರಬೇತಿ ಕಾರ್ಯಕ್ರಮ.

ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : ಸಂಜೀವಿನಿ–ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಸಂವರ್ಧನ ಸಂಸ್ಥೆ–ಓಖಿಐಒ & ಕಖಿಖ–ಆಃಔ ಒಗ್ಗೂಡಿಸುವಿಕೆ ಯೋಜನೆಯಡಿ ನಾಗರಿಕ ಸಮಿತಿಗಳಾದ ಎಸ್ ಡಿ ಎಂ ಸಿ, ವಿ ಎಚ್ ಎಸ್ ಎಂ ಸಿ, ಬಾಲ ವಿಕಾಸ ಸಲಹಾ ಸಮಿತಿ & ಒಗ್ಗೂಡಿಸಬೇಕೆ ಮೇಳದ ಕುರಿತು ಸ್ಥಳೀಯ ಸಂಪನ್ಮೂಲ ವ್ಯಕ್ತಿಗಳಿಗೆ ಒಂದು ದಿನದ ತರಬೇತಿ ಕಾರ್ಯಕ್ರಮವನ್ನು ತಾಲೂಕ್ ಪಂಚಾಯತ್ ಸಭಾಂಗಣದಲ್ಲಿ ಆಯೋಜನೆ ಮಾಡಲಾಗಿತ್ತು ಸದರಿ ಕಾರ್ಯಕ್ರಮವನ್ನು ಅಂಬಣ್ಣ ಕಟಗಿ ಜಿಲ್ಲಾ ಕಾರ್ಯಕ್ರಮ ವ್ಯವಸ್ಥಾಪಕರು ಎನ್ ಆರ್ ಎಲ್ ಎಮ್ ಘಟಕದ ಇವರು ಸಸಿಗೆ ನೀರು ಹಾಕುವ ಮೂಲಕ ತರಬೇತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರು. ತರಬೇತಿ ತೆಗೆದುಕೊಂಡ ನಂತರ ಆಃಔ–ಕಖಿಖ ಒಗ್ಗೂಡಿಸುವಿಕೆ ಯೋಜನೆ ಅಡಿಯಲ್ಲಿ ಸಮುದಾಯದಲ್ಲಿ ಸರಿಯಾಗಿ ಅನುಷ್ಠಾನ ಮಾಡಿ. ನಮ್ಮ ಎಲ್ಲರಿಗೂ ಸರಿಯಾದ ಯೋಜನೆ ಪಡೆದುಕೊಳ್ಳಲು ಸಹಕರಿಸಿ ಎಂದು ತಿಳಿಸಿದರು & ಯೋಜನೆಯ ಮಹತ್ವದ ಕುರಿತು ವಿವರವಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ತಾಲೂಕ ಪಂಚಾಯತ್‌ನ ವ್ಯವಸ್ಥಾಪಕರಾಗಿರುವ ಬಸವರಾಜ ಪಾಟೀಲ್, ಜಿಲ್ಲಾ ಪಂಚಾಯತ್‌ನ ವ್ಯವಸ್ಥಾಪಕರಾದ ಜಾಕಿರ್ ಹುಸೇನ್, ತಾಲೂಕ ಕಾರ್ಯಕ್ರಮ ವ್ಯವಸ್ಥಾಪಕರಾದ ಸುನಿಲ್, ಶಿವಲೀಲಾ ಬಸಯ್ಯ ಹಿರೇಮಠ ತಾಲೂಕು ಸಂಪನ್ಮೂಲ ವ್ಯಕ್ತಿಗಳು(ಕಖಿಖ–ಆಃಔ) ವಲಯ ಮೇಲ್ವಿಚಾರಕರಾದ ವಿದ್ಯಾಲಕ್ಷ್ಮಿ, & ವೀರಣ್ಣ ಬಳೆಗಾರ. ತಾಲೂಕ ವ್ಯವಸ್ಥಾಪಕರಾದ ಕೊಟ್ರೇಶ್,ಯುವ ವೃತ್ತಿಪರರಾದ ಮಂಜುನಾಥ, ಸ್ಥಳೀಯ ಸಂಪನ್ಮೂಲ ವ್ಯಕ್ತಿಗಳು ಉಪಸ್ಥಿತರಿದ್ದರು.

ವಿಜಯನಗರ ಶ್ರೀಕೃಷ್ಣದೇವರಾಯ ವಿವಿಯ ಡಾ.ವಿ.ಲೋಕೇಶ್ ವಿದೇಶ ಪ್ರಯಾಣ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.18–ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಗಣಿತಶಾಸ್ತ್ರ ವಿಭಾಗದ ಮುಖ್ಯಸ್ಥ ಹಾಗೂ ಪ್ರಾಧ್ಯಾಪಕರಾದ ಡಾ.ವಿ.ಲೋಕೇಶ್ ಅವರು ಅ.21 ರಿಂದ 26 ರವರೆಗೆ ಇಂಡೋನೇಷ್ಯಾದಲ್ಲಿ ಜರುಗಲಿರುವ "ಐಐಸಿಎಂಎ–2025 ಅಂತರಾಷ್ಟ್ರೀಯ ಸಮ್ಮೇಳನ" ದ ಮುಖ್ಯ ಭಾಷಣಕಾರರಾಗಿ ಭಾಗವಹಿಸಲು ವಿದೇಶ ಪ್ರಯಾಣ ಮಾಡಲಿದ್ದಾರೆ. ಪ್ರತಿಷ್ಠಿತ 37ನೇ ಆವೃತ್ತಿಯ 'ಇಂಡೊ ಎಂಎಸ್' ಅಂತರಾಷ್ಟ್ರೀಯ ಸಮ್ಮೇಳನವು ಇಂಡೋನೇಷ್ಯಾದ ಈಸ್ಟ್ ಜಾವಾದಲ್ಲಿರುವ ಜಂಬೆರ್ ವಿಶ್ವವಿದ್ಯಾಲಯದಲ್ಲಿ ಈ ಬಾರಿ ಆಯೋಜಿಸಲಾಗಿದೆ. ಜಂಬೆರ್ ವಿಶ್ವವಿದ್ಯಾಲಯದ ಜಾಂಗ್‌ಜಿಯಾನ್ ಮೆಥಮೆಟಿಕಲ್ ಸೊಸೈಟಿ ಮತ್ತು ಸಿಜಿಎಎನ್‌ಟಿ ರಿಸರ್ಚ್ ಗ್ರೂಪ್ ಸಹಭಾಗಿತ್ವದಲ್ಲಿ ಪ್ರತಿವರ್ಷ ಸಮ್ಮೇಳನವನ್ನು ಆಯೋಜಿಸಲಾತ್ತದೆ. ಟರ್ಕಿ, ಚೀನಾ, ದಕ್ಷಿಣ ಕೊರಿಯಾ, ಫ್ರಾನ್ಸ್ ದೇಶಗಳ ಖ್ಯಾತ ಗಣಿತಶಾಸ್ತ್ರ ಪ್ರಾಧ್ಯಾಪಕರುಗಳು ಮುಖ್ಯ ಭಾಷಣಕಾರರಾಗಿ ಮತ್ತು ಸುಮಾರು 50ಕ್ಕೂ ಅಧಿಕ ದೇಶಗಳ ಶೈಕ್ಷಣಿಕ ವಲಯದ ಪ್ರತಿನಿಧಿಗಳು ಸಮ್ಮೇಳನದಲ್ಲಿ ಪಾಲ್ಗೊಳ್ಳಲಿದ್ದಾರೆ.

ಪ್ರತಿಷ್ಠಿತ ಸಮ್ಮೇಳನದಲ್ಲಿ ಭಾಗವಹಿಸಲು ಪ್ರಯಾಣ ಬೆಳೆಸಲಿರುವ ಡಾ.ವಿ.ಲೋಕೇಶ್ ಅವರಿಗೆ ವಿವಿಯ ಕುಲಪತಿಗಳಾದ ಪ್ರೊ.ಎಂ.ಮುನಿರಾಜು, ಕುಲಸಚಿವರಾದ ಸಿ.ನಾಗರಾಜು, ಕುಲಸಚಿವ (ಮೌಲ್ಯಮಾಪನ) ಪ್ರೊ. ಎನ್.ಎಂ ಸಾಲಿ, ವಿತ್ತಾಧಿಕಾರಿಗಳಾದ ನಾಗರಾಜ, ವಿವಿಯ ಸಿಬ್ಬಂದಿ ವರ್ಗ ಹಾಗೂ ಅವರ ಹಿತೈಷಿಗಳು, ಬಂಧು–ಮಿತ್ರರು ಶುಭ ಕೋರಿದ್ದಾರೆ ಎಂದು ವಿವಿಯು ಪ್ರಕಟಣೆಯಲ್ಲಿ ತಿಳಿಸಿದೆ.

ಅ.21 ರಂದು ಪೊಲೀಸ್ ಹುತಾತ್ಮರ ದಿನಾಚರಣೆ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.18–ಜಿಲ್ಲಾ ಪೊಲೀಸ್ ವತಿಯಿಂದ ಪೊಲೀಸ್ ಹುತಾತ್ಮರ ದಿನಾಚರಣೆ ಕಾರ್ಯಕ್ರಮವನ್ನು ಅ.21 ರಂದು ಬೆಳಿಗ್ಗೆ 8 ಗಂಟೆಗೆ ನಗರದ ಜಿಲ್ಲಾ ಪೊಲೀಸ್ ಕವಾಯತು ಮೈದಾನದಲ್ಲಿ ಹಮ್ಮಿಕೊಳ್ಳಲಾಗಿದೆ.

ಬಳ್ಳಾರಿ ವಲಯ ಪೊಲೀಸ್ ಮಹಾ ನಿರೀಕ್ಷಕರಾದ ವರ್ತಿಕ ಕಟಿಯಾರ್ ಅವರು ಅಧ್ಯಕ್ಷತೆ ವಹಿಸುವರು.

ಜಿಲ್ಲಾಧಿಕಾರಿ ಕೆ.ನಾಗೇಂದ್ರ ಪ್ರಸಾದ್ ಅವರು ಮುಖ್ಯ ಅತಿಥಿಯಾಗಿ ಭಾಗವಹಿಸುವರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ.ವಿ.ಜೆ.,ಹೆಚ್ಚುವರಿ ಪೊಲೀಸ್ ಅಧೀಕ್ಷಕ ಕೆ.ಪಿ.ರವಿ ಕುಮಾರ್, ನವೀನ್ ಕುಮಾರ್. ಎನ್ ಸೇರಿದಂತೆ ಜಿಲ್ಲಾ ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

ಬಳ್ಳಾರಿ ಮಹಾನಗರ ಪಾಲಿಕೆ: ಸಾಲ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.18–ಬಳ್ಳಾರಿ ಮಹಾನಗರ ಪಾಲಿಕೆ ವತಿಯಿಂದ ಪ್ರಧಾನಮಂತ್ರಿ ಬೀದಿ ವ್ಯಾಪಾರಿಗಳ ಆತ್ಮ ನಿರ್ಭರ್ ನಿಧಿ ಯೋಜನೆಯಡಿ ಬ್ಯಾಂಕ್‌ಗಳ ಮೂಲಕ ಸಾಲ ಸೌಲಭ್ಯಕ್ಕಾಗಿ ನಗರದ ಬೀದಿ ಬದಿ ವ್ಯಾಪಾರಸ್ಥರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಮಹಾನಗರ ಪಾಲಿಕೆಯ ಆಯುಕ್ತ ಪಿ.ಎಸ್.ಮಂಜುನಾಥ ಅವರು ತಿಳಿಸಿದ್ದಾರೆ.

ಬೇಕಾದ ದಾಖಲೆ:

ಅರ್ಜಿದಾರರ ಆಧಾರ್ ಕಾರ್ಡ್, ಬೀದಿ ಬದಿ ವ್ಯಾಪಾರಸ್ಥರ ಗುರುತಿನ ಚೀಟಿ, ಬ್ಯಾಂಕ್ ಪಾಸ್ ಪುಸ್ತಕ, 2 ಪಾಸ್‌ಪೋರ್ಟ್ ಭಾವಚಿತ್ರ, ವ್ಯಾಪಾರ ಮಾಡುವ ಭಾವಚಿತ್ರ, ರೇಷನ್ ಕಾರ್ಡ್ ಇನ್ನಿತರೆ ದಾಖಲೆಗಳನ್ನು ಸಲ್ಲಿಸಬೇಕು. ಬೀದಿ ಬದಿ ವ್ಯಾಪಾರಸ್ಥರು ಪಿಎಮ್–ಸ್ವಾನಿಧಿ ಆನ್‌ಲೈನ್ ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಮಹಾನಗರ ಪಾಲಿಕೆಯ ವಲಯ ಕಛೇರಿ – 2 (ಹಳೇ ರ ಡೇ–ನಲ್ಮ್ ಶಾಖೆ ಅಥವಾ ದೂ.08392–273479, 278168 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕುರುಗೋಡು ಪುರಸಭೆ: ಸ್ವ–ಸಹಾಯಕ ಗುಂಪುಗಳ ಸದಸ್ಯರ ನೇಮಕ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.18–ಕುರುಗೋಡು ಪುರಸಭೆಯ ಸ್ವಚ್ಛ ಭಾರತ್ ಮಿಷನ್–2.0 ಯೋಜನೆಯ ಐ.ಇ.ಸಿ ಘಟಕದ ಡಿ ಘನ ಮತ್ತು ದ್ರವತ್ಯಾಜ್ಯ ನಿರ್ವಹಣೆ ಕುರಿತು ಮಾಹಿತಿ ಇರುವ ಹಾಗೂ ನಿರ್ವಹಿಸುವ ಸ್ವ–ಸಹಾಯ ಗುಂಪುಗಳಿಂದ ಸದಸ್ಯರ ನೇಮಕಕ್ಕೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಕುರುಗೋಡು ಪುರಸಭೆಯ ಮುಖ್ಯಾಧಿಕಾರಿ ಅವರು ತಿಳಿಸಿದ್ದಾರೆ.

ಅರ್ಹತೆ:

ಅರ್ಜಿ ಸಲ್ಲಿಸುವ ಅಭ್ಯರ್ಥಿಯು ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು. ಕನ್ನಡ ಮಾತನಾಡಲು,ಬರೆಯಲು ಬರಬೇಕು. ಸ್ವ–ಸಹಾಯಕ ಗುಂಪಿನಲ್ಲಿ ಕಾರ್ಯನಿರ್ವಹಿಸಿರುವ ಬಗ್ಗೆ ನಲ್ಮ್/ಭಾರತ/ಕರ್ನಾಟಕ ಸರ್ಕಾರದಿಂದ ಸೂಕ್ತ ದಾಖಲೆಗಳನ್ನು ಹೊಂದಿರಬೇಕು. ಅರ್ಜಿದಾರರು ಕಂಪ್ಯೂಟರ್ ಸಾಕ್ಷರತೆಯ ಎಮ್ ಎಸ್ ಆಫೀಸ್ ಮತ್ತು ಎಕ್ಸ್‌ನಲ್ಲಿ ನಿರ್ವಹಿಸಿರುವ ಬಗ್ಗೆ ಕನ್ನಡ ಮತ್ತು ಆಂಗ್ಲದಲ್ಲಿ ಪರಿಣಿತರಾಗಿರಬೇಕು.

ಮಾಹಿತಿ ಶಿಕ್ಷಣ ಸಂವಾಹನದಡಿ ಗ್ರಾಮ ಪಂಚಾಯತಿ ಅಥವಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸಿರುವ ಅನುಭವವುಳ್ಳ ಅಭ್ಯರ್ಥಿಗಳನ್ನು ಆದ್ಯತೆ ಮೇರೆಗೆ ಆಯ್ಕೆ ಮಾಡಲಾಗುವುದು.

ಅರ್ಜಿಗಳನ್ನು ಕುರುಗೋಡು ಪುರಸಭೆ ಕಚೇರಿಯಲ್ಲಿ ಪಡೆದು ಭರ್ತಿ ಮಾಡಿ ಇದೇ ಕಚೇರಿಗೆ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ನವೆಂಬರ್ 02 ಕೊನೆಯ ದಿನ.

ಹೆಚ್ಚಿನ ಮಾಹಿತಿಗಾಗಿ ಕುರುಗೋಡು ಪುರಸಭೆ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್

ರಸ್ತೆ ಕಾಮಗಾರಿಗಳ ಕೆಲಸ ಗುಣಾತ್ಮಕವಾಗಿರಲಿ ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ರಸ್ತೆ ಕಾಮಗಾರಿಗಳ ಕೆಲಸ ಗುಣಾತ್ಮಕವಾಗಿ ಮಾಡಬೇಕು ಕಳಪೆಯಾದರೆ ಜನರು ದಿನಾಲು ತಮಗೆ ಬೈಯುತ್ತಾ ತಿರುಗಾಡುತ್ತಾರೆ ಎಂದು ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಅವರು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಹೇಳಿದರು.

ಅವರು ಶನಿವಾರ ಕೊಪ್ಪಳ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಕರೆದ ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ರಸ್ತೆಗಳು ಬಹಳ ಕಡೆ ಹಾಳಾಗಿದ್ದು ರಸ್ತೆಯ ಮಧ್ಯದಲ್ಲಿ ಎಲ್ಲಿಗುಂಡಿಗಳು ಬಿದ್ದಿವೆ ಅವುಗಳನ್ನು ಮುಚ್ಚಲು ಮೊದಲ ಆದ್ಯತೆ ನೀಡಬೇಕು. ಲೋಕೋಪಯೋಗಿ ಇಲಾಖೆ ಈಗಾಗಲೇ 15 ಕೋಟಿ 71 ಲಕ್ಷ ಅನುದಾನ ಬಂದಿದ್ದು ಅದನ್ನು ಆದಷ್ಟು ಬೇಗನೆ ಟೆಂಡರ್ ಕರೆದು ಅವಶ್ಯಕತೆ ಇರುವಲ್ಲಿ ರಸ್ತೆ ಗುಂಡಿಗಳನ್ನು ಮುಚ್ಚುವ ಕೆಲಸ ಮಾಡಬೇಕು. ಕೆಲವು ಕಡೆ ಸರ್ವಿಸ್ ರೋಡಗಳು ಹಾಳಾಗಿದ್ದು ಅವುಗಳನ್ನು ಸಹ ಸರಿಪಡಿಸಬೇಕೆಂದರು.

ರಸ್ತೆ ಅಪಘಾತಗಳಲ್ಲಿ ಏನಾದರೂ ಆದರೆ ಸಂಬಂಧಿಸಿದ ಇಲಾಖೆಯ ಜೊತೆಗೆ ಆಯಾ ಕಾಮಗಾರಿಗಳ ಗುತ್ತಿಗೆದಾರರಿಗೆ ಜವಾಬ್ದಾರನ್ನಾಗಿ ಮಾಡಲಾಗುತ್ತಿದೆ. ಈ ಕುರಿತು ಎಚ್ಚರಿಕೆಯಿಂದ ಕೆಲಸ ಮಾಡಿ. ನಗರ ಸ್ಥಳೀಯ ಸಂಸ್ಥೆಗಳು ತಮ್ಮ ವ್ಯಾಪ್ತಿರ ರಸ್ತೆಗಳು ಎಲ್ಲಿ ಹಾಳಾಗಿವೆ ಅವುಗಳನ್ನು ಸರಿಪಡಿಸಿ. ಎನ್.ಎಚ್. 67 ಮಂಗಳಾಪುರ ಮತ್ತು ಬಸಾಪುರ ಹತ್ತಿರದ ರಸ್ತೆ ಸಮಸ್ಯೆ ಬಗೆಹರಿಸಲು ಎಷ್ಟು ದಿನ ಬೇಕು. ಆದಷ್ಟು ಬೇಗನೆ ಅಲ್ಲಿಯ ಸಮಸ್ಯೆಗಳನ್ನು ಸರಿಪಡಿಸಬೇಕೆಂದು ಸಂಬಂಧಿಸಿದ ರಾಷ್ಟ್ರೀಯ ಹೆದ್ದಾರಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಗಂಗಾವತಿಯಲ್ಲಿ ಕೆ.ಆರ್.ಐ.ಡಿ.ಎಲ್ ನವರು ರಸ್ತೆ ಕೆಲಸವನ್ನು ಸರಿಯಾಗಿ ಮಾಡಿಲ್ಲ ಎನ್ನುವ ದೂರುಗಳಿಗೆ ಅಲ್ಲಿ ಎಷ್ಟು ರಸ್ತೆಗಳಲ್ಲಿ ತಾವು ಕೆಲಸ ಮಾಡಿದ್ದಿರಾ ಆದಷ್ಟು ಬೇಗನೆ ಅವುಗಳನ್ನು ಸರಿಪಡಿಸಬೇಕು. ಲೋಕೋಪಯೋಗಿ ಇಲಾಖೆ, ರಾಷ್ಟ್ರೀಯ ಹೆದ್ದಾರಿ ಸೇರಿದಂತೆ ಇತರೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಜಿಲ್ಲೆಯಲ್ಲಿ ರಸ್ತೆಯ ಯಾವುದೇ ಕೆಲಸ ಕಾಮಗಾರಿಗಳನ್ನು ಕಾಲ ಮಿತಿಯಲ್ಲಿ ಮುಗಿಸುವುದರ ಜೊತೆಗೆ ಅವುಗಳನ್ನು ಗುಣಾತ್ಮಕವಾಗಿ ಮಾಡಬೇಕೆಂದು ಹೇಳಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ ಎಲ್. ಅರಸಿದ್ದಿ ಮಾತನಾಡಿ, ಹೈವೇ ಟೋಲಗಳಲ್ಲಿ ಬೈಕ್‌ಗಳು ಹೋಗುವಾಗ ಅವು ತಮ್ಮ ಸಿಸಿಟಿವಿ ಕ್ಯಾಮರಾಗಳಲ್ಲಿ ದಾಖಲಾಗುತ್ತಿಲ್ಲ. ಅದನ್ನು ಸರಿಪಡಿಸಿ. ರಾಷ್ಟ್ರೀಯ ಹೆದ್ದಾರಿಗಳಲ್ಲಿ ವಾಹನಗಳ ಸ್ಪೀಡ್ ರಡಾರಗಳನ್ನು ಅಳವಡಿಸುವುದರ ಜೊತೆಗೆ ಸೈನೇಜ ಮತ್ತು ಬ್ಯಾರಿಕೇಡಗಳನ್ನು ಅಳವಡಿಸಬೇಕೆಂದು ಹೇಳಿದರು.

ಈ ಸಭೆಯಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಉಪ ಅರಣ್ಯ ಸಂರಕ್ಷಣಾಧಿಕಾರಿ ನಿರ್ಮಲಾ, ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಅಭಿಯಂತರಾದ ಹೇಮಂತ್, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಮಂಜುನಾಥ ಗುಂಡುರ, ರಾಷ್ಟ್ರೀಯ ಹೆದ್ದಾರಿ ಮತ್ತು ಕೆ.ಆರ್.ಐ.ಡಿ.ಎಲ್. ನ ಅಧಿಕಾರಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

ಮಾಲಿನ್ಯ ನಿಯಂತ್ರಣ ಮಂಡಳಿಯ ಸುವರ್ಣ ಮಹೋತ್ಸವ

ನವನಗರದ ಉದ್ಯಾನವನದ ಸ್ವಚ್ಛತೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.18–ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಸುವರ್ಣ ಮಹೋತ್ಸವದ ಹಿನ್ನೆಲೆಯಲ್ಲಿ ನವನಗರದ ಸೆಕ್ಟರ್ ನಂ.37ರಲ್ಲಿರುವ ಸಾರ್ವಜನಿಕರ ಉದ್ಯಾನವನದ ಸ್ವಚ್ಛತಾ ಕಾರ್ಯಕ್ರಮ ಶನಿವಾರ ಜರುಗಿತು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕರ್ನಾಟಕರಾಜ್ಯಮಾಲಿನ್ಯನಿಯಂತ್ರಣ ಮಂಡಳಿ, ಬಾಗಲಕೋಟೆ ಪಟ್ಟಣ ಅಭಿವೃದ್ಧಿಪ್ರಾಧಿಕಾರ ಹಾಗೂ ಕಾರ್ತಿಕ ಆಗ್ರೋ ಇಂಡಸ್ಟ್ರೀಸ್ ಉದ್ದಿಮೆ ಸಹಯೋಗದಲ್ಲಿ ಹಮ್ಮಿಕೊಂಡ ಸ್ವಚ್ಛತಾ ಕಾರ್ಯಕ್ರಮದಲ್ಲಿ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ವರ್ಗ ಹಾಗೂ ಕಾರ್ಖಾನೆಗಳ ಸಿಬ್ಬಂದಿಗಳು ಸೇರಿ 40 ಕ್ಕೂ ಹೆಚ್ಚು ಜನ ಸ್ವಚ್ಛತಾ ಕಾರ್ಯದಲ್ಲಿ ಪಾಲ್ಗೊಂಡಿದ್ದರು. ಸ್ವಚ್ಛತಾ ಕಾರ್ಯದಲ್ಲಿ ಮಾಲಿನ್ಯ ನಿಯಂತ್ರಣ ಮಂಡಳಿಯ ಜಿಲ್ಲಾ ಪರಿಸರ ಅಧಿಕಾರಿ ಅನೀಲಕುಮಾರ ಚಳಗೇರಿ, ಬಾಗಲಕೋಟೆ ಪಟ್ಟಣ ಅಭಿವೃದ್ಧಿ ಪ್ರಾಧಿಕಾರದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಸುರೇಶ ತೆಗ್ಗಿ, ಮೆ.ಕಾರ್ತಿಕ್ ಆಗ್ರೋ ಇಂಡಸ್ಟ್ರೀಸ್‌ಲಿ.ಉದ್ದಿಮೆಯವ್ಯವಸ್ಥಾಪಕ ವೈಭವ ಯಾದವ ಹಾಗೂ ಸಿಬ್ಬಂದಿ ವರ್ಗದವರು ಇದ್ದರು.

ನ.3 ರಿಂದ ಕುಷ್ಠರೋಗ ಪತ್ತೆ ಹಚ್ಚುವ ಅಭಿಯಾನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.18–ಬಾಗಲಕೋಟೆ ಜಿಲ್ಲೆಯಲ್ಲಿ ನವೆಂಬರ್ 3 ರಿಂದ 19 ರವರೆಗೆ ಕುಷ್ಠರೋಗ ಪ್ರಕರಣ ಪತ್ತೆ ಹಚ್ಚುವ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಮಂಜುನಾಥ ಡಿ ಎನ್. ಹೇಳಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಸಂಜೆ ಜರುಗಿದ ಕುಷ್ಠರೋಗ ಪ್ರಕರಣ ಪತ್ತೆ ಹಚ್ಚುವ ಅಭಿಯಾನ ಕಾರ್ಯಕ್ರಮದ ಅಂತರ ಇಲಾಖಾ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪ್ರಾಥಮಿಕ ಹಂತದಲ್ಲೇ ಕುಷ್ಠರೋಗ ಪ್ರಕರಣಗಳನ್ನು ಪತ್ತೆಹಚ್ಚಿ, ಚಿಕಿತ್ಸೆ ನೀಡಿ ಗುಣಮುಖರನ್ನಾಗಿಸುವ ಮೂಲಕ ಬಾಗಲಕೋಟೆ ಜಿಲ್ಲೆಯನ್ನು ಕುಷ್ಠರೋಗ ಮುಕ್ತ ಜಿಲ್ಲೆಯನ್ನಾಗಿ ಮಾಡಬೇಕಾಗಿದೆ ಎಂದು ಆರೋಗ್ಯ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿ ಹೊಸದಾಗಿ 21 ಕುಷ್ಠರೋಗ ಪ್ರಕರಣಗಳು ಕಂಡುಬಂದಿದ್ದು, ಇವರಿಗೆ ಸೂಕ್ತ ಚಿಕಿತ್ಸೆ ನೀಡಲಾಗಿದೆ, ಗ್ರೇಡ್–2 ಪ್ರಕರಣ ಕೂಡ ಒಂದು ಇದ್ದು, ಕುಷ್ಠರೋಗದಿಂದ ಸಂಪೂರ್ಣ ಗುಣಮುಖ ಹೊಂದಲು ಉಚಿತ ಹಾಗೂ ಗುಣಮಟ್ಟದ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಮಂಜುನಾಥ ತಿಳಿಸಿದರು.

ಡಾ.ಶಿವನಗೌಡ ಪಾಟೀಲ ಪ್ರಾಸ್ತಾವಿಕ ನುಡಿಗಳನ್ನಾಡಿ, ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನದ ರಾಷ್ಟ್ರೀಯ ಕುಷ್ಠರೋಗ ನಿರ್ಮೂಲನಾ ಕಾರ್ಯಕ್ರಮದಲ್ಲಿ ಜಿಲ್ಲೆಯಲ್ಲಿ ಕುಷ್ಠರೋಗ ಪ್ರಕರಣ ಪತ್ತೆ ಹಚ್ಚುವ ಆಂದೋಲನವನ್ನು ಹಮ್ಮಿಕೊಳ್ಳಲಾಗುತ್ತಿದ್ದು, ಈ ಕಾರ್ಯಕ್ರಮದಡಿ ಕುಷ್ಠರೋಗ ಪ್ರಕರಣಗಳು ಕಂಡುಬಂದ ಪ್ರದೇಶಗಳಿಗೆ ಆರೋಗ್ಯ ಇಲಾಖೆ ಸಿಬ್ಬಂದಿ, ಆಶಾ ಕಾರ್ಯಕರ್ತೆಯರು ಭೇಟಿ ನೀಡಿ ಸಮೀಕ್ಷೆ ಕೈಗೊಂಡು ಕುಷ್ಠರೋಗ ಸಂಪರ್ಕಿತರನ್ನು ಪರೀಕ್ಷೆ ಮಾಡಲಿದ್ದಾರೆ ಎಂದು ತಿಳಿಸಿದರು.

ಕುಷ್ಠರೋಗಿಗಳಿಗೆ ಸರ್ಕಾರದಿಂದ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಒದಗಿಸಲು ಕ್ರಮವಹಿಸಲಾಗುತ್ತಿದ್ದು, ಪ್ರಾಥಮಿಕ ಹಂತದಲ್ಲೇ ಕುಷ್ಠರೋಗವನ್ನು ಗುರುತಿಸಿ, ರೋಗಿಯು ನಿಯಮಿತವಾಗಿ ಚಿಕಿತ್ಸೆ ಪಡೆದಲ್ಲಿ ಸಂಪೂರ್ಣವಾಗಿ ಕುಷ್ಠರೋಗವನ್ನು ಗುಣಪಡಿಸಬಹುದು. ಕುಷ್ಠರೋಗವು ಮೈಕೋಬ್ಯಾಕ್ಟಿರಿಯಂ ಲೆಪ್ರ ಎಂಬ ರೋಗಾಣುವಿನಿಂದ ಉಂಟಾಗುವ ಸಾಂಕ್ರಾಮಿಕ ರೋಗ. ಇದು ಮುಖ್ಯವಾಗಿ ನರಗಳು ಹಾಗೂ ಚರ್ಮದ ಮೇಲೆ ಪರಿಣಾಮ ಬೀರುತ್ತದೆ. ಚರ್ಮದ ಮೇಲ್ಭಾಗದಲ್ಲಿ ಮಚ್ಚೆಗಳು, ಗಂಟುಗಳು, ಹುಣ್ಣುಗಳು ಕಂಡಬಂದಲ್ಲಿ ಸಮೀಪದ ಸರಕಾರಿ ಆರೋಗ್ಯ ಸಂಸ್ಥೆಗೆ ಭೇಟಿ ನೀಡಿ ಪರೀಕ್ಷೆ ಮಾಡಿಕೊಳ್ಳಬೇಕು ಎಂಬ ಸಂದೇಶವನ್ನು ಪ್ರಚುರ ಪಡಿಸಬೇಕು. ಕುಷ್ಠರೋಗ ಪ್ರಕರಣ ಪತ್ತೆಯಾದಲ್ಲಿ ಸರ್ಕಾರದಿಂದ ಉಚಿತವಾಗಿ ಚಿಕಿತ್ಸೆ ದೊರೆಯಲಿದೆ ಎಂಬುದನ್ನು ಪ್ರಚಾರ ನೀಡಿ ಜಾಗೃತಿ ಮೂಡಿಸಬೇಕಾಗಿದೆ ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಮಲೇರಿಯಾ ನಿಯಂತ್ರಣಾಧಿಕಾರಿ ಡಾ.ಸುವರ್ಣ ಕುಲಕರ್ಣಿ, ಜಿಲ್ಲಾ ಸಮೀಕ್ಷಣಾಧಿಕಾರಿ ಡಾ.ದಯಾನಂದ ಕರೆಣ್ಣನವರ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಪ್ರಭಾಕರ ಕೆ ಸೇರಿ ಇತರರು ಉಪಸ್ಥಿತರಿದ್ದರು.

ಕಾತರಕಿ ವಿದ್ಯಾರ್ಥಿನಿಯರು ವಿಭಾಗ ಮಟ್ಟಕ್ಕೆ ಆಯ್ಕೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.18–ಬಾಗಲಕೋಟೆ ಜಿಲ್ಲಾ ಕ್ರೀಡಾಂಗಣದಲ್ಲಿ ಜರುಗಿದ ಜಿಲ್ಲಾ ಮಟ್ಟದ ಪ್ರಾಥಮಿಕ ಹಾಗೂ ಪ್ರೌಢಶಾಲಾ ಕ್ರೀಡಾಕೂಟದಲ್ಲಿ 14 ವಯೋಮಾನದೊಳಗಿನ ಈ ಕಬ್ಬಡ್ಡಿ ಪಂದ್ಯಾವಳಿಯಲ್ಲಿ ಭಾಗವಹಿಸಿದ್ದ ತಂಡ ಪ್ರಥಮ ಸ್ಥಾನ ಪಡೆದು ವಿಭಾಗ ಮಟ್ಟಕ್ಕೆ ಆಯ್ಕೆಯಾಯಿತು. ಕ್ರೀಡಾಕೂಟದಲ್ಲಿ ಉತ್ತಮ ಸಾಧನೆ ತೋರಿ ಶಾಲೆಗೆ ಕೀರ್ತಿ ತಂದಿರುವ ವಿದ್ಯಾರ್ಥಿನಿಯರನ್ನು ಮುಖ್ಯ ಶಿಕ್ಷಕ ವಿ.ಎಸ್.ಕಲ್ಯಾಣಮಠ, ಶಾಲಾ ಮೇಲುಸ್ತುವಾರಿ ಸಮಿತಿ ಅಧ್ಯಕ್ಷ ಅಧ್ಯಕ್ಷ ಮಹಾಂತೇಶ ಸುಳ್ಳದ, ಸಮೂಹ ಸಂಪನ್ಮೂಲ ಅಧಿಕಾರಿ ವಿ.ಎನ್.ಸಾಲಾಪುರ, ಶಾಲಾ ಶಿಕ್ಷಕ ಸಿಬ್ಬಂದಿ ಹಾಗೂ ಗ್ರಾಮಸ್ಥರು ಅಭಿನಂದಿಸಿದ್ದಾರೆ.

ಕಾನೂನು ನೆರವು ಉಪ ಅಭಿಕ್ಷಕರ ಹುದ್ದೆಗೆ ಅರ್ಜಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.18–ಬಾಗಲಕೋಟೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಡಿಯಲ್ಲಿ ರಚನೆಗೊಂಡ ಕಾನೂನು ನೆರವು ಅಭಿರಕ್ಷಕರ ಕಚೇರಿಯಲ್ಲಿ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸಲು ಖಾಲಿ ಇರುವ ಉಪ ಕಾನೂನು ನೆರವು ಅಭಿರಕ್ಷಕರು–1, ಸಹಾಯಕ ಕಾನೂನು ನೆರವು ಅಭಿರಕ್ಷಕರು–1 ಹುದ್ದೆಗಳಿಗೆ ಅರ್ಹ ನ್ಯಾಯವಾದಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಅಭ್ಯರ್ಥಿಗಳು ಅಕ್ಟೋಬರ 25 ರೊಳಗಾಗಿ ಕಛೇರಿಯ ಅವಧಿಯಲ್ಲಿ ಸದಸ್ಯಕಾರ್ಯದರ್ಶಿಗಳ ಕಾರ್ಯಾಲಯ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಎಡಿಆರ್ ಕಟ್ಟಡ ಸಿವಿಲ್ ನ್ಯಾಯಾಲಯ ಆವರಣ, ಬಾಗಲಕೋಟೆ ಇವರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ನ್ಯಾಯಾಲಯದ ಅಂತರ್ಜಾಲದಿಂದ ಪಡೆದುಕೊಳ್ಳಬಹುದಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ಎನ್.ವಿ.ವಿಜಯ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಭಾಗ್ಯಲಕ್ಷ್ಮೀ ಯೋಜನೆ ಪರಿಪಕ್ವ ಮೊತ್ತಕ್ಕಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.18–ಭಾಗ್ಯಲಕ್ಷ್ಮೀ ಯೋಜನೆಯಡಿ ಬಾದಾಮಿ ತಾಲೂಕಿನ ಸನ್–2006–07ನೇ ಸಾಲಿನಲ್ಲಿ ಜನಿಸಿದ ಭಾಗ್ಯಲಕ್ಷ್ಮೀ ಫಲಾನುಭವಿಗಳಿಗೆ 18 ವರ್ಷ ಪೂರ್ಣಗೊಂಡಿದ್ದು, ಫಲಾನುಭವಿಗಳು ಪರಿಪಕ್ವ ಮೊತ್ತವನ್ನು ಪಡೆಯಲು ಕೊನೆಯ ದಿನಾಂಕ ಅಕ್ಟೋಬರ್ 30ರ ಒಳಗಾಗಿ ದಾಖಲಾತಿಗಳನ್ನು ಬಾದಾಮಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿಗೆ ಭೇಟಿ ನೀಡಿ ಅರ್ಜಿ ಸಲ್ಲಿಸಬೇಕು ಎಂದು ಬಾದಾಮಿ ಶಿಶು ಅಭಿವೃದ್ಧಿ ಯೋಜನಾಧಿಕಾರಿ ದಸ್ತಗೀರಸಾಬ ಮುಲ್ಲಾ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಿಧನ ವಾರ್ತೆ

ನೀಲಾಬಾಯಿ ಕೋರಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.18–ನವನಗರದ ಸೆಕ್ಟರ್ ನಂ.63–ಎ ನಿವಾಸಿ ಶ್ರೀಮತಿ ನೀಲಾಬಾಯಿ ಹುಚ್ಚಪ್ಪ ಕೋರಿ(88)ಶನಿವಾರ ನಿಧನರಾದರು. ಮೃತರು ಮೂವರು ಪುತ್ರರು, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಅ.19 ರವಿವಾರ ಬೆಳಿಗ್ಗೆ ನವನಗರದ ರುದ್ರಭೂಮಿಯಲ್ಲಿ ನಡೆಯಲಿದೆ.

ಜಿಲ್ಲಾ ಮಟ್ಟದ ಪಂದ್ಯಾವಳಿಯಲ್ಲಿ ಬಿಇಓ ಸಾವಳಗಿ ಅಭಿಮತ

ದೈಹಿಕ–ಮಾನಸಿಕ ಸದೃಢತೆಗೆ ಕ್ರೀಡೆ ಅಗತ್ಯ

ವಿದ್ಯಾರ್ಥಿಗಳು ಓದಿನೊಂದಿಗೆ ಕ್ರೀಡೆಗಳಿಗೂ ಮಹತ್ವ ನೀಡಬೇಕು ಆಟ ಮತ್ತು ಪಾಠ ಜೊತೆಯಾಗಿಯೇ ಇರಬೇಕು ನಡೆಯುತ್ತಿರುವ ಈ ಜಿಲ್ಲಾ ಮಟ್ಟದ ಕ್ರೀಡೆಯಲ್ಲಿ ಕ್ರೀಡಾ ಸ್ಫೂರ್ತಿಯೊಂದಿಗೆ ಭಾಗವಹಿಸಿ ಉತ್ತಮ ಪ್ರದರ್ಶನ ತೋರಿ ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿ ತಾಲೂಕಿಗೆ ಕೀರ್ತಿಯನ್ನು ತರಬೇಕು.

– ಎಸ್.ಸಾವಳಗಿ,ಬಿಇಓ ಮುದ್ದೇ ಬಿಹಾಳ.

ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಆಧುನಿಕ ಶೈಲಿಯ ಯಾಂತ್ರಿಕೃತ ಬದುಕಿಗೆ ಚೈತನ್ಯ ನೀಡಲು ಹಾಗೂ ದೈಹಿಕ ಮತ್ತು ಮಾನಸಿಕ ಸದೃಢತೆ ಸಾಧಿಸಲು ಕ್ರೀಡೆ ಅಗತ್ಯವಾಗಿದೆ. ಕ್ರೀಡೆಗಳು ವ್ಯಕ್ತಿಯ ಸರ್ವಾಂಗೀಣ ಅಭಿವೃದ್ಧಿಗೆ ಪೂರಕವಾಗಿವೆ ಎಂದು ಮುದ್ದೇಬಿಹಾಳ ಕ್ಷೇತ್ರ ಶಿಕ್ಷಣಾಧಿಕಾರಿ ಬಿ.ಎಸ್.ಸಾವಳಗಿ ಹೇಳಿದರು. ಶುಕ್ರವಾರ ಮೈಲೇಶ್ವರದ ಬ್ರಿಲಿಯಂಟ್ ಶಾಲೆಯ ಮೈದಾನದಲ್ಲಿ ಜಿಲ್ಲಾ ಪಂಚಾಯತ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ವಿಜಯಪುರ ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಾಗೂ ಕ್ಷೇತ್ರ ಸಮನ್ವಯಾಧಿಕಾರಿಗಳ ಕಾರ್ಯಾಲಯ ಮುದ್ದೇಬಿಹಾಳ ಹಾಗೂ ಬ್ರಿಲಿಯಂಟ್ ಕನ್ನಡ ಮತ್ತು ಆಂಗ್ಲ ಮಾಧ್ಯಮ ಪ್ರಾಥಮಿಕ ಹಾಗೂ ಪ್ರೌಢಶಾಲೆ ಮೈಲೇಶ್ವರ(ತಾಳಿಕೋಟಿ) ಇವರ ಸಹಯೋಗದಲ್ಲಿ 2025–26 ನೇ ಸಾಲಿನ ಜಿಲ್ಲಾ ಮಟ್ಟದ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ಬಾಲಕ–ಬಾಲಕಿಯರ ಖೋ–ಖೋ ಪಂದ್ಯಾವಳಿ ಉದ್ಘಾಟನಾ ಸಮಾರಂಭದಲ್ಲಿ ಕ್ರೀಡಾ ಧ್ವಜಾರೋಹಣವನ್ನು ನೆರವೇರಿಸಿ ಅವರು ಮಾತನಾಡಿದರು. ಕ್ರೀಡೆಯಲ್ಲಿ ಸೋಲು ಗೆಲುವು ಮುಖ್ಯವಲ್ಲ ಭಾಗವಹಿಸುವಿಕೆ ಮುಖ್ಯವಾಗಿದೆ ಜಿಲ್ಲಾ ಮಟ್ಟದ ಈ ಪಂದ್ಯಾವಳಿಯನ್ನು ಬ್ರಿಲಿಯಂಟ್ ಶಾಲೆಯ ಆಡಳಿತ ಮಂಡಳಿಯವರು ಬಹಳ ಅಚ್ಚುಕಟ್ಟಾಗಿ ಆಯೋಜನೆ ಮಾಡಿದ್ದಾರೆ ಅವರಿಗೆ ನಾನು ಅಭಿನಂದಿಸುತ್ತೇನೆ ಎಂದರು. ತಾಲೂಕ ದೈಹಿಕ ಶಿಕ್ಷಣ ಪರಿವೀಕ್ಷಕ ಬಿ.ವೈ.ಕವಡಿಕ್ರೀಡಾ ಜ್ಯೋತಿ ಸ್ವೀಕರಿಸಿ ಮಾತನಾಡಿ ಬ್ರಿಲಿಯಂಟ್ ಸಂಸ್ಥೆಯವರು ಜಿಲ್ಲಾ ಮಟ್ಟದ ಈ ಕ್ರೀಡಾಕೂಟವನ್ನು ರಾಜ್ಯಮಟ್ಟದ ರೀತಿಯಲ್ಲಿ ಆಯೋಜಿಸಿದ್ದಾರೆ ಅವರ ಈ ಕಾರ್ಯ ಇತರರಿಗೂ ಮಾದರಿಯಾಗಿದೆ ಎಂದರು. ಪೀರಾಪೂರ ಸರಕಾರಿ ಪ್ರೌಢಶಾಲೆ ಮುಖ್ಯ ಶಿಕ್ಷಕ ಆರ್.ಬಿ.ದಮ್ಮೂರಮಠ ಸಮಾರಂಭವನ್ನು ಉದ್ಘಾಟಿಸಿದರು. ದೈಹಿಕ ಶಿಕ್ಷಕ ಜಿಎಂ ಕಡ್ಲಿಮಟ್ಟಿ ಕ್ರೀಡಾ ಪ್ರತಿಜ್ಞಾ ವಿಧಿ ಭೋದಿಸಿದರು. ಕ್ರೀಡಾಪಟುಗಳಿಂದ ಆಕರ್ಷಕ ಪಥ ಸಂಚಲನ ನಡೆಯಿತು. ಶ್ರೀ ಮಾರುತಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಎನ್.ಬಿ.ನಡುವಿನಮನ

ಸೆನ್ಸೇಷನ್ ಸುದ್ದಿಗಳಿಂದ ಸಮಾಜಕ್ಕೆ ಏನು ಪ್ರಯೋಜನ – ಸಿಎಂ

ಮಲ್ಲಮ್ಮ ನುಡಿ ವಾರ್ತೆ

ಮೈಸೂರು ಅ 18:ಸೆನ್ಸೇಷನ್ ಸುದ್ದಿಗಳಿಂದ ಸಮಾಜಕ್ಕೆ ಏನು ಪ್ರಯೋಜನ ಎನ್ನುವುದನ್ನು ಪತ್ರಕರ್ತರು ಯೋಚಿಸಬೇಕು. ಸಮಾಜಕ್ಕೆಉಪಯೋಗಇಲ್ಲದನ್ನು ಏಕೆ ವರದಿ ಮಾಡಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರಶ್ನಿಸಿದರು.ಮೈಸೂರು ಜಿಲ್ಲಾ ಫೋಟೋ ಜರ್ನಲಿಸ್ಟ್ ಅಸೋಸಿಯೇಷನ್ ವತಿಯಿಂದ ಹಮ್ಮಿಕೊಂಡಿದ್ದಕಾರ್ಯಕ್ರಮದಲ್ಲಿ ಆಯ್ಕೆಆದಫೋಟೋಜರ್ನಲಿಸ್ಟ್ ಗಳಿಗೆಮುಖ್ಯಮಂತ್ರಿಸಿದ್ದರಾಮಯ್ಯ ಪ್ರಶಸ್ತಿ ವಿತರಿಸಿ ಮಾತನಾಡುತ್ತಾ, ಒಂದುಫೋಟೋಸಾವಿರಪದಗಳಿಗೆ ಸಮ.ಹೀಗಾಗಿಫೋಟೋಜರ್ನಲಿಸ್ಟ್ ಗಳುಪತ್ರಿಕಾವೃತ್ತಿಯಮುಖ್ಯ ಭಾಗ. ಆದರೆತೆಗೆದಫೋಟೋಗಳನ್ನುಬೇರೆ ಸಂದರ್ಭಗಳಲ್ಲಿ ಬಳಸಿ ತಿರುಚಿದ ಅಭಿಪ್ರಾಯ ಮೂಡಿಸುವುದು ಆರೋಗ್ಯಕರವಲ್ಲ ಎಂದರು.

ಪತ್ರಕರ್ತರು ಸತ್ಯ ಹೇಳ್ತಾರೆ ಎನ್ನುವನಂಬಿಕೆಯಿಂದನಿಮ್ಮನ್ನು ಪ್ರಜಾಪ್ರಭುತ್ವದನಾಲ್ಕನೇಆಧಾರ ಸ್ತಂಭ ಎಂದು ಕರೆಯುತ್ತಾರೆ. ಪತ್ರಕರ್ತರುಸುಳ್ಳುಹೇಳುವುದಿಲ್ಲ ಎನ್ನುವ ನಂಬಿಕೆ ಈಗಲೂ ಇದೆ. ಆದರೆ, ಊಹಾ ಪತ್ರಿಕೋದ್ಯಮ ವಿಪರೀತಆಗುತ್ತಿದೆ. ಊಹೆಮಾಡಿ ಕೊಂಡುಸುದ್ದಿಮಾಡುವುದುಗೌರವ ತರುವುದಿಲ್ಲ ಎಂದರು.

ಸಾಮಾಜಿಕವ್ಯವಸ್ಥೆಯನ್ನುಜನರ ಮುಂದೆ ವಾಸ್ತವವಾಗಿ ಇಡುವ ಕೆಲಸ ಮಾಡುತ್ತಲೇ ಇಲ್ಲ ನೀವು. ನೂರಾರು ವರ್ಷಗಳ ಕಾಲ ಶೂದ್ರ ಸಮುದಾಯವನ್ನು ಶಿಕ್ಷಣದಿಂದ ದೂರಇಟ್ಟಿದ್ದಕಾರಣಕ್ಕೆಅಸಮಾನತೆ ಬೆಳೆದಿದೆ.ಇದನ್ನೆಲ್ಲಾಜನರಿಗೆಅರ್ಥ ಮಾಡಿಸಬೇಕಿದೆ ಎಂದರು.

ಪತ್ರಕರ್ತರು ಮೌಢ್ಯವನ್ನು ಬೆಂಬಲಿಸಬಾರದು.ಬಸವಣ್ಣನವರು 12 ನೇ ಶತಮಾನದಲ್ಲೇ ಮೌಢ್ಯದ ವಿರುದ್ಧಚಳವಳಿನಡೆಸಿದರು.ಆದರೆ ಇವತ್ತಿನ ಪತ್ರಕರ್ತರು ಮೌಢ್ಯದ ವಿರುದ್ಧ ಜನರನ್ನು

ಎಚ್ಚರಿಸುವಕೆಲಸವನ್ನೇಮಾಡುತ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಸೆನ್ಸೇಷನ್ ಸುದ್ದಿಗಳಿಂದಸಮಾಜಕ್ಕೆಏನು ಅನುಕೂಲ ಎನ್ನುವುದನ್ನು ಯೋಚಿಸಿಎಂದುಸಲಹೆನೀಡಿದರು.

ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದಕೆ.ವಿ.ಪ್ರಭಾಕರ್, ಶಾಸಕರಾದಹರೀಶ್ ಗೌಡ, ವಿಧಾನ ಪರಿಷತ್ ಸದಸ್ಯರಾದ

ಶಿವಕುಮಾರ್, ಅಸೋಸಿಯೇಷನ್ ಅಧ್ಯಕ್ಷರಾದಪ್ರಗತಿಗೋಪಾಲಕೃಷ್ಣ ಸೇರಿಹಲವುಗಣ್ಯರುಉಪಸ್ಥಿತರಿದ್ದರು.

ಡಾ. ಅಬ್ದುಲ್ ಖದೀರಗೆ ಎ.ಎಂ.ಯು. ರಾಷ್ಟ್ರೀಯ ಪ್ರಶಸ್ತಿ ಪ್ರದಾನ

ಬೀದರ್.ಅ.18:ನಗರದಶಾಹೀನ್ ಶಿಕ್ಷಣಸಂಸ್ಥೆಗಳಸಮೂಹದಅಧ್ಯಕ್ಷ ಡಾ. ಅಬ್ದುಲ್ ಖದೀರ್ ಅವರಿಗೆ ಅಲಿಗಢ್‌ಮುಸ್ಲಿಮ್ ವಿಶ್ವವಿದ್ಯಾಲಯದ 2025ನೇ ಸಾಲಿನ ಸರ್ ಸೈಯದ್ ನ್ಯಾಷನಲ್ಎಕ್ಸ ಲೆನ್ಸ್ ಪ್ರಶಸ್ತಿ ಪ್ರದಾನ ಮಾಡಲಾಯಿತು.

ವಿಶ್ವವಿದ್ಯಾಲಯದಲ್ಲಿಶುಕ್ರವಾರ ನಡೆದಸರ್‌ಸೈಯದ್ ಅಹಮ್ಮದ್ ಖಾನ್ ಅವರ ಜನ್ಮದಿನಾಚರಣೆ ಸಮಾರಂಭದಲ್ಲಿ ಅಲಹಾಬಾದ್ ಹೈಕೋರ್ಟ್ ನ್ಯಾಯಮೂರ್ತಿ ಅಬ್ದುಲ್ ಶಹೀದ್ ಅವರು ಪ್ರಶಸ್ತಿ ಪ್ರದಾನ ಮಾಡಿದರು.

ಪ್ರಶಸ್ತಿ ರೂ. 1 ಲಕ್ಷ ರೂ. ನಗದು ಹಾಗೂ ಪ್ರಶಸ್ತಿ ಪತ್ರವನ್ನು ಒಳಗೊಂಡಿದೆ.

ಬಿ.ಇ. ಸಿವಿಲ್ ಎಂಜಿನಿಯರ್ ಆಗಿರುವ ಡಾ. ಅಬ್ದುಲ್ ಖದೀರ್ ಅವರು 17ವಿದ್ಯಾರ್ಥಿಗಳೊಂದಿಗೆ ಬೀದರನಲ್ಲಿಆರಂಭಿಸಿದಶಾಹೀನ್ ಶಿಕ್ಷಣ ಸಂಸ್ಥೆ ಈಗ

ಹೆಮ್ಮರವಾಗಿಬೆಳೆದಿದೆ. ದೇಶದ 16ರಾಜ್ಯಗಳಲ್ಲಿ110ಶಾಖೆಗಳನ್ನು ಹೊಂದಿದೆ.

ಸಂಸ್ಥೆಯಶಾಖೆಗಳಲ್ಲಿ45ಸಾವಿರ ವಿದ್ಯಾರ್ಥಿಗಳು ಘಿ

ವ್ಯಾಸಂಗಮಾಡುತ್ತಿದ್ದಾರೆ.ಐದು ಸಾವಿರಕ್ಕೂ ಅಧಿಕ ವಿದ್ಯಾರ್ಥಿಗಳು ಸರ್ಕಾರಿಕೋಟಾದಡಿವೈದ್ಯಕೀಯ ಸೀಟು

ಪಡೆದಿರುವಹಿರಿಮೆಸಂಸ್ಥೆಯದ್ದಾಗಿದೆ. ಒಂದುಮನೆಯಲ್ಲಿಮೂವರುಮಕ್ಕಳುವೈದ್ಯರಾದ300ನಿದರ್ಶನಗಳು ಸಂಸ್ಥೆಯಲ್ಲಿವೆ.ಮದರಸಾಮಕ್ಕಳನ್ನು ಮುಖ್ಯವಾಹಿನಿಗೆತರುವಲ್ಲಿಯೂ ಸಂಸ್ಥೆಪ್ರಮುಖಪಾತ್ರವಹಿಸಿದೆ.

ಶಿಕ್ಷಣ ಹಾಗೂ ಸಮಾಜ ಸೇವಾ ಕ್ಷೇತ್ರಕ್ಕೆನೀಡಿದಕೊಡುಗೆಗಾಗಿಅಬ್ದುಲ್ ಖದೀರ್

ಅವರಿಗೆ ಅಲಿಗಢ್ ಮುಸ್ಲಿಮ್ ವಿಶ್ವವಿದ್ಯಾಲಯದ ಪ್ರಶಸ್ತಿ ಹುಡುಕಿಕೊಂಡು ಬಂದಿದೆ.

ಅಬ್ದುಲ್ ಖದೀರ್ ಅವರಿಗೆ ಗುಲಬರ್ಗಾ ವಿಶ್ವವಿದ್ಯಾಲಯದ ಗೌರವ ಡಾಕ್ಟರೇಟ್, ಉರ್ದು ಅಕಾಡೆಮಿಪ್ರಶಸ್ತಿ, ಶಾಹೀನ್ ಶಿಕ್ಷಣ ಸಂಸ್ಥೆಗೆಕರ್ನಾಟಕರಾಜ್ಯೋತ್ಸವ ಸೇರಿಅನೇಕಪ್ರಶಸ್ತಿ-ಸಮ್ಮಾನಗಳು ಸಂದಿವೆ.

ಪ್ರಶಸ್ತಿಪ್ರದಾನಸಮಾರಂಭದಲ್ಲಿ ವಿಶ್ವವಿದ್ಯಾಲಯದಕುಲಪತಿನೈಮಾ ಖಾತೂನ್, ಹಿರಿಯಅಧಿಕಾರಿಗಳು, ಗಣ್ಯರು ಹಾಜರಿದ್ದರು.

ಪಕ್ಷನಿಷ್ಠೆಗೆಫಲಸಿಗಲಿದೆ: ಡಿಕೆಶಿಗೆಖರ್ಗೆಅಭಯ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಅ.18: ರಾಜ್ಯ ರಾಜಕೀಯದಲ್ಲಿನವೆಂಬರ್‌ಕ್ರಾಂತಿಯ ಚರ್ಚೆನಡೀತಿದೆ. ಪವರ್‌ಶೇರಿಂಗ್, ಸಂಪುಟಪುನಾರಚನೆಸೇರಿಹಲವಾರು ಮಾತುಗಳುಕೇಳಿಬರುತ್ತಿವೆ.ಈನಡುವೆ ತಡರಾತ್ರಿಡಿಸಿಎಂಡಿಕೆಶಿವಕುಮಾರ್, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನುಭೇಟಿಯಾಗಿದ್ದಾರೆ. ಸದಾಶಿವನಗರದಲ್ಲಿರುವ ಖರ್ಗೆ ಅವರ ನಿವಾಸದಲ್ಲಿ ತಡರಾತ್ರಿ ಡಿಕೆಶಿಭೇಟಿಯಾಗಿದ್ದು,ಸುಮಾರು 1ಗಂಟೆಗೂಹೆಚ್ಚುಕಾಲಮಾತುಕತೆ ನಡೆಸಿದ್ದಾರೆ.ಹೀಗಾಗಿನವೆಂಬರ್‌ಕ್ರಾಂತಿ ಬದಲಿಗೆಈಶಾಂತಿಯ ಬೆಳವಣಿಗೆ ಹೆಚ್ಚುಮಹತ್ವಪಡೆದುಕೊಂಡಿದೆ. ಮಾತುಕತೆ ವೇಳೆ ಮಲ್ಲಿಕಾರ್ಜುನ ಖರ್ಗೆ ಅವರು ಡಿಕೆಶಿಗೆ ಅಭಯ ನೀಡಿದ್ದಾರೆಂದು ತಿಳಿದುಬಂದಿದೆ. ಪಕ್ಷ ನಿಷ್ಠೆ ಹೈಕಮಾಂಡ್ ನಿಷ್ಠೆಗೆ ತಕ್ಕ ಪ್ರತಿಫಲ ಸಿಗಲಿದೆ. ಸೂಕ್ತ ಸಮಯದವರೆಗೆ ತಾಳ್ಮೆಯಿಂದ ಇರಿ ಎಂದು ಸಲಹೆ ನೀಡಿದ್ದಾರೆ

ಎಂದು ಆಪ್ತ ಮೂಲಗಳು ತಿಳಿಸಿವೆ. ಹೈಕಮಾಂಡ್ ರಾಜ್ಯದ ಎಲ್ಲಾಬೆಳವಣಿಗೆಗಳನ್ನ ಸೂಕ್ಷ್ಮವಾಗಿ ಗಮನಿಸುತ್ತಿದೆ. ಸೂಕ್ತಸಮಯದಲ್ಲಿ ಸೂಕ್ತನಿರ್ಧಾರಕೈಗೊಳ್ಳುತ್ತದೆ. ಬಿಹಾರ ಚುನಾವಣೆಮುಗಿದಬಳಿಕಎಲ್ಲರೂ ಕುಳಿತು ಮಾತನಾಡೋಣ. ಎಲ್ಲಾ ವಿಚಾರದ ಬಗ್ಗೆ ಒಂದು ಕ್ಲಾರಿಟಿಗೆ ಬರೋಣ. ನಿಮ್ಮ ಪಕ್ಷ ನಿಷ್ಠೆ ಹೈಕಮಾಂಡ್ ನಿಷ್ಠೆಗೆತಕ್ಕಪ್ರತಿಫಲ ಸಿಗಲಿದೆ. ಸೂಕ್ತ ಸಮಯದವರೆಗೆ ತಾಳ್ಮೆಯಿಂದಇರಿ.ಹೈಕಮಾಂಡ್ ಮನಸ್ಸಿ ನಲ್ಲೂಒಂದಷ್ಟುವಿಚಾರಗಳಿವೆ ಎಲ್ಲವೂಬಿಹಾರಚುನಾವಣೆಬಳಿಕ ಮಾತನಾಡೋಣ ಎಂದು ಖರ್ಗೆ ಅವರುಅಭಯನೀಡಿದ್ದಾರೆ.ಬಿಹಾರ ವಿಧಾನಸಭಾ ಎಲೆಕ್ಷನ್ ಮುಗಿದ ಮೇಲೆ ಕಾಂಗ್ರೆಸ್ ಹೈಕಮಾಂಡ್ ಸಂಧಾನ ಸೂತ್ರಕ್ಕೆ ಮುಂದಾಗೋ ಸಾಧ್ಯತೆಗಳಿವೆ.

ಮುಖ್ಯಮಂತ್ರಿಸಿದ್ದರಾಮಯ್ಯ ಹಾಗೂಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ಇಬ್ಬರೂಒಪ್ಪಿದಪಕ್ಷದಲ್ಲಿ ಸಂಪುಟ ಪುನಾರಚನೆ ಮಾಡೋ ಸಾಧ್ಯತೆಗಳಿವೆ.ಸುಮಾರು17ರಿಂದ 18ಸಚಿವರನ್ನುಸಂಪುಟದಿಂದಕೈಬಿಟ್ಟು ಪ್ರಾದೇಶಿಕ ಸಮಾನತೆ, ಶಾಸಕರ ಹಿರಿತನ, ಜಾತಿಲೆಕ್ಕಾಚಾರ, ಸ್ಥಳೀಯ ನಾಯಕತ್ವ ಎಲ್ಲವನ್ನೂ ಪರಿಗಣಿಸಿ ಹಿರಿಯಶಾಸಕರಿಗೆಆದ್ಯತೆಕೊಡೋ ಸಾಧ್ಯತೆಗಳಿವೆ ಎನ್ನಲಾಗಿದೆ.

ಚುಚ್ಚುಮದ್ದು ಅಡ್ಡ ಪರಿಣಾಮ ಮಂಜುಳಾ ವಿರುದ್ಧಕ್ರಮಕ್ಕೆಮುದ್ನಾಳ ಆಗ್ರಹ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಜಿನಕೇರಾ ಆಯುಷ್ಮಾನ್ ಆರೋಗ್ಯ ಕೇಂದ್ರದ ಊಔಹನುಮಂತರಾಯಮತ್ತುಊಆಔಮಂಜುಳಾಇವರ ವಿರುದ್ಧ ತಕ್ಷಣ ಅಮಾನತ್ತು ಕ್ರಮ ಕೈಗೊಳ್ಳಬೇಕು ಹಾಗೂ ಜಿಲ್ಲಾಆರೋಗ್ಯಾಧಿಕಾರಿಡಾ।। ಮಹೇಶ್ ಬಿರಾದಾರ್ ಅವರ ವಿರುದ್ಧವೂಸೂಕ್ತಕ್ರಮಕೈಗೊಳ್ಳಬೇಕೆಂದುಕರುನಾಡರಕ್ಷಣಾ ವೇದಿಕೆಯಾದಗಿರಿಘಟಕದಅಧ್ಯಕ್ಷರವಿಕೆ.ಮುದ್ನಾಳಅವರು ಆಗ್ರಹಿಸಿದ್ದಾರೆ.

ಇಲ್ಲಿನಪತ್ರಿಕಾಭವನದಲ್ಲಿಸುದ್ದಿಗೋಷ್ಠಿನಡೆಸಿಮಾತನಾಡಿದ ಅವರು, ಆ.22 ರಂದು ಜಿನಕೇರಾ ಗ್ರಾಮದ ಸರ್ಕಾರಿ ಪ್ರಾಥಮಿಕಶಾಲೆಯಲ್ಲಿನಡೆದಆಖಿಮತ್ತುಖಿಆಚುಚ್ಚುಮದ್ದು ಕಾರ್ಯಕ್ರಮದಲ್ಲಿ ಹನುಮಂತರಾಯ ಮತ್ತು ಮಂಜುಳಾ ಇವರು ಆಡಳಿತ ವೈದ್ಯಾಧಿಕಾರಿ ಡಾ।। ಯಶವಂತ ಅವರ ಅನುಮತಿ ಇಲ್ಲದೆ ಮಕ್ಕಳಿಗೆ ಚುಚ್ಚುಮದ್ದು ನೀಡಿದ್ದು, ಅದರ ಪರಿಣಾಮವಾಗಿ43 ಮಕ್ಕಳು ಹಾಗೂ ನಾಲ್ವರು ಶಿಕ್ಷಕರು ಅಡ್ಡ ಪರಿಣಾಮ ಅನುಭವಿಸಿದ್ದಾರೆ ಎಂದು ಹೇಳಿದರು.

ಘಟನೆ ಬಳಿಕ ವೈದ್ಯಾಧಿಕಾರಿಗಳು ಆಊಔ ಮಹೇಶ್ ಬಿರಾದಾರ್ ಅವರಿಗೆವರದಿಸಲ್ಲಿಸಿದರೂ, ತಪ್ಪಿತಸ್ಥಸಿಬ್ಬಂದಿಗಳ ವಿರುದ್ಧ ಕ್ರಮ ಕೈಗೊಳ್ಳದೇ ತಿರುಗಿ ಡಾ।। ಯಶವಂತ ಅವರ ಮೇಲೆಯೇ ಮಾನಸಿಕ ಒತ್ತಡ ಹೇರುತ್ತಿರುವುದಾಗಿ ಅವರು ಆರೋಪಿಸಿದರು.

ಹನುಮಂತರಾಯಇವರುಸರ್ಕಾರಿಕರ್ತವ್ಯಸಮಯದಲ್ಲಿ ಖಾಸಗಿ ಪ್ರಾಕ್ಟೀಸ್ ನಡೆಸಿ, ಸರ್ಕಾರಿ ಔಷಧಿಗಳನ್ನು ದುರುಪಯೋಗಪಡಿಸಿಕೊಂಡಿದ್ದಾರೆ ಎಂಬ ಗಂಭೀರ ಆರೋಪವೂ ಮನವಿ ಪತ್ರದಲ್ಲಿ ಉಲ್ಲೇಖಿಸಲಾಗಿದೆ ಎಂದು ಅವರು ಹೇಳಿದರು.

ಈ ಘಟನೆಯಲ್ಲಿ ನಿರ್ಲಕ್ಷ್ಯ ತೋರಿದ ಹನುಮಂತರಾಯ ಮತ್ತು ಮಂಜುಳಾ ಅವರನ್ನು ಅಮಾನತ್ತು ಮಾಡಬೇಕು. ಜೊತೆಗೆ ಆಊಔ ಮಹೇಶ್ ಬಿರಾದಾರ್ ಅವರ ವಿರುದ್ಧವೂ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಈ ಕುರಿತು ನಾವು ಈಗಾಗಲೇ ಜಿಲ್ಲಾಧಿಕಾರಿ ಯಾದಗಿರಿ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಆಯುಕ್ತರಿಗೆ ಮನವಿ ಸಲ್ಲಿಸಿದ್ದೇವೆ ಎಂದು ರವಿ ಮುದ್ನಾಳ ಮಾಹಿತಿ ನೀಡಿದರು.

ಡಾ।। ಯಶವಂತ ಅವರು ಕರ್ತವ್ಯನಿಷ್ಠ ವೈದ್ಯರಾಗಿದ್ದು, ಅವರ ವಿರುದ್ಧ ನಡೆಯುತ್ತಿರುವ ಮಾನಸಿಕ ಕಿರುಕುಳ ತಕ್ಷಣ ನಿಲ್ಲಿಸಬೇಕು.

ತಪ್ಪಿತಸ್ಥರ ವಿರುದ್ಧಕ್ರಮಕೈಗೊಳ್ಳದಿದ್ದರೆಕರುನಾಡರಕ್ಷಣಾ ವೇದಿಕೆ ಹೋರಾಟ ಆರಂಭಿಸಲಿದೆ ಎಂದು ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿಜಿಲ್ಲಾಉಪಾಧ್ಯಕ್ಷಶಂಕರಗೌಡಯಲಸತ್ತಿ, ವಿಶ್ವನಾಥ ತಂಗಡಗಿ, ಅಶೋಕರೆಡ್ಡಿ ವಂಕಸಂಬರ, ಸಿದ್ದು ಸಾಹುಕಾರ ಮಾದವಾರ, ರವಿ ಪೂಜಾರಿ ಬನಪ್ಪ ಯಲಸತ್ತಿ, ವಸಂತಕುಮಾರ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಕುಖ್ಯಾತ ರೌಡಿ ಯುನಸ್ ಎನ್‌ಕೌಂಟರ್ ಗೆ ಬಲಿ

ಮಲ್ಲಮ್ಮ ನುಡಿ ವಾರ್ತೆ

ವಿಜಯಪುರ,ಅ.18–ಬಂಧನಕ್ಕೆ ತೆರಳಿದ್ದವೇಳೆಪೊಲೀಸರಮೇಲೆಹಲ್ಲೆ ನಡೆಸಿ ಪರಾರಿಯಾಗಲು ಯತ್ನಿಸಿದ ಕುಖ್ಯಾತರೌಡಿಯುನಸ್‌ಪಟೇಲ್ ಎನ್‌ಕೌಂಟರ್‌ಗೆಬಲಿಯಾಗಿರುವಸಿಂದಗಿ ತಾಲೂಕಿನ ರಾಂಪೂರ ಗ್ರಾಮದಲ್ಲಿ ಹೊರ ಭಾಗದಲ್ಲಿ ನಡೆದಿದೆ.

ನಗರದ ನಟೋರಿಯಸ್ ರೌಡಿ ಯುನಸ್‌ಪಟೇಲ್ (35)ಪೊಲೀಸರು ಆತ್ಮರಕ್ಷಣೆಗೆಹಾರಿಸಿದಗುಂಡೇಟಿಗೆ ಬಲಿಯಾಗಿದ್ದಾನೆ.ನಗರದಗಾಂಧಿಚೌಕ್ ವ್ಯಾಪ್ತಿಯಲ್ಲಿಅ.17ರಂದುಒರ್ವನಿಗೆ ಚಾಕು ತೋರಿಸಿ 25 ಸಾವಿರ ಹಣ ಸುಲಿಗೆಮಾಡಿ,ಆತನಸ್ಕೂಟಿಯನ್ನೇ ದೋಚಿ ರೌಡಿ ಯುನಸ್ ಪಟೇಲ್ ಪರಾರಿಯಾಗಿದ್ದು,ಈ ಸಂಬಂಧ ಗಾಂಧಿಚೌಕ್‌ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ಆರೋಪಿ ಆಲಮೇಲ ತಾಲೂಕಿನ ದೇವಣಗಾಂವ್‌ಗ್ರಾಮದತ್ತತೆರಳುತ್ತಿರುವ ಖಚಿತವಾದಮಾಹಿತಿಯನ್ನುಇಂದುಬೆಳಿಗ್ಗೆ ಆಧರಿಸಿಬಂಧಿಸಲುಕಾರ್ಯಾಚರಣೆ ಕೈಗೊಂಡಿದ್ದಾರೆ.

ಸಿಂದಗಿ ತಾಲೂಕಿನ ರಾಂಪುರ್ ಬಳಿ ಆರೋಪಿ ಯುನಸ್‌ನನ್ನು ಬೆನ್ನತ್ತಿ ಬಂಧಿಸಲು ಮುಂದಾದಾಗ ಇಬ್ಬರುಕಾನ್ಸ್ ಟೇಬಲ್‌ಹಾಗೂಇನ್ ಸ್ಪೆಕ್ಟರ್‌ಮೇಲೆಆರೋಪಿದಾಳಿನಡೆಸಿ ಪರಾರಿಯಾಗಲುಯತ್ನಿಸಿದ್ದಾನೆ.ಆಗ ಆಯತಪ್ಪಿ ಇನ್ಸ್ ಪೆಕ್ಟರ್ ಪ್ರದೀಪ್ ತಳಕೇರಿಬಿದ್ದಿದ್ದು,ಗಾಳಿಯಲ್ಲಿಗುಂಡು ಹಾರಿಸಿಶರಣಾಗುವಂತೆಇನ್ಸ್ ಪೆಕ್ಟರ್ ಎಚ್ಚರಿಕೆನೀಡಿದ್ದಾರೆ.ಆದರೂಯುನಸ್ ಹಲ್ಲೆಗೆಯತ್ನಿಸಿದಾಗಆತ್ಮರಕ್ಷಣೆಗಾಗಿ ಆರೋಪಿಯುನಸ್‌ನತ್ರಇನ್ಸ್ ಪೆಕ್ಟರ್ ಗುಂಡುಹಾರಿಸಿದಾಗಗುಂಡೇಟುತಗುಲಿ ಕುಸಿದು ಬಿದ್ದಿದ್ದಾನೆ.ಗಂಭೀರವಾಗಿ ಗಾಯಗೊಂಡ ಆತನನ್ನು ಸಿಂದಗಿ ತಾಲೂಕುಆಸ್ಪತ್ರೆಯಲ್ಲಿಪ್ರಾಥಮಿಕ ಚಿಕಿತ್ಸೆ ನೀಡಿನಂತರಜಿಲ್ಲಾಆಸ್ಪತ್ರೆಗೆ ರವಾನಿಸಲಾಗಿದೆ. ಜಿಲ್ಲಾಸ್ಪತ್ರೆಯ ವೈದ್ಯರುಆರೋಪಿಮೃತಪಟ್ಟಿದ್ದಾಗಿ ತಿಳಿಸಿದ್ದಾರೆಎಂದು ಎಸ್ ಪಿ ಲಕ್ಷ್ಮಣ ನಿಂಬರಗಿ ತಿಳಿಸಿದ್ದಾರೆ.

ಯುನಸ್ ಮೇಲೆ ಎರಡು ಕೊಲೆ ಪ್ರಕರಣ,ಒಂದುಕೊಲೆಯತ್ನ,ಸೇರಿದಂತೆ ಒಟ್ಟು12ಪ್ರಕರಣಗಳಿವೆ.ಈಕುರಿತು ತನಿಖೆ ಮುಂದುವರಿಯುತ್ತಿದೆ.

ಅದ್ದೂರಿಯಾಗಿ ಜರುಗಿದ ಆರ್‌ಎಸ್‌ಎಸ್ ಪಥ ಸಂಚಲನ

ಮಲ್ಲಮ್ಮ ನುಡಿ ವಾರ್ತೆ

ಶಹಾಪುರ:ಅ,18: ನಗರದಲ್ಲಿ ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಶತಾಬ್ದಿವರ್ಷದಅಂಗವಾಗಿನಗರದಲ್ಲಿ ಎಂಟನೂರಕ್ಕಿಂತಲೂ ಹೆಚ್ಚಿನ ಗಣವೇಷಧಾರಿಗಳಿಂದ ಆಕರ್ಷಕ ಪಥ ಸಂಚಲನ ನಡೆಯಿತು.

ಶನಿವಾರಮಧ್ಯಾಹ್ನ 4:30ಗಂಟೆಗೆ ಬೋರಕಾಶಾಲೆಯಿಂದಪ್ರಾರಂಭವಾದ ಸಂಚಲನ,ವಾಲ್ಮೀಕಿಚೌಕ್‌ಮುಖಾಂತರ, ಬಸವೇಶ್ವರ ಚೌಕ್, ಮೋಚಿಗಡ್ಡಾ, ಹಳಪೇಟೆಯ ಗಂಗಾನಗರದ ಮೂಲಕ, ಮತ್ತೆ ಮೋಚಿಗಡ್ಡಾ ಮಾರ್ಗವಾಗಿ, ಗಾಂಧಿಚೌಕ್, ದಿಗ್ಗಿ ಅಗಸಿ, ಚರಬಸವೇಶ್ವರ ಕಮಾನ, ಹಳೆಬಸ್‌ನಿಲ್ದಾಣ, ಬಸವೇಶ್ವರಚೌಕ್ ಮುಖಾಂತರಮತ್ತೆಬೋರಕಾಶಾಲೆಯ ಆವರಣದಲ್ಲಿ ಸಂಪನ್ನಗೊಂಡಿತು.

ದಾರಿಯುದ್ದಕ್ಕೂಗಣವೇಷಧಾರಿಗಳ ಪಥಸಂಚಲನನೋಡಲುಸಾವಿರಾರು ಮಹಿಳೆಯರು, ಮಕ್ಕಳು ಹಾಗೂ ಯುವಕರು ರಸ್ತೆ ಎರಡು ಬದಿಗಳಲ್ಲಿ ಜಮಾಯಿಸಿದರು. ಹಲವು ಕಡೆ ಸಾರ್ವಜನಿಕರು ಹೂವುಗಳನ್ನು ಸ್ವಯಂಸೇವಕರಮೇಲೆ,ಭಗವಾಧ್ವಜ, ಹಾಗೂಭಾರತಮಾತೆಗೆ,ಡಾ.ಗುರೂಜಿ, ಡಾ.ಹೆಡ್ಗೇವಾರ್ ಅವರ ಭಾವಚಿತ್ರಕ್ಕೆ ಹೂವುಅರ್ಪಿಸುವಮೂಲಕಗೌರವ ಸಲ್ಲಿಸಿದರು. ಮೆರವಣಿಗೆಯಲ್ಲಿ ಭಾರತ ಮಾತಾ ಕಿ ಜೈ, ಸೇರಿದಂತೆ ಮಹಾಪುರಷರ ಘೋಷಣೆಗಳು ಮೊಳಗಿದವು.ದಾರಿಯುದ್ದಕ್ಕೂಅಲ್ಲಲ್ಲಿ ಬಾಲಕರು ಕ್ರಾಂತಿಕಾರಿ ಸ್ವಾತಂತ್ರ್ಯ ಹೋರಾಟಗಾರರ,ಮಹಾಪುರುಷರವೇಷ ಭೂಷಣಹಾಕಿನಿಂತುಗಮನಸೆಳೆದು ಪಥಸಂಚಲನಕ್ಕೆಮತ್ತಷ್ಟುಕಳೆತಂದರು. ಗುಂಬಳಾಪುರಮಠದಪೂಜ್ಯರಾದ ಷ.ಬ್ರ.ಸಿದ್ದೇಶ್ವರಶಿವಾಚಾರ್ಯರು, ಕುಂಬಾರಓಣಿಮಠದಪೂಜ್ಯರಾದಷ.ಬ್ರ. ಸೂಗುರೇಶ್ವರದೇವರು,ಚರಬಸವೇಶ್ವರ ಸಂಸ್ಥಾನದ ಪೂಜ್ಯರಾಧವೇ.ಮೂ. ಬಸವಯ್ಯಪೂಜ್ಯರು,ಸೇರಿದಂತೆಅಪಾರ ಸಂಖ್ಯೆಯಗಣ್ಯರುಪಾಲ್ಗೊಂಡಿದ್ದರು. ಎಲ್ಲೆಡೆ ಪೋಲಿಸ್ ಬಂದೋಬಸ್ತ್ ಕಲ್ಪಿಸಲಾಗಿತ್ತು,ಡಿವಾಯ್‌ಎಸ್‌ಪಿ,ಪಿಐ ಸೇರಿದಂತೆ ಪೋಲಿಸ್ ಸಿಬ್ಬಂದಿಗಳು ಕಟ್ಟೆಚ್ಚರವಹಿಸಿದ್ದರು. ಅಚ್ಚುಕಟ್ಟಾಗಿ ಪಥಸಂಚಲನಮುಕ್ತಾಯವಾಯಿತು.

ಮಹಿಳಾ ಪಿಎಸ್‌ಐಗೆ ಜೀವಬೆದರಿಕೆ ಹಾಕಿದ ವ್ಯಕ್ತಿಗೆ ಶಿಕ್ಷೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ.ಅ.18: ವ್ಯಕ್ತಿಯೊಬ್ಬ ಮಹಿಳಾ ಪಿಎಸ್‌ಐಗೆ ನಿಂದಿಸಿ ಜೀವ ಬೆದರಿಕೆ ಹಾಕಿದ ಆರೋಪ ಸಾಬೀತಾದ್ದರಿಂದ ಚಿ